ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 71
1–9–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 71

## ಅನಧಿಕೃತ ಪತ್ರ ಬರಹಗಾರರ ನಿರ್ಬಂಧಕ್ಕೆ ಒತ್ತಾಯ

**ದಾವಣಗೆರೆ:** ನೋಂದಣಿ ಇಲಾಖೆಯಲ್ಲಿ ಅನಧಿಕೃತ ಪತ್ರ ಬರಹಗಾರರ ಸಂಖ್ಯೆ ಹೆಚ್ಚಾಗಿದ್ದು ಕೂಡಲೇ ಎಲ್ಲಾ ನೋಂದಣಿ ಇಲಾಖೆಯಲ್ಲಿ ನಿರ್ಬಂಧಿಸಬೇಕೆಂದು ಕರ್ನಾಟಕ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಿಗೆ ಪಡೆದ (ದಸ್ತು) ಪತ್ರ ಬರಹಗಾರರ ಒಕ್ಕೂಟ ಸರ್ಕಾರಕ್ಕೆ ಒತ್ತಾಯಿಸಿದೆ.

ಅನಧಿಕೃತ ಪತ್ರ ಬರಹಗಾರರು ನೋಂದಣಿ ಪ್ರಕ್ರಿಯೆಯಲ್ಲಿ ಸರಿಯಾದ ಮಾರ್ಗಸೂಚಿ ದರವನ್ನು ಪಾಲನೆ ಮಾಡದೆ ಇರುವುದರಿಂದ ಸರ್ಕಾರಕ್ಕೆ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕ ವ್ಯತ್ಯಾಸವಾಗುತ್ತಿದೆ. ಆದ್ದರಿಂದ ಅನಧಿಕೃತ ಪತ್ರ ಬರಹಗಾರರನ್ನು ನಿರ್ಬಂಧಿಸುವಂತೆ ಪತ್ರಿಕಾ ಹೇಳಿಕೆಯಲ್ಲಿ ಒಕ್ಕೂಟದ ಅಧ್ಯಕ್ಷ ಡಿ.ಕೆ. ಸಂಗಮೇಶ ಎಲಿಗಾರ್ ಕೋರಿದ್ದಾರೆ.

ಇತ್ತೀಚೆಗೆ ರಾಜ್ಯ ಸರ್ಕಾರ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಈ ಹಿಂದೆ ಪ್ರಮಾಣ ಪತ್ರಕ್ಕೆ ಇದ್ದ 20 ರೂ., ಬದಲಾಗಿ 100ಕ್ಕೆ ಹೆಚ್ಚಿಸಿದೆ. ಆಸ್ತಿ ಖರೀದಿಯ ಸಮಯದಲ್ಲಿ ಪರಸ್ಪರ ಸಾಮಾನ್ಯ ಒಡಂಬಡಿಕೆ ಕರಾರು ಪತ್ರಕ್ಕೆ ಇದ್ದ 200 ರೂ., ಮುದ್ರಾಂಕ ಶುಲ್ಕವನ್ನು 500 ರೂ., ಗಳಿಗೆ ಮತ್ತು ನೋಂದಣಿ ಕ್ರಯದ ಕರಾರು ಪತ್ರಕ್ಕೆ ಮತ್ತು ಬ್ಯಾಂಕ್‌ನಲ್ಲಿ ಸಾಲ ಪಡೆಯುವ ಅಡಮಾನ ಪತ್ರಕ್ಕೆ ಮುದ್ರಾಂಕ ಶುಲ್ಕ ಶೇ.0.2 ಇದ್ದ ಮುದ್ರಾಂಕ ಶುಲ್ಕವನ್ನು ಶೇ. 0.5 ಏರಿಸಿರುವುದರಿಂದ ರಾಜ್ಯ ಸರ್ಕಾರಕ್ಕೆ ಕೋಟಿಗಟ್ಟಲೆ ಅದಾಯ ಬಂದಿರುತ್ತಿದ್ದು, ಅನಧಿಕೃತ ಪತ್ರ ಬರಹಗಾರರಿಂದ ಸರ್ಕಾರಕ್ಕೆ ಸೇರುವ ಹಣದ ವ್ಯತ್ಯಾಸ ಉಂಟಾಗುತ್ತದೆ ಎಂದು ಅಭಿಪ್ರಾಯಿಸಿದ್ದಾರೆ.

ಆದ್ದರಿಂದ ಸರ್ಕಾರದಿಂದ ಪತ್ರ ಬರಹಗಾರರಿಗೆ ಪ್ರತ್ಯೇಕ ಡೀಡ್ ರೈಟರ್ ಲಾಗಿನ್ ನೀಡಿದಲ್ಲಿ ಅನಧಿಕೃತ ಪತ್ರ ಬರಹಗಾರರ ಹಾವಳಿಯನ್ನು ತಪ್ಪಿಸಬಹುದು ಹಾಗೂ ಕಾನೂನು ಬದ್ಧವಾಗಿ ಸರ್ಕಾರಕ್ಕೆ ಸಲ್ಲತಕ್ಕ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕ ಸರಿಯಾದ ಕ್ರಮದಲ್ಲಿ ಭರಿಸಲು ಸಾಧ್ಯವಾಗುತ್ತದೆ. ಮತ್ತು ಯಾವುದೇ ರೀತಿಯಿಂದ ಲೋಪ ದೋಷಗಳು ಆಗುವುದಿಲ್ಲ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಉಡುಪಿ: ನಾಪತ್ತೆಯಾಗಿದ್ದ ಬೆಂಗಳೂರು ಮಹಿಳೆಯ ಶವ ಸೌಪರ್ಣಿಕಾ ನದಿಯಲ್ಲಿ ಪತ್ತೆ!



**ಉಡುಪಿ:** ಬೆಂಗಳೂರಿನ ತ್ಯಾಗರಾಜ ನಗರದ ನಿವಾಸಿ 45 ವರ್ಷದ ವಸುಧಾ ಚಕ್ರವರ್ತಿ ಉಡುಪಿಯ ಕೊಲ್ಲೂರಿಗೆ ತೆರಳಿದ್ದರು. ಕೊಲ್ಲೂರಿನ ವಸತಿಗೃಹವೊಂದರ ಬಳಿ ಕಾರು ನಿಲ್ಲಿಸಿ ನಾಪತ್ತೆಯಾಗಿದ್ದ ವಸುಧಾ ಮೃತದೇಹ ಸೌಪರ್ಣಿಕಾ ನದಿಯಲ್ಲಿ ಪತ್ತೆಯಾಗಿದೆ. ಆಗಸ್ಟ್ 27ರಂದು ಕಾರಿನಲ್ಲಿ ಕೊಲ್ಲೂರಿಗೆ ಬಂದಿದ್ದರು. ಇನ್ನು ಕರೆ ಮಾಡಿದಾಗ ಮಗಳು ಕರೆ ಸ್ವೀಕರಿಸಲಿಲ್ಲ ಎಂದು ಆಕೆಯ ತಾಯಿ ಆ. 29ರಂದು ಕೊಲ್ಲೂರಿಗೆ ಬಂದು ದೇವಸ್ಥಾನದ ಸಿಬ್ಬಂದಿಗೆ ವಿಚಾರ ತಿಳಿಸಿದ್ದರು.

ವಸತಿ ಗೃಹದ ಬಳಿ ಅವರ ಕಾರು ಪತ್ತೆಯಾಗಿ–ತ್ತು. ಹೀಗಾಗಿ ಕೊಲ್ಲೂರು ಠಾಣೆಯಲ್ಲಿ ಮಹಿಳೆ ನಾಪತ್ತೆ ಕುರಿತು ಪ್ರಕರಣ ದಾಖಲಿಸಿಕೊಂಡು ಸೌಪರ್ಣಿಕಾ ನದಿ ಪರಿಸರದಲ್ಲಿ ಹುಡುಕಾಟ ನಡೆಸಲಾಗಿತ್ತು. ಇದೀಗ ಎರಡು ದಿನಗಳ ಬಳಿಕ ಮಾವಿನಕಾರು ಎಂಬಲ್ಲಿ ನದಿಯಲ್ಲಿ ಶವ ಪತ್ತೆಯಾಗಿದೆ.

ವಸುಧಾ ಅವರು ಈಜು ಪಟುವಾಗಿದ್ದು ವೇಗವಾಗಿ ಹರಿಯುತ್ತಿದ್ದ ಸೌಪರ್ಣಿಕಾ ನದಿಯಲ್ಲಿ ಸ್ನಾನಕ್ಕಿಳಿದ ಸಂದರ್ಭ ನೀರಿನಲ್ಲಿ ಕೊಚ್ಚಿ ಹೋಗಿದ್ದರೇ, ಆತ್ಮಹತ್ಯೆ ಮಾಡಿಕೊಂಡಿದ್ದಾರೆಯೇ ಎಂಬುದು ತಿಳಿದುಬಂದಿಲ್ಲ.

# ದಸರಾ ನಾಡ ಹಬ್ಬ, ಎಲ್ಲಾ ಧರ್ಮದವರಿಂದ ಆಚರಣೆ : ಮುಖ್ಯಮಂತ್ರಿ ಸಿದ್ದರಾಮಯ್ಯ

**ಮೈಸೂರು :** ದಸರಾ ನಾಡ ಹಬ್ಬವಾಗಿದ್ದು ಇದನ್ನು ಎಲ್ಲಾ ಧರ್ಮದವರು ಆಚರಣೆ ಮಾಡುತ್ತಾರೆ. ಕಾರ್ಯಕ್ರಮ ಉದ್ಘಾಟನೆ ಮಾಡಲು ನಿರ್ದಿಷ್ಟ ಸಮುದಾಯದವರು ಇರಬೇಕೆಂಬುವುದು ಮತಾಂಧರ ವಾದ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಸರಾ ಆಚರಣೆಯ ಉನ್ನತ ಅಧಿಕಾರ ಸಮಿತಿ ಉದ್ಘಾಟಕರನ್ನು ಆಯ್ಕೆ ಮಾಡಲು ನನಗೆ ಅವಕಾಶ ನೀಡಿತ್ತು. ಈ ಹಿಂದೆಯೂ ಮುಸ್ಲಿಂ ಸಮುದಾಯ ಕವಿ ನಿಸಾರ್ ಅಹಮದ್




ಅವರಿಂದ ದಸರಾ ಉದ್ಘಾಟನೆ ಮಾಡಿಸಲಾಗಿತ್ತು. ಈ ಬಾರಿ ಬೂಕರ್ ಪ್ರಶಸ್ತಿ ವಿಜೇತರಾದ ಬಾನುಮುಷ್ತಾಕ್‌ರನ್ನು ಆಹ್ವಾನಿಸಲು ತಾವು ನಿರ್ಧಾರ ತೆಗೆದುಕೊಂಡಿದ್ದು ಸರಿಯಾಗಿದೆ ಎಂದಿದ್ದಾರೆ.

ಹಿಂದು, ಮುಸ್ಲಿಂ, ಕ್ರಿಶ್ಚಿಯನ್, ಜೈನ, ಬೌದ್ಧ ಸೇರಿದಂತೆ ಎಲ್ಲಾ ಧರ್ಮದವರು ನಾಡ ಹಬ್ಬ ದಸರಾವನ್ನು ಆಚರಣೆ ಮಾಡುತ್ತಾರೆ. ಈ ಹಿಂದೆ ಮಹಾರಾಜರ ಕಾಲದಲ್ಲಿ ಹೈದರಾಲಿ, ಟಿಪ್ಪು ದಸರಾ ಆಚರಣೆ ಮಾಡುತ್ತಿದ್ದರು. ನಂತರ ಮಿರ್ಜಾ ಇಸಾಯಿಲ್ ದಿವಾನರಾಗಿದ್ದ ಕಾಲದಲ್ಲೂ ದಸರಾ ವಿಜೃಂಭಣೆಯಿಂದ ನಡೆದಿತ್ತು. ಇದು ಧರ್ಮಾತೀತ ಹಾಗೂ ಜಾತ್ಯತೀತವಾದ ಹಬ್ಬ ಎಂದು ಹೇಳಿದರು.

ಬೂಕರ್ ಪ್ರಶಸ್ತಿ ವಿಜೇತರು ನಮ್ಮಲ್ಲಿ ಬಹಳ ಕಡಿಮೆ. ಬಹುಶಃ ಬಾನುಮುಷ್ತಾಕ್ ಎರಡನೇಯವರು. ಧರ್ಮಾಂಧರಿಗೆ ಇತಿಹಾಸ ಗೊತ್ತಿಲ್ಲ. ಅಂತಹವರು ಮಾತ್ರ ಟೀಕೆ ಮಾಡುತಾರೆ.



ಚಿತ್ರದುರ್ಗದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನಂ ಅವರನ್ನು ಹಿರಿಯ ಪತ್ರಕರ್ತ ತಾರಾನಾಥ್ ಹಾಗೂ ಮಲ್ಲಿಕಾರ್ಜುನ್ ಕಬ್ಬೂರು ಗೌರವಿಸಿದರು. ಪಾತ್ರಕರತಾರದ ಜೈಮುನಿ, ರವಿಕುಮಾರ್, ಮೈಲಾರಪ್ಪ, ದಿನೇಶ್ ಗೌಡಿಗೆರೆ ಇದ್ದರು.

# ನೀನು ಬರೆಯುತ್ತಿದ್ದಲ್ಲ 'ಬೆತ್ತಲೆ ಪ್ರಪಂಚ'ಕ್ಕೆ ಬೂಕರ್ ಬಂತಾ? ಹೊಟ್ಟೆ ಕಿಚ್ಚಿಗೆ ಏನೇನೋ ಮಾತನಾಡುವುದಲ್ಲ: ವಿಶ್ವನಾಥ್ ವಾಗ್ದಾಳಿ

**ಮೈಸೂರು:** ಮೈಸೂರು ದಸರಾ ಉತ್ಸವವನ್ನು ಉದ್ಘಾಟಿಸಲು ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತೆ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವ ಸಂಬಂಧ ಕರ್ನಾಟಕ ಸರ್ಕಾರದ ನಿರ್ಧಾರ ತೀವ್ರ ಚರ್ಚೆಗೆ ಕಾರಣವಾಗಿದೆ.

ಈ ನಿರ್ಧಾರವನ್ನು ಸಮರ್ಥಿಸಿಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ, ಹೈದರ್ ಅಲಿ ಮತ್ತು ಟಿಪ್ಪು ಸುಲ್ತಾನ್ ಮೈಸೂರಿನಲ್ಲಿ ಆಳ್ವಿಕೆ ನಡೆಸುತ್ತಿದ್ದಾಗ, ಮಿರ್ಜಾ ಇಸ್ಮಾಯಿಲ್ ಮೈಸೂರಿನಲ್ಲಿ ದಿವಾನರಾಗಿದ್ದಾಗ ದಸರಾವನ್ನು ಆಚರಿಸಲಾಗುತ್ತಿತ್ತು. 2017 ರಲ್ಲಿ ಖ್ಯಾತ ಬರಹಗಾರ ಮತ್ತು ಕವಿ ನಿಸಾರ್ ಅಹ್ಮದ್ ದಸರಾವನ್ನು ಉದ್ಘಾಟಿಸಿದ್ದರು. ಹಾಗಾದರೆ ಲೇಖಕಿ ಬಾನು ಮುಷ್ತಾಕ್ ದಸರಾ ಉದ್ಘಾಟಿಸಿದರೇ ವಿವಾದವೇನು?" ಎಂದು ಪ್ರಶ್ನಿಸಿದ್ದಾರೆ.

ಮಾಜಿ ರಾಜ್ಯಸಭಾ ಸದಸ್ಯ ಮತ್ತು ಪ್ರಸಿದ್ಧ ಲೇಖಕ ಎಲ್



ಹನುಮಂತಯ್ಯ ಈ ವಿವಾದದ ಬಗ್ಗೆ ಮಾತನಾಡಿದ್ದಾರೆ. ಇದು ಸಮಾಜಕ್ಕೆ ಹಾನಿಕಾರಕ ಎಂದಿದ್ದಾರೆ. ಮುಷ್ತಾಕ್‌ಗೆ ಬೆಂಬಲ ವ್ಯಕ್ತಪಡಿಸಿದ ಅವರು, "ಬಾನು ಮುಷ್ತಾಕ್ ನಮ್ಮ ಭೂಮಿಗೆ ಗೌರವ ತಂದಿದೆ. ಕೆಲವರು ದಸರಾ ಆಹ್ವಾನದ ಬಗ್ಗೆ ಅನಗತ್ಯ ವಿವಾದವನ್ನು ಹುಟ್ಟುಹಾಕುತ್ತಿರುವುದು ನಾಚಿಕೆಗೇಡಿನ ಸಂಗತಿ" ಎಂದು ಹೇಳಿದರು. ದಸರಾ ಉದ್ಘಾಟನೆಗೆ ಲೇಖಕಿ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಿರುವ ರಾಜ್ಯ ಸರ್ಕಾರದ ನಿಲುವಿಗೆ ವಿಧಾನಪರಿಷತ್ ಸದಸ್ಯ ಎಚ್. ವಿಶ್ವನಾಥ್ ಸ್ವಾಗತಿಸಿದರು. ಬಾನು ಮುಷ್ತಾಕ್ ಕೃತಿಯನ್ನು ಇಂಗ್ಲಿಷ್ ಗೆ ಭಾಷಾಂತರ ಮಾಡಿದ ದೀಪಾ ಬಸ್ತಿ ಅವರಿಗೂ ಬೂಕರ್ ಪ್ರಶಸ್ತಿ ನೀಡಲಾಗಿದೆ. ಇಬ್ಬರಿಗೂ ಸಮಾನವಾಗಿ ಬೂಕರ್ ಪ್ರಶಸ್ತಿ ನೀಡಲಾಗಿದೆ ಎಂದರು.

ಬೂಕರ್ ಬಾನು ಮುಷ್ತಾಕ್ ಅವರಿಗೆ ಬಂದಿದೆ. ಪ್ರತಾಪಿಯಾಗಿ ಮಾತನಾಡುವ ಪ್ರತಾಪ್ ಸಿಂಹ ನೀನು ಬರೆಯುತ್ತಿದ್ದಲ್ಲ ಬೆತ್ತಲೆ ಪ್ರಪಂಚಕ್ಕೆ ಬೂಕರ್ ಬಂತಾ. ಹೊಟ್ಟೆ ಕಿಚ್ಚಿಗೆ ಏನೇನೋ ಮಾತನಾಡುವುದಲ್ಲ. ನಿನ್ನ ಪ್ರತಾಪಕ್ಕೆ ಬಿಜೆಪಿ ಹೈಕಮಾಂಡ್ ಸೀಟೇ ಇಲ್ಲದ ಹಾಗೆ ಮಾಡಿದರು ಎಂದು ಮಾಜಿ ಸಂಸದ ಪ್ರತಾಪ್ ಅವರ ವಿರುದ್ಧ ಹರಿಹಾಯ್ದರು. ಮಂತ್ರಿಗಳಾಗಿದ್ದವರೂ ಬಾಯಿಗೆ ಬಂದಂತೆ ಮಾತನಾಡಿದ್ದಾರೆ. ಶೋಭಾ ಕರಂದ್ಲಾಜೆ ಭಾರತ ಸರಕಾರದ ಮಂತ್ರಿ. ಇವರು ಚಾಮುಂಡಿ ಬೆಟ್ಟದ ಮೆಟ್ಟಿಲುಗಳನ್ನು ಹತ್ತಲು ಬಿಡುವುದಿಲ್ಲ ಎಂದು ಹೇಳುತ್ತಾರೆ. ಚಾಮುಂಡಿ ಬೆಟ್ಟವನ್ನು ನಿಮಗೆ ಯಾರು ಬರೆದುಕೊಟ್ಟವರು? ಹೀಗೆ ಹೇಳಲು ಅಧಿಕಾರ ಕೊಟ್ಟವರು ಯಾರು? ಇದು ಜನರ ಪ್ರಭುತ್ವ, ಜಾತಿ–ಪಂಥದ ಶರಾ ಬರೆದಿಲ್ಲ. ಇದು ಎಲ್ಲರ ದಸರಾ ಎಂದು ಹೇಳಿದರು.ಚಾಮುಂಡಿ ಬೆಟ್ಟ ಹಿಂದೂಗಳಿಗೆ ಸೇರಿದ್ದು. ರಾಜಕಾರಣಿಗಳು ಏನು ಬೇಕಾದರೂ ಹೇಳಿಕೊಳ್ಳಲಿ, ಅವರು ಹೇಳಿದ ಕೂಡಲೇ ಎಲ್ಲವೂ ಆಗುವುದಿಲ್ಲ ಎಂದು ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಹೇಳಿದರು. ಯದುವಂಶದ ಮನೆ ದೇವರು, ಕುಲದೇವಿ ಚಾಮುಂಡಿ. ಯದುವಂಶಕ್ಕೆ ಚಾಮುಂಡಿ ದೇವಿ ಧಾರ್ಮಿಕ ತಾಯಿ ಇದ್ದಂತೆ. ದೇವಸ್ಥಾನದಲ್ಲಿ ಹಿಂದೂ ಧಾರ್ಮಿಕ ವಿಧಿ ವಿಧಾನದಂತೆ ಪೂಜೆ ನಡೆಯುತ್ತದೆ ಎಂದರು.

# ದುಗ್ಗಮ್ಮನ ದೇವಸ್ಥಾನದಲ್ಲಿ ವಿಜೃಂಭಣೆಯ ದಸರಾ ಉತ್ಸವಕ್ಕೆ ತೀರ್ಮಾನ

### ಸಚಿವ ಎಸ್ಸೆಸ್ಸಂ ಅಧ್ಯಕ್ಷತೆಯಲ್ಲಿನ ಸಭೆಯಲ್ಲಿ ಅಗತ್ಯಕ್ರಮ ಕೈಗೊಳ್ಳಲು ಸೂಚನೆ

**ದಾವಣಗೆರೆ :** ನಗರ ದೇವತೆ ಶ್ರೀ ದುರ್ಗಾಂಬಿಕಾ ದೇವಸ್ಥಾನದಲ್ಲಿ ದಸರಾ ಉತ್ಸವವನ್ನು ಬರುವ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 1ರವರೆಗೆ ವಿಜೃಂಭಣೆಯಿಂದ ನಡೆಸಲು ತೀರ್ಮಾನಿಸಲಾಗಿದೆ.

ಶ್ರೀ ದುರ್ಗಾಂಬಿಕಾ ದೇವಸ್ಥಾನ ಟ್ರಸ್ಟ್ ವತಿಯಿಂದ ದೇವಸ್ಥಾನದ ಕಚೇರಿಯಲ್ಲಿ ಟ್ರಸ್ಟ್ ಕಾರ್ಯಾಧ್ಯಕ್ಷರೂ ಆಗಿರುವ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಅಧ್ಯಕ್ಷತೆಯಲ್ಲಿ ಉತ್ಸವದ ಪೂರ್ವಭಾವಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು.

ಸೆಪ್ಟೆಂಬರ್ 22 ರ ಸೋಮವಾರ ನವರಾತ್ರಿ ಉತ್ಸವಕ್ಕೆ ಚಾಲನೆ ನೀಡಲಾಗುವುದು. ಅಂದಿನಿಂದ 9 ದಿನಗಳ ಕಾಲ ಪ್ರತಿದಿನ ರಾತ್ರಿ 7.30 ರಿಂದ ದೇವಸ್ಥಾನದ ಪಾದಗಟ್ಟೆ ಆವರಣದಲ್ಲಿ ಪುರಾಣ – ಪ್ರವಚನವನ್ನು ನಡೆಸಲು ನಿರ್ಧರಿಸಲಾಯಿತು. ಅಕ್ಟೋಬರ್ 2ರ ಗುರುವಾರ ವಿಜಯದಶಮಿ ಬನ್ನಿ ಮುಡಿಯುವ ಕಾರ್ಯಕ್ರಮ ಏರ್ಪಾಡಾಗಿದೆ.

ಅಕ್ಟೋಬರ್ 3ರ ಶುಕ್ರವಾರ ಆವರಗೊಳ್ಳದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ನೇತೃತ್ವದಲ್ಲಿ ದೇವಸ್ಥಾನದ ಆವರಣದಲ್ಲಿ ಉಚಿತ ಸಾಮೂಹಿಕ ವಿವಾಹ ಮಹೋತ್ಸವ ಜರುಗುವುದು. ಈ ಮಹೋತ್ಸವದಲ್ಲಿ ಭಾಗವಹಿಸಲಿಚ್ಛಿಸುವ ವಧೂ–ವರರ ಪಾಲಕರು ದೇವಸ್ಥಾನದ



ಕಚೇರಿಯನ್ನು ಸಂಪರ್ಕಿಸಿ ಹೆಸರು ನೋಂದಾಯಿಸಬಹುದು.


ನವರಾತ್ರಿ ಮಹೋತ್ಸವದ ಸಂದರ್ಭದಲ್ಲಿ ಶ್ರೀ ದೇವಿಗೆ ತುರ್ತು ವಿಶೇಷ ಅಭಿಷೇಕ ಮಾಡಲಿಚ್ಛಿಸುವ ಭಕ್ತಾದಿಗಳು ದೇವಸ್ಥಾನದ ಕಚೇರಿಯನ್ನು ಸಂಪರ್ಕಿಸಬಹುದು. ಈ ಎಲ್ಲಾ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ನಡೆಸುವ ಸಂಬಂಧ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸಚಿವ ಎಸ್ಸೆಸ್ಸಂ ಅವರು ಸಂಬಂಧಿಸಿದವರಿಗೆ ಸೂಚನೆ ನೀಡಿದರು.

ಶ್ರೀ ದುರ್ಗಾಂಬಿಕಾ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರೂ ಆಗಿರುವ ಹಿರಿಯ ಶಾಸಕ ಡಾ. ಶಾಮನೂರು ಶಿವಶಂಕರಪ್ಪ ಮತ್ತು ಮಕ್ಕಳು ಹಾಗೂ ಮೊಮ್ಮಕ್ಕಳಿಂದ ಅಕ್ಟೋಬರ್ 3ರ ಶುಕ್ರವಾರ ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ಸೇವೆ ನಡೆಯಲಿದೆ.

ಶ್ರೀ ದುರ್ಗಾಂಬಿಕಾ ದೇವಸ್ಥಾನ ಟ್ರಸ್ಟ್ ಟ್ರಸ್ಟಿಗಳಾದ ಕೈಗಾರಿಕೋದ್ಯಮಿ ಡಾ. ಅಥಣಿ ಎಸ್. ವೀರಣ್ಣ, ಹೆಚ್.ಬಿ. ಗೋಣಪ್ಪ, ಬಿ.ಹೆಚ್. ವೀರಭದ್ರಪ್ಪ, ಉಮೇಶರಾವ್ ಸಾಳಂಕಿ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

## ಪ್ರತಿ ಮೂರು ತಿಂಗಳಿಗೊಮ್ಮೆ ಪ್ರತಿಯೊಬ್ಬರೂ ಆರೋಗ್ಯ ತಪಾಸಣೆ ಮಾಡಿಕೊಳ್ಳುವುದು ಸೂಕ್ತ

**ದಾವಣಗೆರೆ:** ಪ್ರಸ್ತುತ ಸಂದರ್ಭದಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಪ್ರತಿಯೊಬ್ಬರೂ ಕೂಡಾ ತಮ್ಮ ಆರೋಗ್ಯ ತಪಾಸಣೆ ಮಾಡಿಕೊಳ್ಳುವುದು ಸೂಕ್ತ ಎಂದು ವಿರಕ್ತ ಮಠದ ಡಾ.ಬಸವಪ್ರಭು ಸ್ವಾಮೀಜಿ ಕರೆ ನೀಡಿದರು.



ಇಲ್ಲಿನ ಬಕ್ಕೇಶ್ವರ ಶಾಲೆಯಲ್ಲಿ ಸಂಕಲ್ಪ ಸೇವಾ ಫೌಂಡೇಷನ್, ಸಿಟಿ ಸೆಂಟ್ರಲ್ ಆಸ್ಪತ್ರೆ, ಎಚ್‌ಬಿಎಲ್ ಟ್ರಸ್ಟ್, ಜಿ.ಎಂ.ಯೂನಿವರ್ಸಿಟಿ, ಡಾ. ಅಗರ್ ವಾಲ್ ಐ ಆಸ್ಪತ್ರೆ ಸಹಯೋಗದಲ್ಲಿ ಆಯೋಜಿಸಿದ ಉಚಿತ ಆರೋಗ್ಯ ತಪಾಸಣಾ ಶಿಬಿರದ ದಿವ್ಯ ಸಾನಿಧ್ಯವಹಿಸಿ ಶ್ರೀಗಳು ಮಾತನಾಡಿದರು.

ಮಾನವನ ಜೀವನದಲ್ಲಿ ನಾವು ಹಣವೇ ಮುಖ್ಯ ಎಂದು ತಿಳಿದುಕೊಂಡಿದ್ದೇವೆ. ಹಣಗಳಿಸಲು ಹಗಲಿರುಳು ದಿನವಿಡಿ ಶ್ರಮವಹಿಸಿ ಕಷ್ಟಪಟ್ಟು ದುಡಿಯುತ್ತಾನೆ. ಅದರ ಉದ್ದೇಶ ದುಡಿದು ಶ್ರೀಮಂತರಾಗಬೇಕು ಎಂದು. ಹಗಲು ರಾತ್ರಿ ತನ್ನ ಆರೋಗ್ಯವನ್ನು ಕಳೆದುಕೊಂಡು ಹಣವನ್ನು ಸಂಪಾದನೆ ಮಾಡುತ್ತಾನೆ. ಹಣ ಸಂಪಾದನೆ ಮಾಡಿದ ಮೇಲೆ ಆರೋಗ್ಯ ಸಂಪಾದನೆ ಮಾಡಿಕೊಳ್ಳಲು ಗಳಿಸಿದ ಹಣವನ್ನು ಖರ್ಚು ಮಾಡುತ್ತಾ ಹೋಗುತ್ತಾನೆ. ದೊಡ್ಡ ದೊಡ್ಡ ಶ್ರೀಮಂತರು ಇದ್ದಾರೆ. ಅವರಿಗೆ ಇಂದು ಒಳ್ಳೆಯ ಆರೋಗ್ಯ ಇಲ್ಲ. ಅನೇಕ ಖಾಯಿಲೆಗಳು ಕಾಡುತ್ತಿವೆ. ಏಕೆಂದರೆ ದುಡಿಯುವ ವಯಸ್ಸಿನಲ್ಲಿ ಹಗಲು ರಾತ್ರಿ ದುಡಿದಿದ್ದರಿಂದ ವಯಸ್ಸಾದ ಮೇಲೆ ಅದರ ದುಷ್ಪರಿಣಾಮಗಳನ್ನು ಕಾಣುತ್ತಿದ್ದೇವೆ. ಜೀವನದಲ್ಲಿ ಸಾಧನೆ ಮಾಡಬೇಕಾದರೆ ದೇಹ ಚೆನ್ನಾಗಿರಬೇಕು. ದೇಹ ಚೆನ್ನಾಗಿರಬೇಕೆಂದರೆ ಉತ್ತಮ ಆರೋಗ್ಯ ಇರಬೇಕು. ಅದು ಶಾರೀರಿಕವಾಗಿ, ಮಾನಸಿಕವಾಗಿಯೂ ಆರೋಗ್ಯವಾಗಿರಬೇಕು. ಇಂತಹ ಆರೋಗ್ಯವನ್ನು ಪಡೆದವರು ನಿಜವಾದ ಶ್ರೀಮಂತರು. ಅಲ್ಲದೇ ದುಶ್ಚಟ, ದುರ್ವ್ಯಸನಗಳಿಂದ ದೂರ ಇದ್ದರೆ ಮಾತ್ರ ಉತ್ತಮ ಆರೋಗ್ಯ ಪಡೆಯಲು ಸಾಧ್ಯ. ಇಲ್ಲಿ ಸಂಕಲ್ಪ ಫೌಂಡೇಶನ್ ನಡೆಯುತ್ತಿರುವ ಉಚಿತ ಆರೋಗ್ಯ ಸೇವಾ ಕಾರ್ಯ ದೇವರ ಪೂಜೆಗೆ ಸಮಾನವಾದದ್ದು. ನೊಂದವರು, ಬಡವರು, ನಿರ್ಗತಿಕರಿಗೆ, ಹಿಂದುಳಿದವರಿಗೆ ಇಲ್ಲಿ ಶಿಬಿರ ಆಯೋಜಿಸಲಾಗಿದೆ. ನಾವು ಎಷ್ಟು ದಿನ ಬದುಕುತ್ತೇವೆ ಎಂಬುದು ಮುಖ್ಯವಲ್ಲ. ಇರುವದರೊಳಗೆ ಎಷ್ಟು ಒಳ್ಳೆಯ ಕಾರ್ಯಗಳನ್ನು ಮಾಡುತ್ತೇವೆ ಎಂಬುದು ಮುಖ್ಯ. ಜೀವನದಲ್ಲಿ ಸಂತೋಷ ಸಿಗಬೇಕೆಂದರೆ ಕೆಲವರು ಟೂರ್, ಪಿಕ್‌ನಿಕ್, ಎಂಜಾಯ್ ಮಾಡಲು ಹೋಗುತ್ತಾರೆ. ಅವೆಲ್ಲವು ಕ್ಷಣಿಕ ಸುಖ. ಇಂತಹ ಸಮಾಜಮುಖಿ ಸೇವೆ ಮಾಡುವುದರಿಂದ ಶಾಶ್ವತವಾದ ಸುಖ ಪಡೆಯಲು ಸಾಧ್ಯ ಎಂದರು.

ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ ಕೆ.ಶೆಟ್ಟಿ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, ಇಂತಹ ಉಚಿತ ಆರೋಗ್ಯ ಶಿಬಿರಗಳನ್ನು ವಿನೋಬನಗರ, ಯಲ್ಲಮ್ಮನಗರ ಸೇರಿದಂತೆ ವಿವಿಧ ಹಿಂದುಳಿದ ಪ್ರದೇಶಗಳಲ್ಲಿ ಮಾಡಬೇಕು. ಆಗ ಇಂತಹ ಶಿಬಿರಗಳು ಅಂತಹ ಜನರಿಗೆ ಅನುಕೂಲವಾಗಲಿದೆ. ಅಲ್ಲಿನ ಜನರಿಗೆ ಆರೋಗ್ಯದ ಕಡೆಗೆ ಗಮನ ಹರಿಸುವುದಿಲ್ಲ. ಸಂಕಷ್ಟ ಬಂದಾಗ ವೈದ್ಯರ ಬಳಿಗೆ ಹೋಗುತ್ತಾರೆ, ಹಾಗಾಗಬಾರದು. ಆಗಾಗ ತಮ್ಮ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದರಿಂದ ಮುಂದಾಗುವ ಅನಾಹುತಗಳನ್ನು ತಡೆಯಬಹುದಾಗಿದೆ.

### ಸುದ್ದಿಮಾಧ್ಯಮದಲ್ಲಿ ಅಂಬೇಡ್ಕರ್ ದೃಷ್ಟಿಕೋನ ಒಂದು ವಿಚಾರ ಸಂಕಿರಣ ಉದ್ಘಾಟಿಸಿದ ಎಂಎಲ್‌ಸಿ ನವೀನ್ ಕೆ.ಎಸ್.

# ಭಾರತ ಕತ್ತಲಿನಿಂದ ಬೆಳಕಿಗೆ ಹೊರ ಬರಲು ಡಾ. ಬಿ.ಆರ್. ಅಂಬೇಡ್ಕರ್ ಕಾರಣ

**ದಾವಣಗೆರೆ:** ಭಾರತ ಕತ್ತಲಿನಿಂದ ಬೆಳಕಿಗೆ ಹೊರ ಬರಲು ಕಾರಣವಾಗಿರುವ ಡಾ. ಬಿ.ಆರ್. ಅಂಬೇಡ್ಕರ್ ಬರಿ ಪುಸ್ತಕದ ವಿಷಯವಾಗದೆ ಬದುಕಿನ ವಿಚಾರವಾಗಬೇಕು ಎಂದು ವಿಧಾನ ಪರಿಷತರ್ ಸದಸ್ಯ ಕೆ.ಎಸ್. ನವೀನ್ ಹೇಳಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತಶ್ರಯದಲ್ಲಿ ಶನಿವಾರ ಆಯೋಜಿಸಿದ್ದ ಸುದ್ದಿ ಮಾಧ್ಯದಲ್ಲಿ ಅಂಬೇಡ್ಕರ್ ದೃಷ್ಟಿಕೋನ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು.

ಭಾರತ ಜಗತ್ತಿನಲ್ಲಿ ಈಗ ಅಭಿವೃದ್ಧಿ ಹೊಂದುತ್ತಿರುವ ದೇಶವಾಗಿ ಬೆಳೆಯಲು ಅಂಬೇಡ್ಕರ್ ಮುಖ್ಯ ಕಾರಣರಾಗಿದ್ದಾರೆ. ಆದರೆ, ರಾಜಕಾರಣಿಗಳು ಅವರನ್ನು ತಮಗೆ ಬೇಕಾದಂತೆ ಬಳಸಿಕೊಳ್ಳುತ್ತಿದ್ದಾರೆ ಎಂದು ವಿಷಾಧಿಸಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಮಾತನಾಡಿ, ಜಾತಿ ವಾದದ ಕಡೆ ಹೋಗುತ್ತಿರುವ ಸಮಾಜವನ್ನು ಸರಿ ದಾರಿಗೆ ತರುವ ಪ್ರಯತ್ನ ಪತ್ರಕರ್ತರು ಮಾಡಬೇಕಿದೆ. ಸಮಾಜದ ನ್ಯೂನತೆಗಳನ್ನು ತಿದ್ದುವ ಬದಲು ಕೆಲವು ಪತ್ರಕರ್ತರು ಮೂಕ ಪ್ರೇಕ್ಷಕರಂತಾಗಿದ್ದಾರೆ. ಮರ್ಯಾದೆ ಹತ್ಯೆಯಂತಹ ಘಟನೆ ನಡೆದರೂ ಪತ್ರಕರ್ತ ಮೌನವಾಗಿರುವುದು ಸರಿಯಲ್ಲ. ಸಮಾಜದಲ್ಲಿ ಧರ್ಮಸ್ಥಳದಂತಹ ಘಟನೆಗಳು ನಡೆದಾಗ



ವಿಷಯದ ಆಳಕ್ಕೆ ಇಳಿದು ಸತ್ಯದ ವಿಶ್ಲೇಷಣೆ ಮಾಡಬೇಕಾಗುತ್ತದೆ. ಆದರೆ, ಈಗ ಬರಿ ರಾಜಕಾರಣ, ಅಪರಾಧ ಸುತ್ತ ಗಿರಿಕೆ ಹೊಡೆಯುತ್ತಿದ್ದಾರೆ. ಇದು ಸಮಾಜದ ಬೆಳವಣಿಗೆಗೆ ಅನುಕೂಲವಾಗುದಿಲ್ಲ ಎಂದು ಹೇಳಿದರು.

ಅಂಬೇಡ್ಕರ್ ಅವರ ವಿಚಾರಗಳನ್ನು ಬದುಕಿಸಿ ಬೆಳೆಸುವ ಶಕ್ತಿ ಮಾಧ್ಯಮಗಳಿಗಿದೆ. ಮರ್ಯಾದೆ ಹತ್ಯೆಯಿಂದ ಅಂಬೇಡ್ಕರ್ ವಿಚಾರಗಳು ಸಹ ಹತ್ಯೆಯಾಗುತ್ತಿವೆ. ಮಾಧ್ಯಮದಲ್ಲಿ ದಲಿತರಿಗೆ ಸರಿಯಾದ ಸ್ಥಾನಮಾನ ಸಿಗುತ್ತಿಲ್ಲ. ಆ ಮೂಲಕ ಅಂಬೇಡ್ಕರ್ ದೃಷ್ಟಿಕೋನ ಮರು ಸ್ಥಾಪನೆ ಮಾಡಬೇಕಿದೆ. ಪತ್ರಿಕೆಗಳ ಮೇಲೆ ಜನರು ಇನ್ನೂ ನಂಬಿಕೆ ಉಳಿಸಿಕೊಂಡಿದ್ದು, ಪತ್ರಕರ್ತರು ಜಾವಾಬ್ದಾರಿ ಅರಿತು ಕೆಲಸ ಮಾಡಬೇಕಿದೆ ಎಂದು ಕಿವಿಮಾತು ಹೇಳಿದರು.

ಪತ್ರಕರ್ತರಾಗಿ ಅಂಬೇಡ್ಕರ್ ಅವರ ಬರವಣಿಗೆಗಳು ವಿಷಯ ಕುರಿತು ಸಾಮಾಜಿಕ ಚಿಂತಕ ವಿ.ಎಲ್. ನರಸಿಂಹಮೂರ್ತಿ, ಅಂಬೇಡ್ಕರ್ ದೃಷ್ಟಿಯಲ್ಲಿ ಲಿಂಗ ಸಮಾನತೆ ವಿಷಯ ಕುರಿತು ಸಹ ಪ್ರಾಧ್ಯಾಪಕಿ ಡಾ. ಭಾರತಿದೇವಿ ಪಿ. ಹಾಗೂ ಪತ್ರಕರ್ತರಲ್ಲಿ ಸಾಮಾಜಿಕ ನ್ಯಾಯದ ಪ್ರಜ್ಞೆ ಕುರಿತು ದಿ ಹಿಂದೂ ಪತ್ರಿಕೆ ಹಿರಿಯ ಸಹಾಯಕ ಸಂಪಾದಕ ರಿಷಿಕೇಶ್ ಬಹದ್ದೂರು ದೇಸಾಯಿ ಉಪನ್ಯಾಸ ನೀಡಿ–ದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯ ಹಾಗೂ ಹಿರಿಯ ಪತ್ರಕರ್ತ ಎಂ.ಎನ್. ಅಹೋಬಳಪತಿ ಕಾರ್ಯಕ್ರಮ ನಡೆಸಿಕೊಟ್ಟರು. ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ಪ್ರಸ್ತಾವಿಕವಾಗಿ ಮಾತನಾಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಗೌಡಗೆ–ರೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಬಿ.ವಿ. ತುಕರಾಂ, ಕರ್ನಾಟಕ ಮಾಧ್ಯಮ ಅಕಾಡೆಮಿ ಕಾರ್ಯದರ್ಶಿ ಎಂ.ಸಹನಾ, ಸದಸ್ಯರಾದ ಡಾ. ಶಿವಕುಮಾರ್ ಕಣಸೋಗಿ, ಇ.ಎಂ. ಮಂಜುನಾಥ್, ಕೆ. ನಿಂಗಜ್ಜ, ಚಿತ್ರದುರ್ಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಮೈಲಾರಪ್ಪ ಮತ್ತಿತರರು ಇದ್ದರು.

## ಪುನಾ ಒಪ್ಪಂದ ಸಮಾಧಿ ಅಗೆದು ಅಂಬೇಡ್ಕರ್ ವಿಚಾರ ಹೊರ ತರಬೇಕಿದೆ

ದಲಿತರಿಗೆ ಪ್ರತ್ಯೇಕ ಮತ ಕ್ಷೇತ್ರ ಬಯಸಿದ್ದ ಅಂಬೇಡ್ಕರ್ ವಿಚಾರ ಪುನಾ ಒಪ್ಪಂದದಲ್ಲಿ ಸಮಾಧಿಯಾಗಿದೆ. ದಲಿತರಿಗೆ ನಿಜವಾದ ರಾಜಕೀಯ ಸ್ವಾತಂತ್ರ್ಯ ದಕ್ಕಬೇಕಾದರೆ ಪತ್ರಕರ್ತರು ಸಮಾಧಿಯಲ್ಲಿ ಹೂತುಹೋಗಿರುವ ಅಂಬೇಡ್ಕರ್ ಪ್ರತ್ಯೇಕ ಮತ ಕ್ಷೇತ್ರ ಬೇಡಿಕೆಯನ್ನು ಹೊರತರಬೇಕು ಎಂದು ಹಿರಿಯ ಪತ್ರಕರ್ತ ಡಿ. ಉಮಾಪತಿ ಆಶಯ ವ್ಯಕ್ತಪಡಿಸಿದರು.

ದಲಿತರು ವಿಮೋಚನೆ ಹೊಂದಬೇಕಾದರೆ ಇತರೆ ವರ್ಗದ ಹೊರತಾಗಿ ದಲಿತರೇ ತಮ್ಮ ಜನ ಪ್ರತಿನಿಧಿಯನ್ನು ಆಯ್ಕೆ ಮಾಡಬೇಕೆಂಬುದು ಅಂಬೇಡ್ಕರ್ ಬಯಕೆಯಾಗಿತ್ತು. ಮಹಾತ್ಮ ಗಾಂಧಿ ಇದಕ್ಕೆ ಒಪ್ಪದಿದ್ದಾಗ ಅನಿವಾರ್ಯವಾಗಿ ಪುನಾ ಒಪ್ಪಂದಕ್ಕೆ ಒಪ್ಪಿಕೊಳ್ಳಬೇಕಾಯಿತು. ಇದರಿಂದ ದಲಿತರಿಗೆ ಪ್ರತ್ಯೇಕ ಮೀಸಲು ಕ್ಷೇತ್ರ ಇದ್ದರೂ ಮೇಲ್ವರ್ಗದ ಮರ್ಜಿಯಲ್ಲಿಯೇ ಶೋಷಿತ ಜನಪ್ರತಿನಿಧಿ ಆಯ್ಕೆಯಾಗುವ ವಿಕ್ಷಿಪ್ತ ಸ್ಥಿತಿ ಈಗಲೂ ಇದೆ ಎಂದು ವಿಷಾದಿಸಿದರು.

ಪ್ರತ್ಯೇಕ ದಲಿತ ಮತ ಕ್ಷೇತ್ರ ಇಲ್ಲದೆ ದಲಿತರು ರಾಜಕೀಯ ಪಕ್ಷಗಳ ದಾಸರಾಗಿದ್ದಾರೆ. ಈಗ ಶೋಷಿತರು ಹಾವಿನ ಹೆಡೆಯ ನೆರಳಿಗೆ ಹಾತೊರೆಯುತ್ತಿದ್ದಾರೆ. ದಲಿತರಿಗೆ ಮಾಧ್ಯಮ ಕ್ಷೇತ್ರದಿಂದ ವಿಮೋಚನೆ ಆಗಬೇಕೆಂಬ ಬಯಕೆ ಅಂಬೇಡ್ಕರ್ ಅವರದಾಗಿತ್ತು. ಆದರೆ, ಮಾಧ್ಯಮಗಳು ಮೇಲ್ವರ್ಗದವರ ನಿಯಂತ್ರಣದಲ್ಲಿರುವುದರಿಂದ ಅದು ಸಾಧ್ಯವಾಗುತ್ತಿಲ್ಲ ಎಂದು ವಿಷಾಧಿಸಿದರು.

ವರ್ಣ ವ್ಯವಸ್ಥೆ ಇನ್ನೂ ಜಾಸ್ತಿ ಆಗುತ್ತಿದೆ. ದಲಿತರು ಸಮಾಜದಿಂದ ಇನ್ನೂ ದೂರ ಆಗುತ್ತಿದ್ದಾರೆ. ಅಂಬೇಡ್ಕರ್ ಸ್ತುತಿ ಮಾಡಬೇಕಾದ ಬೆಳದ ದಲಿತರು, ಸತ್ಯನಾರಾಯಣ ಪೂಜೆ ಮಾಡುತ್ತಿದ್ದಾರೆ. ಪ್ರತ್ಯೇಕ ಮತ ಕ್ಷೇತ್ರ ವ್ಯವಸ್ಥೆ ಬರುವ ತನಕ ದಲಿತರು ರಾಜಕೀಯವಾಗಿ ಸ್ವತಂತ್ರವಾಗಲು ಸಾಧ್ಯವಿಲ್ಲ

## ಅಂಬೇಡ್ಕರ್ ಆಧುನಿಕ ಭಾರತದ ದೊಡ್ಡ ಪತ್ರಕರ್ತ

ಮಾಧ್ಯಮ ಕ್ಷೇತ್ರಕ್ಕೆ ಮಾದರಿಯಾಗಿದ್ದ ಅಂಬೇಡ್ಕರ್ ಅವರನ್ನು ಕಾಣದೆ ಕುರುಡಾಗಿರುವ ಮಾಧ್ಯಮದವರ ಕಣ್ಣು ತೆರೆಸಬೇಕಾಗಿದೆ ಎಂದು ಶಿವಮೊಗ್ಗ ಟೆಲೆಕ್ಸ್ ದಿನ ಪತ್ರಿಕೆ ಸಂಪಾದಕ ರವಿಕುಮಾರ್ ಎನ್. ಹೇಳಿದರು.

ಅಂಬೇಡ್ಕರ್ ಅವರ ಪತ್ರಿಕಾ ವೃತ್ತಿ ವಿಷಯ ಕುರಿತು ಉಪನ್ಯಾಸ ನೀಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ತಮ್ಮ ಕಷ್ಟ ಹೇಳಿಕೊಳ್ಳಲು ದಲಿತರಿಗೆ ಒಂದೇ ಒಂದು ಪತ್ರಿಕೆ ಇರಲಿಲ್ಲ. ಇಂಥ ಸಂದರ್ಭದಲ್ಲಿ ದಲಿತರನ್ನು ಜಾಗೃತಗೊಳಿಸಲು ಅಂಬೇಡ್ಕರ್ ಅವರು 36 ವರ್ಷ ಮೂಕ ನಾಯಕ ಸೇರಿದಂತೆ ಐದು ಪತ್ರಿಕೆಗಳನ್ನು ನಡೆಸಿದರು ಎಂದರು.ಭಾರತದೊಳಿಗಿನ ಶೋಷಿತ ಭಾರತದ ಬಗ್ಗೆ ಇಂದು ಮಾತನಾಡಬೇಕಿದೆ. ಆಂತರಿಕ ಸ್ವಾತಂತ್ರದ ಬಗ್ಗೆ ಅಂಬೇಡ್ಕರ್ ಹೆಚ್ಚು ಧ್ವನಿ ಎತ್ತಿದ್ದರು. ಆಗಲೆ ಶೋಷಿತರ ಬಗ್ಗೆ ಪತ್ರಿಕೆ ಆರಂಭಿಸಿ ಬರೆಯಲಾರಂಭಿಸಿದ್ದ ಅಂಬೇಡ್ಕರ್ ಆಧುನಿಕ ಭಾರತದ ದೊಡ್ಡ ಪತ್ರಕರ್ತ ಎಂದು ಬಣ್ಣಿಸಿದರು. ಆಗ ಸತ್ಯ ಹೇಳುತ್ತಿದ್ದ ಅಂಬೇಡ್ಕರ್ ಪತ್ರಿಕೆಗೆ ಪ್ರತಿರೋಧ ವ್ಯಕ್ತವಾಗಿತ್ತು. ವಿಚಾರಗಳನ್ನು ಬರೆದರೂ ಅನಕ್ಷರಸ್ಥರಾದ ದಲಿತರು ಅದನ್ನು ಓದಲು ಸಾಧ್ಯವಾಗುತ್ತಿರಲಿಲ್ಲ. ಕಲಿತ ಕೆಲವರು ಊರಿನ ಕಟ್ಟೆಯ ಮೇಲೆ ನಿಂತು ಪತ್ರಿಕೆ ಓದಿ ದಲಿತರಿಗೆ ವಿಚಾರಗಳನ್ನು ತಿಳಿಸಬೇಕಾಗಿತ್ತು. ಇಂಥ ಸಂದರ್ಭದಲ್ಲಿ ಬಾಲಗಂಗಾಧರ ತಿಲಕರು ತಮ್ಮ ಕೇಸರಿ ಪತ್ರಿಕೆಯಲ್ಲಿ ವಿಚಾರ ಪ್ರಚಾರ ಮಾಡಲು ತಿರಸ್ಕಾರ ಮಾಡುತ್ತಿದ್ದರು. ಇಂಥ ಸಂದಿಗ್ಧ ಪರಿಸ್ಥಿತಿಯಲ್ಲಿ ಅಂಬೇಡ್ಕರ್ 36 ವರ್ಷ ಕಷ್ಟಪಟ್ಟು ಪತ್ರಿಕೆ ನಡೆಸಿದರು ಎಂದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ. ಸ್ನೇಹಿತರು ಮತ್ತು ಸಂಬಂಧಿಗಳು ಹೆಚ್ಚು ಸಮಯ ಕೇಳಿದರೂ ಈ ಜಗತ್ತಿನ ಬಾಗಿಲುಗಳನ್ನು ಮುಚ್ಚಿ ನಿಮಗೆ ನೀವೇ ಒಳ್ಳೆಯ ವೈಭೋಗ ನೀಡಿಕೊಳ್ಳುವುದೊಳ್ಳೆಯದು.

### ವೃಷಭ ರಾಶಿ

ತುಂಬಾ ಚಿಂತೆ ಮತ್ತು ಒತ್ತಡ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು. ನೀವು ಮಾನಸಿಕ ಸ್ಪಷ್ಟತೆಯನ್ನು ಕಾಯ್ದುಕೊಳ್ಳಲು ಗೊಂದಲ ಮತ್ತು ಹತಾಶೆಯನ್ನು ತಡೆಗಟ್ಟಬೇಕು. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು.

### ಮಿಥುನ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ. ಕುಟುಂಬ ಅಥವಾ ಹತ್ತಿರದ ಸ್ನೇಹಿತರ ಜೊತೆ ಇದನ್ನು ಒಂದು ಅತ್ಯುತ್ತಮ ದಿನವಾಗಿಸಿ. ನಿಮ್ಮ ಪ್ರೀತಿಪಾತ್ರರು ಸ್ವಲ್ಪ ಕಿರಿಕಿರಿಗೊಂಡಂತೆ ತೋರುತ್ತದೆ ಇದು ನಿಮ್ಮ ಮನಸ್ಸಿನ ಮೇಲೆ ಒತ್ತಡವನ್ನು ಹಚ್ಚಿಸುತ್ತದೆ.

### ಕರ್ಕ ರಾಶಿ

ಯಾವುದಾದರೂ ಸೃಜನಾತ್ಮಕ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸೋಮಾರಿಯಾಗಿ ಕುಳಿತುಕೊಳ್ಳುವ ನಿಮ್ಮ ಅಭ್ಯಾಸ ಮಾನಸಿಕ ಶಾಂತಿಗೆ ಮಾರಣಾಂತಿಕವಾಗಬಹುದು. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳಿರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ – ಯಾವುದೇ ಹೂಡಿಕೆಗಳನ್ನು ಮಾಡುವ ಮೊದಲು ವ್ಯಕ್ತಿಯ ವಿಶ್ವಾಸಾರ್ಹತೆ ಮತ್ತು ಪ್ರಾಮಾಣಿಕತೆಯನ್ನು ದೃಢಿಕರಿಸಿ.

### ಸಿಂಹ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ಪತ್ನಿಯೊಂದಿಗೆ ಶಾಪಿಂಗ್ ಅನ್ನು ಅಪಾರವಾಗಿ ಆನಂದಿಸುತ್ತೀರಿ. ಇದು ನಿಮ್ಮ ನಡುವಿನ ತಿಳುವಳಿಕೆಯನ್ನೂ ಹೆಚ್ಚಿಸುತ್ತದೆ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ. ನೀವು ಇಂದು ನಿಮ್ಮ ಕೆಲಸದಲ್ಲಿ ಒಂದು ಪ್ರಗತಿಯನ್ನು ನೋಡಬಹುದು

### ಕನ್ಯಾ ರಾಶಿ

ನಿಮ್ಮ ಸುತ್ತಲಿನ ಸುಮಾರು ತುಂಬ ಬೇಡಿಕೆಯಿಡುತ್ತಾರೆಂದು ನಿಮಗನಿಸುತ್ತದೆ–ನಿಮಗೆ ಸಾಧ್ಯವಿರುವುದಕ್ಕಿಂತ ಹೆಚ್ಚು ಮಾಡಲು ಒಪ್ಪಿಕೊಳ್ಳಬೇಡಿ– ಮತ್ತು ಇತರರನ್ನು ಸಂತೋಷಪಡಿಸಲು ನಿಮ್ಮ ಮೇಲೆ ಒತ್ತಡ ಹಾಕಬೇಡಿ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ ನೀವು ಮಕ್ಕಳು ಅಥವಾ ನಿಮಗಿಂತ ಕಡಿಮೆ ಅನುಭವಿಯಾಗಿರುವವರ ಜೊತೆ ತಾಳ್ಮೆಯಿಂದಿರಬೇಕು. ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ.ಕೇವಲ ಈ ಆನಂದವನ್ನು ಆಸ್ವಾದಿಸಿ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ – ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

### ತುಲಾ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನೀವು ಕಮಿಷನ್‌ಗಳಿಂದ ಡಿವಿಡೆಂಡ್‌ಗಳಿಂದ– ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ಸಂಜೆಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ ಮತ್ತು ಅದನ್ನು ಸಾಧ್ಯವಾದಷ್ಟು ಪ್ರೇಮಮಯವಾಗಿಸಲು ಪ್ರಯತ್ನಿಸಿ

### ವೃಶ್ಚಿಕ ರಾಶಿ

ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ. ಭವಿಷ್ಯದಲ್ಲಿ ನೀವು ಆರ್ಥಿಕವಾಗಿ ಬಲವಾಗಿರಬೇಕೆಂದು ಬಯಸಿದರೆ ಇಂದಿನಿಂದಲೇ ಹಣವನ್ನು ಉಳಿಸಿ. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ.

### ಧನು ರಾಶಿ

ಹೆಚ್ಚಿನ ಕ್ಯಾಲೋರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ಮತ್ತು ವಿಶ್ರಾಂತಿಯನ್ನು ತರುತ್ತದೆ ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು. ಕೆಲಸದ ಬದಲಾವಣೆ ನಿಮಗೆ ಮಾನಸಿಕ ತೃಪ್ತಿ ನೀಡುತ್ತದೆ

### ಮಕರ ರಾಶಿ

ಒತ್ತಡ ಸಣ್ಣ ಅನಾರೋಗ್ಯಕ್ಕೆ ಕಾರಣವಾಗಬಹುದು. ಆರಾಮವಾಗಿರಲು ಸ್ನೇಹಿತರು ಮತ್ತು ಕುಟುಂಬದ ಸದಸ್ಯರ ಜೊತೆಗಿರಿ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಜನರು ನಿಮಗೆ ಹೊಸ ಭರವಸೆ ಹಾಗೂ ಕನಸುಗಳನ್ನು ನೀಡುತ್ತಾರೆ ಇದು ನಿಮ್ಮ ಸ್ವಸಾಮರ್ಥ್ಯವನ್ನು ಅವಲಂಬಿಸಿರುತ್ತದೆ.

### ಕುಂಭ ರಾಶಿ

ಮಾನಸಿಕ ಶಾಂತಿಗಾಗಿ ನಿಮ್ಮ ಒತ್ತಡವನ್ನು ಪರಿಹರಿಸಿ. ಹೂಡಿಕೆ ಶಿಫಾರಸು ಮಾಡಲಾಗಿದ್ದರೂ ಸರಿಯಾದ ಸಲಹೆ ಪಡೆಯಬೇಕು. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ. ವೈಯಕ್ತಿಕ ಸಂಬಂಧಗಳು ಸೂಕ್ಷ್ಮ ಹಾಗೂ ಸಂವೇದನಾಶೀಲವಾಗಿವೆ..

### ಮೀನ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ.

ಹಳೇ ಕುಂದುವಾಡದಲ್ಲಿ ಗಣೇಶ ಹಬ್ಬ, ಸಂಗೊಳ್ಳಿ ರಾಯಣ್ಣರ ಕುರಿತು ದಿಕ್ಸೂಚಿ ಭಾಷಣ..

# ಹಾರಿಕ ಮಂಜುನಾಥ್ ಅಬ್ಬರದ ಭಾಷಣಕ್ಕೆ ಜನ ಫಿದಾ, ಶಿಳ್ಳೆ, ಚಪ್ಪಾಳೆಗಳ ಸುರಿಮಳೆ..!

**ದಾವಣಗೆರೆ:** ಗಣೇಶ ಹಬ್ಬದ ಪೆಂಡಾಲ್ ನಲ್ಲಿಯೇ ಸ್ವಾತಂತ್ರ್ಯ ಹೋರಾಟದ ಕ್ರಾಂತಿಕಾರಿಗಳು ಹುಟ್ಟಿದ್ದು, ಈ ಹಬ್ಬ ಕ್ರಾಂತಿಕಾರಿಗಳನ್ನ ಹುಟ್ಟು ಹಾಕುವ ಕಾರ್ಖಾನೆಯಾಗಿ ಮಾರ್ಪಟ್ಟಿತ್ತು ಎಂದು ಯುವ ವಾಗ್ಮಿ, ಲೇಖಕಿ ಹಾರಿಕ ಮಂಜುನಾಥ್ ಅಭಿಪ್ರಾಯಪಟ್ಟಿದ್ದಾರೆ..

ನಗರದ ಹಳೇ ಕುಂದುವಾಡದಲ್ಲಿ ಹಿಂದೂ ಯುವ ಸೇನಾ ವತಿಯಿಂದ 79ನೇ ಸ್ವಾತಂತ್ರ್ಯ ವರ್ಷ, ಸಂಗೊಳ್ಳಿ ರಾಯಣ್ಣ ಜಯಂತಿ ಹಾಗೂ ಗಣೇಶ ಹಬ್ಬದ ಅಂಗವಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಸಂಗೊಳ್ಳಿ ರಾಯಣ್ಣರ ಪಾತ್ರ, ಸ್ವತಂತ್ರ ಹೋರಾಟದಲ್ಲಿ ಗಣೇಶ ಚತುರ್ಥಿಯ ಹಬ್ಬ ಬಂದಿದ್ದು ಹೇಗೆ, ಯುವಕರಲ್ಲಿ ದೇಶಭಕ್ತಿ, ಸಂಸ್ಕೃತಿ ಮೂಡಿಸುವುದು ಹೇಗೆ ಎಂಬ ವಿಷಯಗಳ ಕುರಿತು ನಡೆದ ದಿಕ್ಸೂಚಿ ಭಾಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸ್ವಾತಂತ್ರ್ಯ ಹೋರಾಟದ ಕಿಚ್ಚು ಹೊತ್ತಿಸಲೆಂದೆ ಬಾಲಗಂಗಾಧರ ತಿಲಕ್ ರವರು ಗಣೇಶ ಚತುರ್ಥಿ ಪ್ರಾರಂಭ ಮಾಡಿದರು, ಈ ಒಂದು ಹಬ್ಬ ದೇಶದ ಜನರ ಒಗ್ಗೂಡಿಕೆಗೆ ಸಾಕ್ಷಿಯಾಗಿ ಮುಂದೆ ಸ್ವಾತಂತ್ರ್ಯೋತ್ಸವಕ್ಕೂ ಕಾರಣವಾಯಿತು, ವೀರ ಸಾವರ್ಕರ್ ಅವರ ಪ್ರಥಮ ಭಾಷಣ ನಡೆದಿದ್ದೆ ಗಣೇಶೋತ್ಸವದ ಪೆಂಡಲ್ ನಲ್ಲಿ ಕ್ರಾಂತಿಕಾರಿಗಳು ಹುಟ್ಟಿಕೊಂಡಿದ್ದೆ ಗಣೇಶೋತ್ಸವ ಕಾರ್ಯಕ್ರಮಗಳಿಂದ ಗಣೇಶನ



ಹಬ್ಬ ಕ್ರಾಂತಿಕಾರಿಗಳ ಕಾರ್ಖಾನೆಯಾಗಿ ಮಾರ್ಪಟ್ಟು ಮುಂದೆ ಸ್ವತಂತ್ರದ ಕಿಚ್ಚು ಹಚ್ಚಿಸುವಲ್ಲಿ ಪ್ರಮುಖ ಘಟ್ಟವಾಗಿತ್ತು ಎಂದರು.

ಆರು ಅಡಿ ಎತ್ತರದ ದೇಹ ಹೊಂದಿದ್ದ ಸಂಗೊಳ್ಳಿ ರಾಯಣ್ಣ ಅವರ ಜೀವನವೇ ಆದರ್ಶ, ಹುಟ್ಟಿದರೆ ಈ ನಾಡಿಗಾಗಿ ಎಂಬ ಸಂದೇಶ ಕೊಟ್ಟು ಹೋದವರು ನಮ್ಮ ಸಂಗೊಳ್ಳಿ ರಾಯಣ್ಣ ರಾಯಣ್ಣನವರು, ಅವರ ಇಡೀ ಜೀವನ ದೇವನಿರ್ಮಿತ, ಅವರು ಹುಟ್ಟಿದ್ದು ಆಗಸ್ಟ್ 15 ನಮಗೆ ಸ್ವಾತಂತ್ರ್ಯ ದಿನಾವಾದರೆ, ಹುತಾತ್ಮರಾಗಿದ್ದು ಜನವರಿ 26 ನಮಗೆ ಗಣರಾಜ್ಯೋತ್ಸವ, ಎರಡು ದಿನವೂ ಭಾರತ ದೇಶದ ಸೌಭಾಗ್ಯದ ದಿನವಾಗಿದೆ ಎಂದರು.

500 ವರ್ಷಗಳ ಹೋರಾಟದ ನಂತರ 78 ಮಹಾ ಕದನದ ನಂತರ ಲಕ್ಷ ಲಕ್ಷ ಜನರ ಹಿಂದೂ ಕಾರ್ಯಕರ್ತರ ಬಲಿದಾನ ನಂತರ ಶತಮಾನಗಳ ಕನಸು ಅಯೋಧ್ಯೆ ರಾಮ ಮಂದಿರ ನಿರ್ಮಾಣ ನನಸಾಗಿದೆ, ಮುಂದೆ ಮನೆ ಮನೆಗಳಲ್ಲೂ ರಾಮಮಂದಿರ ಪರಿಕಲ್ಪನೆಯ ಸಂಕಲ್ಪ ಮಾಡಬೇಕಿದೆ, ಶ್ರೀರಾಮನ ಗುಣಗಳನ್ನ ಬೆಳೆಸಿಕೊಳ್ಳಬೇಕಿದೆ, ಪ್ರತಿ ಮನೆಗಳಲ್ಲಿ ಜಾಗೃತಿ ಮೂಡಿಸುವ ಪ್ರಕ್ರಿಯೆ ಶುರುವಾಗಬೇಕಿದೆ, ಯಾವುದೇ ರಾಜಕೀಯ ಪಕ್ಷದಲ್ಲಿದ್ದರೂ ಸಹ ಕೇಸರಿ ಶಾಲು ಹಾಕಿದ ತಕ್ಷಣ ನಾವೆಲ್ಲ ಹಿಂದೂ ಅಂತ ಹೇಳಿ ಹಿಂದೂ ಸಮಾಜವನ್ನು ಕಟ್ಟುವ ಪ್ರಕ್ರಿಯೆ ಮಾಡಬೇಕು, ದೇಶಭಕ್ತಿ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಇನ್ನೂ ಹಾರಿಕ ಮಂಜುನಾಥ್ ಅಬ್ಬರದ ಭಾಷಣಕ್ಕೆ ಶಿಳ್ಳೆ ಚಪ್ಪಾಳೆ ಸುರಿಮಳೆಯಾಯಿತು.

ಈ ಸಂದರ್ಭದಲ್ಲಿ ಮಾಜಿ ಮೇಯರ್ ಎಸ್ ಟಿ ವೀರೇಶ್, ಎಚ್ ಎನ್ ಗುರುನಾಥ್, ಎಪಿಎಂಸಿ ಮಾಜಿ ಅಧ್ಯಕ್ಷ ಹೆಚ್ ಜಿ ಗಣೇಶಪ್ಪ, ಮುಖಂಡರಾದ ಜೆಸಿ ದೇವರಾಜ್ ಬಸವರಾಜ್ ಹಕ್ಕಿ, ಎನ್ ಟಿ ನಾಗರಾಜ್, ಸಂಪತ್ ಕುಮಾರ್ ಮಧು ನಾಗರಾಜ್, ರಮೇಶ್, ಅಜಯ್, ಅಶೋಕ್, ಹಿಂದೂ ಯುವ ಸೇನೆ ಸದಸ್ಯರು ಸೇರಿದಂತೆ ಮತ್ತಿತರರಿದ್ದರು..

# ಸಮಚಿತ್ತ ತೂಕದ ದೀಪಾ ಬಾಸ್ತಿ


ಸರ್ಕಾರದಿಂದ ನಡೆಸುವ ಒಂದು ಪ್ರತಿಷ್ಠಿತ ಮಕ್ಕಳ ಸಾಹಿತ್ಯ ಪ್ರಶಸ್ತಿಯ ತೀರ್ಪುಗಾರರಾಗಿ ನಾನು ಮತ್ತು ದೀಪಾ ಬಾಸ್ತಿ ಒಟ್ಟಿಗೇ ಕೆಲಸ ಮಾಡಿದ್ದೆವು. ನಿರಂತರವಾಗಿ ನಾಲ್ಕು ವರ್ಷವೂ ಜೊತೆಗೇ ಕೆಲಸ ಮಾಡಿದ್ದರಿಂದ ದೀಪಾ ವ್ಯಕ್ತಿತ್ವವನ್ನು ಹತ್ತಿರದಿಂದ ಕಾಣುವಂತಾಯ್ತು. ಮಕ್ಕಳು ಬರೆದ ಕತೆಗಳನ್ನೂ, ಪ್ರಬಂಧಗಳನ್ನೂ ಒಂದಕ್ಷರವೂ ಬಿಡದೆ ಓದುತ್ತಾ, ಚರ್ಚಿಸುತ್ತಾ ವಿಮರ್ಶೆ ಮಾಡುತ್ತಿದ್ದೆವು. ಆಗಲೇ ಅನ್ನಿಸಿತ್ತು, ಇಷ್ಟು ಕಿರಿಯ ವಯಸ್ಸಿನಲ್ಲೇ ದೀಪಾ ಬಾಸ್ತಿಯದು ಎಂಥಾ ಪರಿಪಕ್ವ ಮನಸ್ಥಿತಿ, contained personality ಎಂದು. ಸೌಮ್ಯ ಸ್ವಭಾವದ ದೀಪಾ ತಾನಾಯ್ತು, ತನ್ನ ಕೆಲಸವಾಯ್ತು ಎಂದು ತನ್ನ ಚಿಂತನೆಯ ಲೋಕದಲ್ಲೇ ವಿಹರಿಸುವ ಪ್ರತಿಭಾವಂತೆ. ಒಮ್ಮೆ ಹಾಗೇ ಮಾತನಾಡುತ್ತಿರುವಾಗ ದೀಪಾ,"ಮೇಡಂ, ನನ್ನ ಮದುವೆ ಫಿಕ್ಸ್ ಆಗಿದೆ. ಇನ್ನುಮುಂದೆ ನಾನು ಕೂರ್ಗ್‌ನಲ್ಲೇ ಇರುತ್ತೇನೆ", ಎಂದು ಹೇಳಿದಳು. ಮದುವೆ ಬಗ್ಗೆ ಹೇಳುವಾಗಲೂ ಏರಿಳಿತವಿಲ್ಲದ ಮೆಲುದನಿ! ನುಣುಪಾದ ಕೆನ್ನೆಗಳು , ಚುರುಕಾದ ಕಣ್ಣುಗಳು ಮಾತ್ರ ಕಂಡೂಕಾಣದ ನಾಚಿಕೆಯಿಂದ ಫಳಗುಟ್ಟಿದ್ದವು. ಅಷ್ಟೊಂದು ಸಮಚಿತ್ತದ ಯುವತಿಯನ್ನು ನಾನು ನೋಡಿದ್ದು ಅದೇ ಮೊದಲು.

ಈಗ ಆ ದೀಪಾ ಅಂತರಾಷ್ಟ್ರೀಯ ಮಟ್ಟದ ಪ್ರತಿಷ್ಠಿತ ಬಹುಮಾನವನ್ನು ಪಡೆದಿದ್ದರೂ ಸ್ವಲ್ಪವೂ ತಲೆಗೇರಿಸಿಕೊಂಡಿಲ್ಲ. ಇನ್ನು ಅಹಂಕಾರವೆನ್ನುವುದು ದೂರದ ಮಾತೇ ಆಗಿದೆ. ಹೆಚ್ಚು ಮಾತೇ ಆಡುತ್ತಿಲ್ಲವೆಂದ ಮೇಲೆ



ಬಾಲಿಶ ಮಾತುಗಳು ದೀಪಾ ನಿಘಂಟುವಿನಲ್ಲಿ ಹತ್ತಿರವೂ ಸುಳಿಯಲಾರವು. ದೀಪಾಗೆ ಸೂಕ್ತವಾದ ಮನ್ನಣೆ ಸಿಗದಿರುವುದಕ್ಕೆ ನಿಜಕ್ಕೂ ಬೇಸರವಾಗುತ್ತಿದೆ. ಬೂಕರ್ ಬಹುಮಾನ ಗಳಿಸಿರುವ ಕಾರಣಕ್ಕೇ ಕರ್ನಾಟಕ ಸರ್ಕಾರ ನೀಡಿರುವ ನಿವೇಶನದಲ್ಲೂ ದೀಪಾಗೆ ಸರಿಯಾಗಿ ನ್ಯಾಯ ಸಿಕ್ಕಿಲ್ಲ ಎಂಬ ಕೂಗೊಂದು ಕೇಳಿಬಂದಿತು. ಅದೆಷ್ಟು ಸತ್ಯವೋ ಗೊತ್ತಿಲ್ಲ. ಹಾಗೇನಾದರೂ ಆಗಿದ್ದರೆ ಅದೊಂದು ಅನ್ಯಾಯವೇ ಸರಿ. ಆ ಸುದ್ದಿ ನಿಜವಾಗದಿರಲಿ. ಪ್ರಶಸ್ತಿ/ಬಹುಮಾನ ಎಂಬುದು ವ್ಯಕ್ತಿತ್ವವನ್ನು ಇನ್ನಷ್ಟು ಮಾಗಿಸಬೇಕು...ಬೆಳಗಿಸಬೇಕು. ಇನ್ನಷ್ಟು ಸನ್ಮಾನದ ಆಸೆಗಾಗಿ ಏನೆಂದರದು ಅಪ್ರಬುದ್ಧ ಮಾತುಗಳನ್ನಾಡುವುದು ಆ ಪ್ರಶಸ್ತಿಗೆ ಮಾಡುವ ಅವಮಾನವೇ ಆಗುತ್ತದೆ. ಜನಮಾನಸದಲ್ಲಿ ಹಿಮಾಲಯಕ್ಕೆ ಏರಿದ್ದ ಸ್ಥಾನ ಪ್ರಪಾತಕ್ಕೆ ಬೀಳುವುದಕ್ಕೆ ಹೆಚ್ಚು ಸಮಯ ಬೇಕಾಗಿಲ್ಲ. ಸಮರ್ಥನೆಗಾಗಿ ಏನೇನೋ ಬಾಲಿಶ ಹೇಳಿಕೆಗಳನ್ನು ಕೊಡದಿರಲಿ. ಇಲ್ಲಿ ಜಾತಿ, ಮತ, ಧರ್ಮ, ಲಿಂಗ...ಯಾವ ಬ್ಯಾರಿಕೇಡೂ ಇಲ್ಲ. ಉತ್ತಮವಾದ ವ್ಯಕ್ತಿತ್ವ ಅವೆಲ್ಲವನ್ನೂ ಮೀರಿ ಮೆಚ್ಚುಗೆ ಗಳಿಸುತ್ತದೆ. ಅದಕ್ಕೆ ಲೆಕ್ಕವಿಲ್ಲದಷ್ಟು ನಿದರ್ಶನಗಳು ನಮ್ಮಲ್ಲಿವೆ. ಪ್ರತಿಯೊಬ್ಬರಿಗೂ ಅವರದೇ ಆದ ಧರ್ಮ, ಜಾತಿಗಳಿವೆ. ಒಬ್ಬರಿಗೊಬ್ಬರು ಗೌರವಿಸುತ್ತಾ ಬದುಕುವುದೇ ನಿಜವಾದ ಮಾನವೀಯ ಧರ್ಮ. ಆ ವಿಶಾಲ ಮನೋಭಾವನೆಯಿಂದ ಬಂದರೆ ಯಾವುದೇ ಧಾರ್ಮಿಕ/ನಾಡ ಉತ್ಸವಕ್ಕೆ ಸ್ವಾಗತ ಕೋರುವ ಸಹೃದಯತೆ ಕನ್ನಡಿಗರಿಗಿದೆ. ನಮ್ಮೊಡನಿದ್ದೂ ನಮ್ಮವರಾಗಿಯೇ ಇರಲಿ ಎಂದಷ್ಟೇ ಕೇಳುವುದು.

ಏನೇ ಹೇಳಿ, ದೀಪಾ ವ್ಯಕ್ತಿತ್ವ ಇನ್ನೂ ಎತ್ತರಕ್ಕೆ ಏರಿತು. ಯಾವುದೇ ಅಬ್ಬರ ಬಯಸದೆ ಸದ್ದಿಲ್ಲದೆ ಅದಾಗಲೇ ಮತ್ತೊಂದು ಕೃತಿಯ ಕೆಲಸದಲ್ಲಿ ಲೀನವಾಗಿದ್ದಾರೆ "ಲೆಟ್ ಗೋ" ಮನಸ್ಸಿನ ದೀಪಾ ಬಾಸ್ತಿ. ಆಲ್ ದಿ ಬೆಸ್ಟ್ ಆಕೆಗೆ.



**ಕಿರಣ್ ರಾಜನಹಳ್ಳಿ**
ಸಾಹಿತಿ

# ಜಿ.ಎಸ್.ಬಿ. ಸಮಾಜದ ವಿಜೃಂಭಣೆಯ ಶ್ರೀ ಗಣೇಶೋತ್ಸವ ಸುವರ್ಣ ಮಹೋತ್ಸವ ಸಮಾರಂಭ ಸುಸಂಪನ್ನ

**ದಾವಣಗೆರೆ:** ದಾವಣಗೆರೆಯ ಗೌಡ ಸಾರಸ್ವತ ಸಮಾಜದ ಶ್ರೀ ಗಣೇಶೋತ್ಸವದ ಸುವರ್ಣ ಮಹೋತ್ಸವದ ವಿಜೃಂಭಣೆಯ 5 ದಿನಗಳ ಕಾಲ ನಡೆದ ಸಮಾರಂಭ ಸುಸಂಪನ್ನಗೊಂಡಿತು ಎಂದು ಸಮಾಜದ ನಿಕಟಪೂರ್ವ ಅಧ್ಯಕ್ಷರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಆಗಸ್ಟ್ 27 ರಿಂದ 31 ರವರೆಗೆ ನಗರದ ಶ್ರೀ ಸುಕೃತೀಂದ್ರ ಕಲಾ ಮಂದಿರದಲ್ಲಿ ಮಹಿಳೆಯರ, ಪುರುಷರ, ಮಕ್ಕಳ ನಾಟಕ, ನೃತ್ಯ, ಸಂಗೀತ, ಸಾಂಸ್ಕೃತಿಕ ಚಟುವಟಿಕೆಗಳು, ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಮಕ್ಕಳಿಗೆ, ಮಹಿಳೆಯರಿಗೆ, ಪುರುಷರಿಗೆ ಕ್ರಿಕೇಟ್ ಸೇರಿದಂತೆ ಆಟೋಟ ಸ್ಪರ್ಧೆ, ಛದ್ಮವೇಷ ಸ್ಪರ್ಧೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಯಶಸ್ವಿಯಾಗಿ ನಡೆಯಿತು ಎಂದು ಸಮಾಜದ ಅಧ್ಯಕ್ಷರಾದ ಶ್ರೀಮತಿ ಅಮಿತಾ ಡಾ. ವೇಣುಗೋಪಾಲ್ ಪೈಯವರು ಪ್ರಕಟಿಸಿದ್ದಾರೆ.

ಆಗಸ್ಟ್ 27 ರಂದು ಸಮಾಜದ ಸುವರ್ಣ ಮಹೋತ್ಸವ ಉದ್ಘಾಟನೆ, ಸಮಾಜದ ಲಾಂಛನ ಲೋಕಾರ್ಪಣೆ ನಡೆಯಿತು. ಆಗಸ್ಟ್ 31 ರಂದು ಭಾನುವಾರ ರಾತ್ರಿ ಶ್ರೀ ಗಣಪತಿ ವಿಸರ್ಜನೆ ಹಮ್ಮಿಕೊಳ್ಳಲಾಗಿದ್ದು ಅಂತರಾಷ್ಟ್ರೀಯ ಖ್ಯಾತ ಸಂಗೀತಗಾರರಾದ ಬೆಂಗಳೂರಿನ ಶಂಕರ ಶ್ಯಾನಭಾಗರವರ ಎರಡು ಗಂಟೆಗಳ ಕಾಲ ಭಕ್ತಿಗೀತೆ, ರಾಷ್ಟ್ರಗೀತೆ, ಸುಗಮ ಸಂಗೀತ ಸಮಾರಂಭ ಯಶಸ್ವಿಯಾಯಿತು. 5 ದಿನಗಳ ಕಾಲ ಪ್ರತೀದಿನ ನಿತ್ಯಪೂಜೆ, ಗಣಹೋಮ, ರಂಗಪೂಜೆ, ಮೂಡಗಣಪತಿ ಹೂವಿನ ಅಲಂಕಾರ ಪೂಜೆ, ಅನ್ನಸಂತರ್ಪಣೆ, ಸಾಲಿಗ್ರಾಮ ಗಣೇಶ್ ಶೆಣೈಯವರ ಮಹಾಭಾರತ, ರಾಮಾಯಣದ ಬಗ್ಗೆ ಉಪನ್ಯಾಸ ನೆರೆದ ಪ್ರೇಕ್ಷಕರ ಮೆಚ್ಚುಗೆ ಪಡೆದರು.

# ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಅಭಿಯಾನ

**ಹಾಸನ :** ಪರಿಶಿಷ್ಟ ಪಂಗಡದ ವಿದ್ಯಾರ್ಥಿ ವೇತನ ಮಂಜೂರಾತಿ ಸಂಬಂಧ ಅರ್ಹ ವಿದ್ಯಾರ್ಥಿಗಳು ಆಧಾರ್ ಸೀಡ್ ಮಾಡಿಸದೆ ಬಾಕಿ ಉಳಿದಿರುವ ಅರ್ಜಿಗಳಿಗೆ ಆಧಾರ್ ಸೀಡ್ ಮಾಡಿಸಿಕೊಳ್ಳಲು ಆಧಾರ್ ಸೀಡಿಂಗ್ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಆಧಾರ್ ಸೀಡ್ ಆಗದೆ ಬಾಕಿ ಉಳಿದಿರುವ ಅರ್ಹ ವಿದ್ಯಾರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ್ ಸೀಡ್ ಮಾಡಿಸಿಕೊಳ್ಳುವುದು ಈ ಕುರಿತು ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ಆಯಾ ತಾಲ್ಲೂಕು ಸಹಾಯಕ ನಿರ್ದೇಶಕ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಇಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಲು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಅನುಪಾಲನಾ ವರದಿಯ ಸಲ್ಲಿಸಲು ಸೂಚನೆ

**ಹಾಸನ :** ಹಾಸನ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಹಕಾರ ಸಂಘಗಳು ಹಾಗೂ ಸೌಹಾರ್ದ ಸಂಘಗಳು 2024–25 ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಸನ್ನದು/ಇಲಾಖಾ ಲೆಕ್ಕಪರಿಶೋಧಕರಿಂದ ಸ್ವೀಕರಿಸಿದ ನಂತರ ಸಹಕಾರ ಸಂಘಗಳ ಕಾಯ್ದೆ ಕಲಂ 63(10) ರನ್ವಯ ಹಾಗೂ ಸೌಹಾರ್ದ ಸಹಕಾರಿಗಳು ಕಲಂ 33(10) ರನ್ವಯ ಅನುಪಾಲನಾ ವರದಿಯನ್ನು 30 ದಿನಗಳೊಳಗಾಗಿ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರ ಕಚೇರಿಗೆ ಸಲ್ಲಿಸುವುದು. ಲಾಭ ವಿಂಗಡಣೆಯಾದ ಸಹಕಾರ ಸಂಘಗಳು ಸಹಕಾರ ಶಿಕ್ಷಣ ನಿಧಿಯನ್ನು ಮಹಾಮಂಡಳಕ್ಕೆ ಪಾವತಿಸುವುದು. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಶುಲ್ಕ ಪಾವತಿಸಲು ಬಾಕಿಯಿದ್ದಲ್ಲಿ ಸರ್ಕಾರಕ್ಕೆ ಪಾವತಿ ಮಾಡುವುದು.

# ಪೇಪರ್ ಗಣೇಶನ ಪ್ರತಿಷ್ಠಾಪನೆ

**ದಾವಣಗೆರೆ:** 12 ಅಡಿ ಎತ್ತರದ ಭವ್ಯ ಗಣಪತಿ ಮಕ್ಕಳು ಎಳೆಯುತ್ತಿದ್ದ ರಥದ ಮೇಲೆ ಗಂಭೀರವದನವಾಗಿ ವಿರಾಜಮಾನನಾಗಿದ್ದನು. ಶಾಲೆಯ ಮಕ್ಕಳು ವಿವಿಧ ವೇಷ ಭೂಷಣಗಳಲ್ಲಿ ಆಗಮಿಸಿದ್ದರು. ತಿರುಪತಿ ವೆಂಕಟೇಶ, ಧನಲಕ್ಷ್ಮಿ, ಮಧುರೆ ಮೀನಾಕ್ಷಿ, ಚಾಮುಂಡೇಶ್ವರಿ, ಗಣಪತಿ, ಶಿವಾಜಿ, ರಾಮ, ಸೀತೆ, ಲಕ್ಷ್ಮಣ, ಹನುಮಂತ, ಪರಶುರಾಮ, ರಾಧಾಕೃಷ್ಣ ಹೀಗೆ ಸುಮಾರು ಇನ್ನೂರಕ್ಕೂ ಹೆಚ್ಚು ಮಕ್ಕಳು ಪೌರಾಣಿಕ ಪಾತ್ರದಲ್ಲಿ ಕಣ್ಮನ ಸೆಳೆಯುವಂತಿದ್ದರು. ಬೆಳಿಗ್ಗೆ 9 ಗಂಟೆಗೆ ಶಾಲೆಯಿಂದ ಪರಿಸರ ಸ್ನೇಹಿ ಪೇಪರ್ ಗಣಪತಿಯನ್ನು ಗಾಂಧಿ ಸರ್ಕಲ್‌ಗೆ ತಂದರು. ಅಲ್ಲಿಂದ ನಂದಿಕೋಲು, ಡೊಳ್ಳು, ವೀರಗಾಸೆ, ಪಟಗಳನ್ನು ಹಿಡಿದ ಮಕ್ಕಳು ಆಗಮಿಸಿ ಮೆರವಣಿಗೆಗೆ ಸಿದ್ಧರಾದರು. ಜೊತೆಗೆ ಸಾವಿರಕ್ಕೂ ಹೆಚ್ಚು ಮಕ್ಕಳು ಸಾಂಪ್ರದಾಯಿಕ ಉಡುಗೆಯಲ್ಲಿ ಶಿಸ್ತುಬದ್ಧವಾಗಿ ಮೆರವಣಿಗೆಯೊಡನೆ ಹೆಜ್ಜೆ ಹಾಕಿದರು.

ಶಾಲೆಯ ವಾದ್ಯವೃಂದದವರು ಭಕ್ತಿ ಗೀತೆಗಳನ್ನು ಸುಶ್ರಾವ್ಯವಾಗಿ ಹಾಡುತ್ತಾ ನಡೆದರು. ನಡುನಡುವೆ ಮಕ್ಕಳ ಉದ್ಘೋಷ ದಾರಿಹೋಕರ ಗಮನ ಸೆಳೆಯಿತು. ಕ್ಷಣಕಾಲ ನಿಂತು ಗಣಪತಿಗೆ ಕೈ ಮುಗಿಯುತ್ತಿದ್ದರು. ಮೆರವಣಿಗೆ ಗಾಂಧಿ ಸರ್ಕಲ್‌ನಿಂದ ಜಯದೇವ ಸರ್ಕಲ್, ಅಂಬೇಡ್ಕರ್ ಸರ್ಕಲ್ ಮೂಲಕವಾಗಿ ಸಿದ್ಧಗಂಗಾ ಶಾಲೆಯ ಆವರಣ ತಲುಪಿತು. ಬೃಹತ್ ಮೆರವಣಿಗೆ ಭಕ್ತಿಪೂರ್ವಕ ವಾತಾವರಣ ಸೃಷ್ಟಿಸಿತು. ರಸ್ತೆಯ ಇಕ್ಕೆಲಗಳಲ್ಲಿ ನಿಂತಿದ್ದ ಜನರು ಸಿದ್ಧಗಂಗಾ ಸಂಸ್ಥೆಯ ಮಕ್ಕಳೇ ತಯಾರಿಸಿದ ಈ ಪೇಪರ್ ಗಣಪತಿ ನೋಡಿ ದಿಂತರಾದರು. ಕೆಲವರು ಸ್ಪರ್ಶಿಸಿ ಪುನೀತರಾದರು. ನಾಲ್ಕು ಮಕ್ಕಳು ಎತ್ತಬಹುದಾದ 12 ಅಡಿ ಎತ್ತರದ ಪರಿಸರ ಸ್ನೇಹಿ ಗಣಪ ಸಾರ್ವಜನಿಕ ವೀಕ್ಷಣೆಗೆ 10 ದಿನಗಳ ಕಾಲ ಲಭ್ಯವಿದೆ. 11ನೇ ದಿನ ವಿಸರ್ಜಿಸಲಾಗುವುದು.

ಪ್ರತಿವರ್ಷ ಗಣೇಶ ಚತುರ್ಥಿಯನ್ನು ವಿಭಿನ್ನವಾಗಿ ಸಾಂಪ್ರದಾಯಿಕವಾಗಿ ಆಚರಿಸುವ ಮಕ್ಕಳಲ್ಲಿ ಭಕ್ತಿಭಾವ ಮೂಡಿಸುವುದರ ಜೊತೆಗೆ ಶಾಲಾ



ಮಕ್ಕಳೇ ರೂಪಿಸುವ ಗಣಪತಿ ಪೂಜೆಗೆ ಹಲವಾರು ಪಾಲಕರು ಆಗಮಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಸಂಸ್ಥೆಯ ನಿರ್ದೇಶಕ ಡಾ|| ಜಯಂತ್ ಅವರ ಪರಿಕಲ್ಪನೆಯಲ್ಲಿ ಕಳೆದ ಹನ್ನೆರಡು ವರ್ಷಗಳಿಂದ ಶಾಲೆಯ ಚಿತ್ರಕಲಾ ಶಿಕ್ಷಕರ ನೆರವಿನಿಂದ ಸುಂದರ ರೂಪ ತಾಳುವ ಪೇಪರ್ ಗಣಪತಿಗೆ ಪ್ರತಿನಿತ್ಯ ಬೆಳಿಗ್ಗೆ ಶಾಲಾ ಮಕ್ಕಳು ಪೂಜಾ ಕಾರ್ಯದ ನೇತೃತ್ವ ವಹಿಸುವರು. ಕಾರ್ಯದರ್ಶಿ ಹೇಮಂತ್ ಹಾಗೂ ದೈಹಿಕ ಶಿಕ್ಷಕರ ಮೇಲ್ವಿಚಾರಣೆಯಲ್ಲಿ ಪ್ರತಿ ತರಗತಿಯ ಶಿಕ್ಷಕರು ಈ ಮಕ್ಕಳಿಗೆ ಮಾರ್ಗದರ್ಶನ ನೀಡುವರು. ಭಾವೈಕ್ಯತೆ, ಭಾತೃತ್ವ ಬೆಳೆಸುವಲ್ಲಿ ಮಹಾಗಣಪತಿಯ ಪಾತ್ರ ಹಿರಿದಾಗಿದೆ. ಇಡೀ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಪರಸ್ಪರ ಸಹಕಾರದಿಂದ ಈ ಬೃಹತ್ ಯೋಜನೆಯನ್ನು ಕಾರ್ಯಗತಗೊಳಿಸುತ್ತಿದ್ದಾರೆ.

# ವಿಶೇಷ ಸಹಕಾರ ತರಬೇತಿ ಶಿಬಿರದ ಉದ್ಘಾಟನೆ



**ಗದಗ :** ಸಹಕಾರ ಇಲಾಖೆ, ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಹಾಗೂ ಕೆ.ಸಿ.ಸಿ. ಬ್ಯಾಂಕ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಹಾಗೂ ಒಬ್ಬ ನಿರ್ದೇಶಕರುಗಳಿಗೆ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರವು ಗುರುವಾರ ದಿ.ಕೆ.ಸಿ.ಸಿ ಬ್ಯಾಂಕ್ ಲಿ., ರೋಣ ಇದರ ಸಭಾಭವನ, ತಾ. ರೋಣ ಜಿ.ಗದಗ ಇದರ ಸಭಾಭವನದಲ್ಲಿ ಜರುಗಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿ., ಬೆಂಗಳೂರು ಇದರ ಅಧ್ಯಕ್ಷರು ಹಾಗೂ ಕೆ.ಸಿ.ಸಿ.ಬ್ಯಾಂಕ್ ಲಿ., ಧಾರವಾಡ ನಿರ್ದೇಶಕರಾದ ಜಿ. ಪಿ. ಪಾಟೀಲ ಉದ್ಘಾಟಿಸಿ ಮಾತನಾಡುತ್ತಾ ಇತ್ತೀಚಗೆ ಪ್ರಾಥಮಿಕ ಸಹಕಾರ ಸಹಕಾರ ಸಂಘಗಳಲ್ಲಿ ಹಣ ದುರುಪಯೋಗ ಪ್ರಕರಣಗಳು ಹೆಚ್ಚಾಗುತ್ತಿದ್ದು ಇದಕ್ಕೆ ಕಡಿವಾಣ ಹಾಕಬೇಕಾಗಿದೆ. ಕಾರಣ ಸಂಘದ ಅಧ್ಯಕ್ಷರು ಹಾಗೂ ಆಡಳಿತ ಮಂಡಲಿ ನಿರ್ದೇಶಕರುಗಳ ಕರ್ತವ್ಯ ಪ್ರಮುಖವಾಗಿರುತ್ತದೆ. ಈ ಕುರಿತು ಇಂದು ಸಂಘಗಳ ಪ್ರಗತಿಗೆ ಶ್ರಮಿಸಿದ ಸಹಕಾರಿಗಳು ಮತ್ತು ಇಲಾಖಾ ಅಧಿಕಾರಿಗಳಿಂದ ಉಪನ್ಯಾಸಗಲನ್ನು ಏರ್ಪಡಿಸಲಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

"ಸಭೆಗಳು ಹಾಗೂ ಸಭೆಗಳಲ್ಲಿನ ಪ್ರಕಾರಗಳ" ಕುರಿತು ಕೆ.ಓ.ಎಫ್. ಹುಬ್ಬಳ್ಳಿ ಮಾಜಿ ಅಧ್ಯಕ್ಷರಾದ ವ್ಹಿ. ಬಿ. ಚಿಕ್ಕರಡ್ಡಿ ಹಾಗೂ "ಸಾಲ ತರುವುದು, ವಿತರಿಸುವುದು, ವಸೂಲಿ ಹಾಗೂ ಸಂಬಂಧಿಸಿದ ಬ್ಯಾಂಕಿಗೆ ಮರುಪಾವತಿಸುವ" ಕುರಿತು ರೋಣ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ ಉಪನ್ಯಾಸ ನೀಡಿದರು.

ಹಿರೇಹಾಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕರಾದ ಶಂಕರಗೌಡ ವ್ಹಿ. ಗೌಡರ ಪ್ರಾರ್ಥನೆ ಮಾಡಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ ಹಾಗೂ ಕಾರ್ಯಕ್ರಮವನ್ನು ನಿರೂಪಿಸಿದರು, ಯೂನಿಯನ್‌ದ ಮಹಿಳಾ ಸಹಕಾರ ಶಿಕ್ಷಕಿ ಶ್ರೀಮತಿ ರಶೀದಾಬಾನು ಸಿ. ಯಲಿಗಾರ ವಂದಿಸಿದರು.

# ಸೈಬರ್ ವಂಚನೆಗಳಿಂದ ಗ್ರಾಹಕರು ಎಚ್ಚರಿಕೆಯಿಂದಿರಬೇಕು

**ದಾವಣಗೆರೆ :** ಕೆನರಾ ಬ್ಯಾಂಕ್ ಬಿಳಿಚೋಡು ಶಾಖೆಯ ವತಿಯಿಂದ ಗ್ರಾಮದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ಅಡಿಯಲ್ಲಿ ಸ್ಯಾಚುರೇಷನ್ ಕ್ಯಾಂಪೇನ್ ಇತ್ತೀಚೆಗೆ ನಡೆಯಿತು.

ಕೆನರಾ ಬ್ಯಾಂಕ್ ನ ಹಿರಿಯ ವ್ಯವಸ್ಥಾಪಕರಾದ ಸಂಜಯ್ ಕುಮಾರ್ ಎಚ್.ಜಿ., ಸಾಮಾಜಿಕ ಭದ್ರತಾ ಯೋಜನೆಗಳ ಮಹತ್ವ ಮಾಹಿತಿ ನೀಡಿದ ಅವರು, ಪ್ರಧಾನ ಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ (ಕಜಎಎಃಜ), ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ (ಕಜಖಃಜ), ಅಟಲ್ ಪಿಂಚಣಿ ಯೋಜನೆ (ಂಕಜ) ಗಳ ಲಾಭಗಳನ್ನು ತಿಳಿಸಿದರು. ಅಲ್ಲದೆ, ಗ್ರಾಹಕರು ಸೈಬರ್ ವಂಚನೆಗಳಿಂದ ಎಚ್ಚರಿಕೆಯಿಂದಿರಬೇಕು ಎಂದು ಸಲಹೆ ನೀಡಿದರು.

ಬೆಂಗಳೂರು ಮಹಾಪ್ರಬಂಧಕರಾದ ದಿಲ್ಲಿ ಬಾಬು ಜಿ.ಆರ್., ಉಪ ಮಹಾಪ್ರಬಂಧಕರಾದ ತನ್ಮಯ ದಾಸ್, ಯೋಜನಾ ನಿರ್ದೇಶಕಿ ರೇಷ್ಮಾ



ಕೌಸರ್, ಪಿಡಿಓ ನಂದಿ ಲಿಂಗೇಶ್, ವಿಭಾಗೀಯ ಪ್ರಬಂಧಕರಾದ ಪಡದಯ್ಯ ಹಿರೇಮಠ್, ಕೆನರಾ ಬ್ಯಾಂಕ್ ಹಿರಿಯ ವ್ಯವಸ್ಥಾಪಕರಾದ ಸಂಜಯ್ ಕುಮಾರ್ ಎಚ್.ಜಿ., ಬಿಳಿಚೋಡು ಪ್ರಮುಖ ಅತಿಥಿಗಳಾಗಿ ಭಾಗವಹಿಸಿದ್ದರು.

ಬ್ಯಾಂಕ್ ಅಧಿಕಾರಿಗಳಾದ ಶಕ್ತಿ ಪ್ರಸಾದ್ ಜೆ.ಟಿ., ತೇಜಸ್ವಿನಿ ಪಿ., ಹಾಗೂ ಸಿಬ್ಬಂದಿಗಳಾದ ಮೇಕಲಾ ಕೀರ್ತಿ, ಆಂಜಿನಪ್ಪ, ಜ್ಯೋತಿ, ಪರಶುರಾಮಪ್ಪ, ಬಸವರಾಜ, ಅರ್ಪಿತಾ ಉಪಸ್ಥಿತರಿದ್ದರು.

# ನೈಸರ್ಗಿಕ ವಿಕೋಪಕ್ಕೆ ಮೋದಿ ಕಳವಳ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮನ್ ಕಿ ಬಾತ್ ಕಾರ್ಯಕ್ರಮದ 125 ನೇ ಸಂಚಿಕೆಯಲ್ಲಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ್ದಾರೆ. ಅವರು ಹಲವು ಪ್ರಮುಖ ವಿಷಯಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ. ಕಾಶ್ಮೀರದಲ್ಲಿ ನಡೆದ ಕ್ರಿಕೆಟ್ ಪಂದ್ಯ, ಯುಪಿಎಸ್‌ಸಿ ಪರೀಕ್ಷೆಗೆ ಸಂಬಂಧಿಸಿದ ಹೊಸ ಉಪಕ್ರಮಗಳು, ನೈಸರ್ಗಿಕ ವಿಕೋಪಗಳ ಪರಿಹಾರ ಪ್ರಯತ್ನಗಳು ಮತ್ತು ಕ್ರೀಡಾಪಟುಗಳ ಅಭಿವೃದ್ಧಿಯಿಂದ ಹಿಡಿದು ದೇಶದ ಐತಿಹಾಸಿಕ ಕಾರ್ಯಾಚರಣೆಯವರೆಗೆ ಹಲವು ವಿಷಯಗಳನ್ನು ಚರ್ಚಿಸಲಾಗಿದೆ.

ಪ್ರಧಾನಿ ಮೋದಿ ಈ ಕಾರ್ಯಕ್ರಮವನ್ನು ನೈಸರ್ಗಿಕ ವಿಕೋಪಗಳೊಂದಿಗೆ ಪ್ರಾರಂಭಿಸಿದರು. ಪರ್ವತಗಳಲ್ಲಿ ಭಾರೀ ಮಳೆ ಮತ್ತು ಭೂಕುಸಿತಗಳಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳೊಂದಿಗೆ ಭದ್ರತಾ ಪಡೆಗಳು ಸಂತ್ರಸ್ತ ಜನರಿಗೆ ಸಹಾಯ ಮಾಡಲು ಹಗಲಿರುಳು ಶ್ರಮಿಸುತ್ತಿವೆ ಎಂದು ಪ್ರಧಾನಿ ಹೇಳಿದ್ದಾರೆ. ವಿಪತ್ತುಗಳ ಸಮಯದಲ್ಲಿ ಜಾಗರೂಕರಾಗಿರಿ ಮತ್ತು ಸ್ಥಳೀಯ ಆಡಳಿತದ ಸೂಚನೆಗಳನ್ನು ಪಾಲಿಸುವಂತೆ ಅವರು ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಕ್ರೀಡಾ ಅಭಿವೃದ್ಧಿಯನ್ನು ಪ್ರಧಾನಿ ಮೋದಿ ಎತ್ತಿ ತೋರಿಸಿದ್ದು ಪುಲ್ವಾಮಾ ಕ್ರೀಡಾಂಗಣದಲ್ಲಿ ದಾಖಲೆ ಸಂಖ್ಯೆಯ ಜನರು ಭಾಗವಹಿಸಿದ್ದರು ಮತ್ತು ಇಲ್ಲಿ ಹಗಲು–ರಾತ್ರಿ ಕ್ರಿಕೆಟ್ ಪಂದ್ಯವನ್ನು ನಡೆಸಲಾಯಿತು ಎಂದು ಅವರು ಹೇಳಿದ್ದಾರೆ. ಈ ಪಂದ್ಯವು ರಾಯಲ್ ಪ್ರೀಮಿಯರ್ ಲೀಗ್‌ನ ಭಾಗವಾಗಿತ್ತು. ಇದು ಮೊದಲು ಸಾಧ್ಯವಾಗಿರಲಿಲ್ಲ, ಆದರೆ ಈಗ ಭಾರತ ಬದಲಾಗುತ್ತಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

ಇದಲ್ಲದೆ, ಶ್ರೀನಗರದ ದಾಲ್ ಸರೋವರದಲ್ಲಿ ನಡೆದ ಭಾರತದ ಮೊದಲ ಖೇಲೋ ಇಂಡಿಯಾ ಜಲ ಕ್ರೀಡಾ ಉತ್ಸವವನ್ನು ಶ್ರೀ ಮೋದಿ ಪ್ರಸ್ತಾಪಿಸಿದರು. ಭಾರತದಾದ್ಯಂತ 800 ಕ್ಕೂ ಹೆಚ್ಚು ಕ್ರೀಡಾಪಟುಗಳು ಇದರಲ್ಲಿ ಭಾಗವಹಿಸಿದ್ದರು. ಕ್ರೀಡೆಯ ಮೂಲಕ ಏಕ್ ಭಾರತ್ ಶ್ರೇಷ್ಠ ಭಾರತ್ ನ ಮನೋಭಾವ ಮತ್ತು ದೇಶದ ಏಕತೆ ಬಲಗೊಳ್ಳುತ್ತದೆ ಎಂದು ಪ್ರಧಾನಿ ಹೇಳಿದರು. ಜೋ ಖೇಲಾ ಹೈ ವಹಿ ಖಿಲ್ತಾ ಹೈ ಎಂದೂ ಅವರು ಹೇಳಿದರು.

ನಾಗರಿಕ ಸೇವಾ ಪರೀಕ್ಷೆಗೆ ಸಂಬಂಧಿಸಿದಂತೆ ಪ್ರಧಾನಿ ಮೋದಿ, ಕಠಿಣ ಪರಿಶ್ರಮದ ಹೊರತಾಗಿಯೂ ಅನೇಕ ಅರ್ಹ ಯುವಕರು ಅಂತಿಮ ಪಟ್ಟಿಗೆ ಬರಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದ್ದಾರೆ.

# ವಿಮಾನ ತುರ್ತು ಭೂಸ್ಪರ್ಶ ತಪ್ಪಿದ ಅನಾಹುತ



**ನವದೆಹಲಿ:** ನಗರದಿಂದ ಇಂದೋರ್‌ಗೆ ಹೊರಟಿದ್ದ ಏರ್ ಇಂಡಿಯಾ ವಿಮಾನವು ಟೇಕ್ ಆಫ್ ಆದ ಸ್ವಲ್ಪ ಸಮಯದಲ್ಲಿ ಅನಾಹುತದ ಮುನ್ಸೂಚನೆ ದೊರೆತು ತುರ್ತು ಭೂಸ್ಪರ್ಶ ಮಾಡಲಾಗಿದೆ.

ಪೈಲಟ್‌ಗೆ, ವಿಮಾನದ ಬಲ ಎಂಜಿನ್‌ನಲ್ಲಿ "ಬೆಂಕಿಯ ಸೂಚನೆ" ದೊರೆತಿದ್ದರಿಂದ ಎಂಜಿನ್ ಆಫ್ ಮಾಡಿ ತುರ್ತು ಭೂಸ್ಪರ್ಶ ಮಾಡಲಾಗಿದ್ದು, ಪೈಲಟ್ ಸಮಯಪ್ರಜ್ಞೆಯಿಂದ ಭಾರೀ ಅನಾಹುತ ತಪ್ಪಿದೆ.

ಟೇಕ್‌ಆಫ್ ಆದ ಕೆಲವೇ ನಿಮಿಷಗಳಲ್ಲಿ ಎಂಜಿನ್‌ನಲ್ಲಿ ಬೆಂಕಿಯ ಸೂಚನೆ ಸೇರಿ ತಾಂತ್ರಿಕ ದೋಷ ಕಂಡುಬಂದಿದೆ. ಇದನ್ನು ಗಮನಿಸಿದ ಪೈಲಟ್‌ಗಳು ತಕ್ಷಣವೇ ದೆಹಲಿಯ ವಿಮಾನ ನಿಲ್ದಾಣಕ್ಕೆ ವಾಪಸ್ ಆಗಿ ತುರ್ತು ಭೂಸ್ಪರ್ಶ ಮಾಡಿದ್ದಾರೆ. ವಿಮಾನವನ್ನು ತಪಾಸಣೆಗಾಗಿ ಸ್ಥಗಿತಗೊಳಿಸಲಾಗಿದ್ದು, ಪ್ರಯಾಣಿಕರನ್ನು ಪರ್ಯಾಯ ವಿಮಾನದಲ್ಲಿ ಸ್ಥಳಾಂತರಿಸಲಾಗುತ್ತಿದೆ, ಅದು ಇಂದೋರ್‌ಗೆ ಹಾರಾಟ ನಡೆಸಲಿದೆ.ತುರ್ತು ಪರಿಸ್ಥಿತಿಯಲ್ಲಿ ಸಿಬ್ಬಂದಿಯ ವೃತ್ತಿಪರತೆಗೆ ಧನ್ಯವಾದಗಳನ್ನು ಅರ್ಪಿಸುತ್ತಾ, ಪ್ರಯಾಣಿಕರಿಗೆ ಉಂಟಾದ ಅನಾನುಕೂಲತೆಗೆ ತೀವ್ರ ವಿಷಾದ ವ್ಯಕ್ತಪಡಿಸುವುದಾಗಿ ವಿಮಾನಯಾನ ಸಂಸ್ಥೆ ತಿಳಿಸಿದೆ. ಆಗಸ್ಟ್ 31 ರಂದು ದೆಹಲಿಯಿಂದ ಇಂದೋರ್‌ಗೆ ಹಾರಾಟ ನಡೆಸುತ್ತಿದ್ದ ಎಐ2913 ವಿಮಾನವು, ಕಾಕ್‌ಪಿಟ್ ಸಿಬ್ಬಂದಿಗೆ ಸರಿಯಾದ ಎಂಜಿನ್‌ಗಾಗಿ ಬೆಂಕಿಯ ಸೂಚನೆಯನ್ನು ಪಡೆದ ಕಾರಣ, ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ದೆಹಲಿಗೆ ಮರಳಿತು" ಎಂದು ಏರ್ ಇಂಡಿಯಾ ತಿಳಿಸಿದೆ.

## ಕಾರ್ಯಾಗಾರ

**ಚಿಕ್ಕಮಗಳೂರು, ಆ.30:** ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಬೆಂಗಳೂರಿನ ಕರ್ನಾಟಕ ತಾಂತ್ರಿಕ ಸಲಹಾ ಸೇವಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ TReDs for MSME's Under RAMP Scheme ಒಂದು ದಿನದ ಕಾರ್ಯಾಗಾರವನ್ನು ನಗರದ ಬಸವನಹಳ್ಳಿ ಮುಖ್ಯರಸ್ತೆಯ ಹೋಟೆಲ್ ಕ್ರಿಸ್ಟಲ್ ಇನ್‌ನಲ್ಲಿ ಸೆಪ್ಟೆಂಬರ್ 8 ರಂದು ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿದೆ.

# ಜೆಡಿಎಸ್ ಪಕ್ಷದಿಂದ ಧರ್ಮಸ್ಥಳಕ್ಕೆ ನೂರಾರು ಕಾರ್ಯಕರ್ತರು ನಗರದಿಂದ ಸತ್ಯಯಾತ್ರೆ



**ಚಿಕ್ಕಮಗಳೂರು:** ಜೆಡಿಎಸ್ ಪಕ್ಷದಿಂದ ಧರ್ಮಸ್ಥಳಕ್ಕೆ ನೂರಾರು ಕಾರ್ಯಕರ್ತರು ಭಾನುವಾರ ನಗರದಿಂದ ಸತ್ಯಯಾತ್ರೆ ಆರಂಭಿಸಿದರು.

ಕಡೂರು, ತರೀಕೆರೆ ಹಾಗೂ ಚಿಕ್ಕಮಗಳೂರು ತಾಲೂಕಿನಿಂದ ಆಗಮಿಸಿದ್ದ ನೂರಾರು ಕಾರ್ಯಕರ್ತರು ಕೇಸರಿ ಶಲ್ಯ ಧರಿಸಿ ನಗದ ಜೆಡಿಎಸ್ ಕಚೇರಿ ಮುಂದೆ ಸಮಾವೇಶಗೊಂಡು ಅಲ್ಲಿಂದ ಯಾತ್ರೆ ಆರಂಭಿಸಿದರು.

ಯಾತ್ರೆಗೂ ಮುನ್ನ ಜೆಡಿಎಸ್ ಮುಖಂಡ, ವಿಧಾನಪರಿಷತ್ ಸದಸ್ಯ ಎಸ್.ಎಲ್.ಬೋಜೇಗೌಡ ಮಾತನಾಡಿ, ನಮ್ಮೆಲ್ಲರ ಆರಾಧ್ಯ ದೈವ ಶ್ರೀಮಂಜುನಾಥ, ಶ್ರೀಅಣ್ಣಪ್ಪಸ್ವಾಮಿ ಹಾಗೂ ಅಲ್ಲಿನ ಖಾವಂದರ ಬಗ್ಗೆ ಅಪಾರ ನಂಬಿಕೆ ಇದೆ. ಖಾವಂದರು ಸಮಾಜ ಸೇವೆಯಲ್ಲಿ ತಮ್ಮನ್ನುತಾವು ತೊಡಗಿಸಿಕೊಂಡು ಸರಕಾರ ಮಾಡದ ಕೆಲಸವನ್ನು ಮಾಡುತ್ತಿದ್ದಾರೆ.ಅವರನ್ನು ದೈವ ಸ್ವರೂಪದಲ್ಲಿ ನಾವು ನೋಡುತ್ತಿದ್ದೇವೆ. ಇಂತಹವರಿಗೆ , ಧರ್ಮಸ್ಥಳಕ್ಕೆ ಅಪಚಾರ ನಡೆಯುತ್ತಿರುವುದನ್ನು ನಾವು ಸಹಿಸುವುದಿಲ್ಲ. ಈ ಸಂದರ್ಭ ಆಖವಂದರ ಮತ್ತು ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಷಡ್ಯಂತ್ರದ ವಿರುದ್ಧ ಅವರಿಗೆ ನೈತಿಕ ಬೆಂಬಲ ನೀಡುವ ಉದ್ದೇಶದಿಂದ ಧರ್ಮಸ್ಥಳಕ್ಕೆ ಯಾತ್ರೆ ಹಮ್ಮಿಕೊಂಡಿರುವುದಾಗಿ ತಿಳಿಸಿದರು.

ನಗರಸಭೆ ಸದಸ್ಯ ಎ.ಸಿ.ಕುಮಾರೇಗೌಡ ಮಾತನಾಡಿ, ಚಿಕ್ಕಮಗಳೂರಿನಿಂದ ಧರ್ಮಸ್ಥಳಕ್ಕೆ ಧರ್ಮಯಾತ್ರೆ ಹೊರಟಿದ್ದೇವೆ. ಅಲ್ಲಿ ಆಗಿರುವ ವಿಚಾರಗಳಿಗೆ ನ್ಯಾಯ ದೊರೆಯುವ ಸಮಯ ಸನ್ನಿಹಿತವಾಗುತ್ತಿದೆ. ಧರ್ಮಸ್ಥಳಕ್ಕೆ ಚ್ಯುತಿ ಬರುವ ಕೆಲಸ ಆಗಬಾರದು. ಹೀಗಾಗಿ ನೂರಾರು ಮಂದಿ ಇಂದು ಧರ್ಮಸ್ಥಳಕ್ಕೆ ಯಾತ್ರೆ ಹೊರಟಿದ್ದೇವೆ ಎಂದರು. ನಗರಸಭೆ ಅಧ್ಯ–ಕ್ಷೆ ಶೀಲಾದಿನೇಶ್, ಸದಸ್ಯ ದಿನೇಶ್, ಮುಖಂಡರಾದ ನಿತೇಶ್ ಬೋಜೇಗೌಡ, ಸೋನಾಲ್‌ಧರ್ಮೇಗೌಡ, ಸಿ.ಕೆ ಮೂರ್ತಿ, ಆನಂದನಾಯ್ಕ, ಶಿವಾನಂದ, ಚೇತನ್, ಮಂಜು ಮತ್ತಿತರರಿದ್ದರು.

# ಕಸಬಾ ಹೋಬಳಿ ಕಾಫಿ ಬೆಳೆಗಾರರ ಸಂಘದ ನೂತನ ಅಧ್ಯಕ್ಷ ಐ.ಎಂ.ಮಿಥುನ್

**ಚಿಕ್ಕಮಗಳೂರು:** ಕಸಬಾ ಹೋಬಳಿ ಕಾಫಿ ಬೆಳೆಗಾರರ ಸಂಘದ ಜವಾಬ್ದಾರಿಯನ್ನು ಯುವ ಪದಾಧಿಕಾರಿಗಳ ತಂಡವು ವಹಿಸಿಕೊಂಡಿದೆ. ಯಶಸ್ವಿಯಾಗಿ ಸಂಘವನ್ನು ಮುನ್ನಡೆಸುತ್ತಾರೆ ಎನ್ನುವ ವಿಶ್ವಾಸವಿದೆ ಎಂದು ಕರ್ನಾಟಕ ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ ಹೇಳಿದರು.

ಕಸಬಾ ಹೋಬಳಿ ನೂತನ ಅಧ್ಯಕ್ಷ ಐ.ಎಂ.ಮಿಥುನ್ ಮತ್ತು ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನೂತನ ತಂಡಕ್ಕೆ ಶುಭ ಹಾರೈಸುತ್ತೇವೆ. ಸಂಘದ ಕಾರ್ಯಕ್ರಮಗಳಿಗೆ ಕೆಜಿಎಫ್ ಸದಾ ಬೆಂಬಲ ನೀಡುತ್ತದೆ ಎಂದು ತಿಳಿಸಿದರು.

ನೂತನ ಸಂಘವು ಬೆಳೆಗಾರರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಕೆಜಿಎಫ್ ಸೇರಿದಂತೆ ಎಲ್ಲಾ ಬೆಳೆಗಾರರ ಸಂಘಗಳು ಸಂಘಟಿತವಾಗಿ ಕೆಲಸ ಮಾಡಿದಾಗ ಗುರಿ ಸಾಧಿಸಬಹುದು ಎಂದು ತಿಳಿಸಿದರು.

ಬೆಳೆಗಾರರ ಪ್ರಮುಖ ಬೇಡಿಕೆಗಳಾದ ಡೀಮ್ಡ್ ಅರಣ್ಯ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವುದು, ಒತ್ತುವರಿ ಭೂಮಿ ಗುತ್ತಿಗೆಗೆ ನೀಡುವ ವಿಚಾರ, ಮಲೆನಾಡಿನಲ್ಲಿ ಆನೆಗಳ ಹಾವಳಿ ಉಂಟಾಗುತ್ತಿರುವ ಜೀವ ಹಾನಿ, ಬೆಳೆ ಹಾನಿ ತಡೆಗಟ್ಟಲು ಪರಿಣಾಮಕಾರಿ ಕ್ರಮ ಕೈಗೊಳ್ಳುವುದು, ಕಾಡು ಪ್ರಾಣಿಗಳ ಹಾವಳಿಯಿಂದ ಮಲೆನಾಡಿನ ಜನ ಬದುಕಲು ಆಗುತ್ತಿಲ್ಲ ಅದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕಿದೆ ಇದರ ಬಗ್ಗೆ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದರು.

ಬೆಳೆಗಾರರ ಮುಖಂಡ ಕೆ.ಕೆ. ಮನುಕುಮಾರ್ ಮಾತನಾಡಿ, ಇಲ್ಲಿಂದ ಕಾಫಿ ಬೆಳೆಗಾರರ ಸಂಘದ ಎನ್.ಎಂ. ರವಿ ಅವರನ್ನು ಪ್ರತಿನಿಧಿಯನ್ನಾಗಿ ಕಳಿಸಿಕೊಡಲಾಗುತ್ತಿದೆ. ನೂತನ ಸಂಘಕ್ಕೆ ಎಲ್ಲಾ ಸಹಕಾರ ಇರುತ್ತದೆ ಎಂದರು.

# ಸೆಪ್ಟೆಂಬರ್‌ನಲ್ಲಿ ಮಣಿಪುರಕ್ಕೆ ಪ್ರಧಾನಿ ಮೋದಿ ಭೇಟಿ ಸಾಧ್ಯತೆ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಸೆಪ್ಟೆಂಬರ್ ಎರಡನೇ ವಾರದಲ್ಲಿ ಮಣಿಪುರಕ್ಕೆ ಭೇಟಿ ನೀಡುವ ಸಾಧ್ಯತೆಯಿದೆ.

ಎರಡು ವರ್ಷಗಳ ಹಿಂದೆ ರಾಜ್ಯದಲ್ಲಿ ಜನಾಂಗೀಯ ಹಿಂಸಾಚಾರ ಭುಗಿಲೆದ್ದ ನಂತರ ಇದೇ ಮೊದಲ ಬಾರಿಗೆ ಭೇಟಿ ನೀಡಲಿದ್ದಾರೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಮೇ 2023 ರಲ್ಲಿ ಅಶಾಂತಿ ಭುಗಿಲೆದ್ದ ನಂತರ ಪ್ರಧಾನಿಯವರು ಮಣಿಪುರಕ್ಕೆ ಭೇಟಿ ನೀಡಿಲ್ಲವಾದ್ದರಿಂದ, ಆ ಭೇಟಿಯು ಪ್ರಮುಖ ರಾಜಕೀಯ ಮತ್ತು ಸಾಂಕೇತಿಕ ಮಹತ್ವವನ್ನು ಹೊಂದಿದೆ. ಮೋದಿ, ಹಿಂಸಾಚಾರ ಪೀಡಿತ ರಾಜ್ಯದ ಇಂಫಾಲ್ ಮತ್ತು ಚುರಚಂದ್‌ಪುರ ಜಿಲ್ಲೆಗಳಿಗೆ ಭೇಟಿ ನೀಡುವ ಸಾಧ್ಯತೆಯಿದೆ. ಅಲ್ಲಿ ಜನಾಂಗೀಯ ಸಂಘರ್ಷದಿಂದಾಗಿ ತಮ್ಮ ಮನೆಗಳಿಂದ ಸ್ಥಳಾಂತರಗೊಂಡ ಜನರನ್ನು ಭೇಟಿ ಮಾಡುವ ನಿರೀಕ್ಷೆಯಿದೆ. ಅವರ ಭೇಟಿಯ ಸಮಯದಲ್ಲಿ, ಅವರು ಈ ಪ್ರದೇಶಕ್ಕೆ ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಘೋಷಿಸುವ ಮತ್ತು ಕೆಲವು ಯೋಜನೆಗಳನ್ನು ಉದ್ಘಾಟಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಮಣಿಪುರ ಪ್ರವಾಸ ದೃಢಪಟ್ಟರೆ, ಪ್ರಧಾನಿಯವರ ಭೇಟಿ ಸುಮಾರು ನಾಲ್ಕು ಗಂಟೆಗಳ ಕಾಲ ನಡೆಯುವ ನಿರೀಕ್ಷೆಯಿದೆ ಎಂದು ಮೂಲಗಳು ತಿಳಿಸಿವೆ. ಅವರು ಮೈತೈ ಮತ್ತು ಕುಕಿ ಪ್ರಾಬಲ್ಯವಿರುವ ಎರಡೂ ಪ್ರದೇಶಗಳಿಗೆ ಪ್ರವಾಸ ಮಾಡುವ ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸುವ ಸಾಧ್ಯತೆಯಿದೆ. ಫೆಬ್ರುವರಿ 13ರಂದು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿತ್ತು.

# ಧರ್ಮಸ್ಥಳ ಪ್ರಕರಣ, ತನಿಖೆ ನಂತರ ವರದಿ

**ಬೆಂಗಳೂರು:** ಧರ್ಮಸ್ಥಳದ ಬಗ್ಗೆ ನಡೆದಿರುವ ಎಸ್‌ಐಟಿ ತನಿಖೆಗೆ ಕಾಲಮಿತಿ ವಿಧಿಸಿಲ್ಲ. ಈ ವಾರದಲ್ಲೇ ತನಿಖೆ ಮುಗಿಸಿ ವರದಿ ಕೊಡಿ ಎಂದು ಹೇಳಲು ಆಗಲ್ಲ. ತನಿಖೆ ಪೂರ್ಣಗೊಂಡ ನಂತರ ಎಸ್‌ಐಟಿ ವರದಿ ನೀಡುತ್ತೆ ಎಂದು ಗಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ರಾಜಭವನದಲ್ಲಿಂದು ರಾಷ್ಟ್ರಪಿ ಪದಕಕ್ಕೆ ಭಾಜನರಾಗಿರುವ ಪೊಲೀಸ್ ಅಧಿಕಾರಿಗಳಿಗೆ ಪದಕ ಪ್ರದಾನ ಸಮಾರಂಭದ ನಂತರ ಸುದ್ದಿಗಾರರೊಮದಿಗೆ ಮಾತನಾಡಿದ ಅವರು, ಧರ್ಮಸ್ಥಳದ ಎಸ್‌ಐಟಿ ತನಿಖೆ ಎಲ್ಲಿಗೆ ಹೋಗುತ್ತದೆ ಎಂದು ಹೇಳಲು ಸಾಧ್ಯವಿಲ್ಲ. ಒಂದು ತಾರ್ಕಿಕ ಅಂತ್ಯ ಕಾಣುವವರೆಗೂ ವಿಚಾರಣೆಗಳು ನಡೆಯಲಿವೆಎಂದರು.

ಎಸ್‌ಐಟಿ ಮುಖ್ಯಸ್ಥರಾದ ಡಿಜಿಪಿ ಪ್ರಣವ್‌ಮೊಹಾಂತಿ ಇಂದು ತಮ್ಮನ್ನು ಭೇಟಿ ಮಾಡಿ ಚರ್ಚಿಸಿದ್ದಾರೆ. ಚರ್ಚೆಯ ವಿವರಗಳನ್ನು ಬಹಿರಂಗಪಡಿಸಲು ಆಗಲ್ಲ. ಎಸ್‌ಐಟಿಯವರಿಗೆ ಈಗಾಗಲೇ ಮಾರ್ಗಸೂಚಿ ನೀಡಿದ್ದೇವೆ. ಅದರಂತೆ ತನಿಖೆ ನಡೆದಿದೆ ಎಂದರು.

ಎಸ್‌ಐಟಿ ಉತ್ಖನನ ಸಂದರ್ಭದಲ್ಲಿ ದೊರೆತಿರುವ ಹಲವು ವಸ್ತುಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿದೆ. ಎಲ್ಲವನ್ನೂ ವೈಜ್ಞಾನಿಕವಾಗಿ

ಪರಿಶೀಲಿಸಿ ಅಗತ್ಯ ಕ್ರಮ ಆಗಬೇಕಾದ್ದರಿಂದ ಎಸ್‌ಐಟಿ ಮೇಲೆ ವರದಿ ಕೊಡಿ ಎಂದು ಒತ್ತಡ ಹೇರಲಿ ಆಗಲ್ಲ.



ರಾಜ್ಯಸರ್ಕಾರ ಆ ರೀತಿ ಯಾವುದೇ ನಿರ್ದೇಶನ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ತನಿಖೆ ಉತ್ತಮವಾಗಿ ನಡೆಯುತ್ತಿದೆ. ಎಲ್ಲ ಆಯಾಮದಿಂದಲೂ ತನಿಖೆ ನಡೆದಿದೆ. ಯಾರನ್ನು ಬಂಧಿಸಬೇಕು, ಯಾರನ್ನು ವಿಚಾರಣೆಗೆ ಒಳಪಡಿಸಬೇಕು ಎಲ್ಲವನ್ನೂ ಎಸ್‌ಐಟಿ ಅಧಿಕಾರಿಗಳೇ ನಿರ್ಧರಿಸುತ್ತಾರೆ ಎಂದರು.

# ವಸತಿ ನಿಲಯಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿ: ಡಾ.ಸೀಮಾ

**ಚಿಕ್ಕಮಗಳೂರು :** ವಸತಿ ನಿಲಯಗಳ ಸುತ್ತಮುತ್ತ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆಗೊಳಿಸಿ ಸ್ವಚ್ಛತೆ ಕಾಪಾಡುವಂತೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎಸ್.ಸೀಮಾ ತಿಳಿಸಿದರು.

ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆಯ ಪ್ರಯುಕ್ತ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ವಸತಿ ನಿಲಯ ಪಾಲಕರಿಗೆ ಇಂದು ಆಯೋಜಿಸಿದ್ದ ಡೆಂಗ್ಯೂ ಮಾಹಿತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಡೆಂಗ್ಯೂ, ಮಲೇರಿಯಾ, ಚಿಕೂನ್ ಗುನ್ಯದಂತಹ ರೋಗಗಳು ಮಳೆಗಾಲದಲ್ಲಿ ಅತೀ ಹೆಚ್ಚಾಗಿ ಕಂಡು ಬಂದಿರುವುದರಿಂದ ನಿಂತ ನೀರನ್ನು ಸರಾಗವಾಗಿ ಹರಿಯುವಂತೆ ಮಾಡುವುದು ಅಗತ್ಯ. ನೀರಿನ ಎಲ್ಲಾ ಪರಿಕರಗಳನ್ನು ಸಮರ್ಪಕವಾಗಿ ಮುಚ್ಚಿಡುವುದರಿಂದ ಸೊಳ್ಳೆಗಳನ್ನು ನಿಯಂತ್ರಿಸಬಹುದು. ಜೊತೆಗೆ ಎಲ್ಲಾ ವಸತಿ ನಿಲಯಗಳಲ್ಲಿ ಸೊಳ್ಳೆ ಪರದೆ ಮತ್ತು ಮೆಶ್‌ಗಳನ್ನು ಅಳವಡಿಸುವಂತೆ ಸೂಚನೆ ನೀಡಿದರು.

ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಶಶಿಕಲಾ ಮಾತನಾಡಿ, ಗ್ರಾಮೀಣ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳನ್ನು ಒಳಗೊಂಡಂತೆ ತಂಡಗಳನ್ನಾಗಿ ಮಾಡಿ ಲಾರ್ವಾ ಸಮೀಕ್ಷೆ ನಡೆಸಲಾಗುತ್ತಿದೆ. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಬಗ್ಗೆ ಮತ್ತು ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ದೇವರಾಜ್ ಮಾತನಾಡಿ, ಡೆಂಗ್ಯೂ ನಿಯಂತ್ರಣ ಮತ್ತು ಇಲಾಖಾವಾರು ಅನುಸರಿಸಬೇಕಾದ ಜವಾಬ್ದಾರಿಗಳ ಬಗ್ಗೆ ಹಾಗೂ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸುವಂತೆ ವಸತಿ ನಿಲಯ ಪಾಲಕರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜೆ.ಎನ್.ಬೇಬಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ್, ತಾಲ್ಲೂಕು ಆಶಾ ಮೇಲ್ವಿಚಾರಕಿ ಕಲಾಧರೆ, ತಾಲ್ಲೂಕು ವ್ಯಾಪ್ತಿಯ ವಸತಿ ನಿಲಯಗಳ ನಿಲಯಪಾಲಕರು ಭಾಗವಹಿಸಿದ್ದರು.

# ವಿದ್ಯಾರ್ಥಿ ಜೀವನ ಜೀವನದ ಅತ್ಯಮೂಲ್ಯ ಘಟ್ಟ : ಸುಷ್ಮಾ

**ಚಿಕ್ಕಮಗಳೂರು :** ಜೀವನದ ಅತ್ಯಮೂಲ್ಯ ಘಟ್ಟ ಎಂದರೆ ಅದು ವಿದ್ಯಾರ್ಥಿ ಜೀವನ, ವಿದ್ಯಾರ್ಥಿಯ ಜೀವನ ಪ್ರತಿಯೊಬ್ಬ ವ್ಯಕ್ತಿಯ ಅಭಿವೃದ್ಧಿಯ ಮೂಲಾಧಾರ ಎಂದು ಸೇಂಟ್ ಮೇರಿಸ್ ಪಿಯು ಕಾಲೇಜಿನ ಪ್ರಾಂಶುಪಾಲರಾದ ಸುಷ್ಮಾ ಎಸ್ ಪಿ ಅವರು ಅಭಿಪ್ರಾಯಿಸಿದರು.

ಅವರು ನಗರದ ಸಹ್ಯಾದ್ರಿ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಕಾಲೇಜಿನಲ್ಲಿ ವಿದ್ಯಾರಂಬ್ ಶೀರ್ಷಿಕೆಯಡಿ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಹಾಗೂ ಪ್ರಥಮ ಬಿಕಾಂ ಹಾಗೂ ಬಿ ಎಸ್ ಸಿ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವುದರ ಮೂಲಕ ಉದ್ಘಾಟಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.



ಬಳಿಕ ಮಾತನಾಡಿದ ಅವರು ಒಬ್ಬ ವಿದ್ಯಾರ್ಥಿ ತನ್ನ ಜೀವನದಲ್ಲಿ ಯಶಸ್ವಿಯಾಗಬೇಕಾದರೆ ಉತ್ತಮ ಶಾಲೆ ಹಾಗೂ ಉತ್ತಮ ಶಿಕ್ಷಕರು ಅಷ್ಟೇ ಮುಖ್ಯ ವಾಗುವುದಿಲ್ಲ ವಿದ್ಯಾರ್ಥಿಯಲ್ಲಿ ಇರಬಹುದಾದ ಉತ್ತಮ ಅಭ್ಯಾಸಗಳು ಸಹ ಮುಖ್ಯವಾಗುತ್ತವೆ ಎಂದು ಹೇಳಿದರು.

ಯಶಸ್ವಿ ಅಥವಾ ಟಾಪರ್ ವಿದ್ಯಾರ್ಥಿಯಾಗಲು ಕಠಿಣ ಪರಿಶ್ರಮಕ್ಕಿಂತ ಸ್ಮಾರ್ಟ್ ವರ್ಕ್ ಮುಖ್ಯ, ಅಧ್ಯಯನದ ಬಗ್ಗೆ ನಿಖರತೆ ಹೊಂದಿರುವ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಬೇಗನೆ ಯಶಸ್ಸು ಕಾಣುತ್ತಾರೆ ಎಂದರು.

ಸಹ್ಯಾದ್ರಿ ವಿದ್ಯಾ ಸಂಸ್ಥೆಯ ಸೆಕ್ರೆಟರಿ ನಳಿನಿ ಡಿಸಾ ಅವರು ಮಾತನಾಡಿ ವಿದ್ಯಾರ್ಥಿಗಳು ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಕೂಡ ಆಸಕ್ತಿ ಬೆಳಸಿಕೊಳ್ಳಬೇಕು, ಮಾನವೀಯ ಮೌಲ್ಯಗಳು, ಸಂಸ್ಕಾರ, ಜೀವನದಲ್ಲಿ ಎದುರಾಗುವ ಕಷ್ಟಗಳನ್ನು ಎದುರಿಸುವ ಛಲವನ್ನು ವಿದ್ಯಾರ್ಥಿಗಳು ರೂಡಿಸಿಕೊಳ್ಳಬೇಕು ಎಂದು ಹೇಳಿದರು.

ಸಹ್ಯಾದ್ರಿ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಕಾಲೇಜಿನ ಪ್ರಾಂಶುಪಾಲರಾದ ಉಲ್ಲಾಸ್ ಅವರು ಮಾತನಾಡಿ ವಿದ್ಯೆ ಎಂಬುದು ಜ್ಞಾನದ ರತ್ನ ಇದ್ದಂತೆ, ಯಾರು ಕೂಡ ಅದನ್ನು ಕದಿಯಲು ಸಾಧ್ಯವಿಲ್ಲ, ಹೀಗಾಗಿ ವಿದ್ಯಾರ್ಥಿಗಳು ಪರಿಶ್ರಮ ವಹಿಸಿ ಓದಿ ಉನ್ನತ ಹುದ್ದೆಯನ್ನು ಅಲಂಕರಿಸಬೇಕು, ಸದಾ ನಿಮ್ಮ ಮನಸ್ಸನ್ನು ಗುರಿಯೆಡೆಗೆ ಕೇಂದ್ರೀಕರಿಸಬೇಕು, ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಎಷ್ಟೇ ಜನ ಕೊಡುವಲ್ಲಿ ಶಿಕ್ಷಕರು ಹಾಗೂ ಪೋಷಕರ ಪಾತ್ರ ಮುಖ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ರಾಜ್ಯಕ್ಕೆ ಡಿಕೆಶಿ ಸೇವೆ ಸಿಗಲಿ; ಪರೋಕ್ಷವಾಗಿ ಸಿಎಂ ಆಗಲಿ ಎಂದು ಹರಸಿದ ಪುತ್ತಿಗೆ ಶ್ರೀ

**ಉಡುಪಿ:** ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಉಡುಪಿಗೆ ಭೇಟಿ ನೀಡಿದ್ದು ಉಡುಪಿಯ ಪುತ್ತಿಗೆ ಮಠಕ್ಕೆ ಭೇಟಿ ನೀಡಿ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ಆಶೀರ್ವಾದ ಪಡೆದುಕೊಂಡರು. ಈ ವೇಳೆ ಸ್ವಾಮೀಜಿ ಅವರು ಡಿಸಿಎಂಗೆ ಆಶೀರ್ವದಿಸಿದ್ದಾರೆ.

ರಾಜ್ಯಕ್ಕೆ ದೇಶಕ್ಕೆ ಅವರ ಸೇವೆ ದೊರಕಲಿ. ಭಗವದ್ಗೀತೆ ಪುಸ್ತಕ ಪಡೆದಿದ್ದಾರೆ, ಅವರ ಮನಸ್ಸಿನ ಇಚ್ಛೆ ಫಲಿಸಲಿ ಎಂದು ಉಡುಪಿಯ ಪುತ್ತಿಗೆ ಮಠದ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ಆಶೀರ್ವಾದ ಮಾಡಿದ್ದಾರೆ. ಡಿ.ಕೆ ಶಿವಕುಮಾರ್ ಓಪನ್ ಆಗಿ ಭಗವದ್ಗೀತೆ ಪಠಿಸುವ ಏಕೈಕ ರಾಜಕಾರಣಿ ಎಂದು ಅವರು ಹೇಳಿದ್ದಾರೆ.ಡಿಕೆಶಿ ಜೊತೆ ಪುತ್ತಿಗೆ ಮಠಕ್ಕೆ 35 ವರ್ಷದ ಸಂಬಂಧವಿದೆ. ಡಿಕೆ ಜೈಲ್ ಮಂತ್ರಿ ಆಗಿದ್ದರು, ಕೃಷ್ಣ ಹುಟ್ಟಿದ್ದು ಜೈಲಿನಲ್ಲೇ. ಅವರು ಶ್ರೀಕೃಷ್ಣನ ದೊಡ್ಡ ಭಕ್ತ, ಭಗವದ್ಗೀತೆಯನ್ನು ಬಹಳ ಅನುಸರಿಸುತ್ತಾರೆ ಎಂದು ಮಠದ ರಾಜಾಂಗಣದಲ್ಲಿ ನಡೆದ ತಮ್ಮ ಜನ್ಮ ನಕ್ಷತ್ರ ಕಾರ್ಯಕ್ರಮದಲ್ಲಿ ಡಿ.ಕೆ ಶಿವಕುಮಾರ್ ಮುಂದೆಯೇ ಮಾತನಾಡಿದರು. ಶ್ರೀ



ಮಧ್ವಾಚಾರ್ಯರ ಭಾವಚಿತ್ರವಿರುವ ಅಂಚೆ ಚೀಟಿ ಬಿಡುಗಡೆ ಮಾಡಿದ್ದು, ಶ್ರೀ ಮಧ್ವಾಚಾರ್ಯರಿಗೆ ಬಂಡೆಕಲ್ಲು ಇಷ್ಟ. ಅವರು ಹನುಮನ ಅಪರಾವತಾರ. ಡಿಕೆಶಿ ಕನಕಪುರದ ಬಂಡೆ. ಅವರು ರಾಕ್ ಸ್ಟಾರ್ ರಾಜಕಾರಣಿ. ಮಠದಲ್ಲಿ ಕೋಟಿ ಗೀತಾ ಲೇಖನ ಪುಸ್ತಕ ಪಡೆದಿದ್ದಾರೆ. ಅವರು ಪುಸ್ತಕ ಬರೆದು ಮುಗಿಸುವುದರೊಳಗೆ ಅವರ ಮನಸ್ಸಿನ ಇಚ್ಛೆ ಫಲಿಸಲಿ ಎಂದು ಡಿಕೆಶಿ ಮುಖ್ಯಮಂತ್ರಿ ಆಗಲಿ ಎಂದು ಪುತ್ತಿಗೆ ಸ್ವಾಮೀಜಿ ಆಶೀರ್ವದಿಸಿದರು. ರಾಜಕಾರಣಿಗಳು ಆಸ್ತಿಕರಾಗುವುದು ಬಹಳ ಮುಖ್ಯ. ರಾಜಕಾರಣಿಗಳು ಆಸ್ತಿಕರಾದರೆ ಮಾತ್ರ ಜಗತ್ತು ಕ್ಷೇಮವಾಗಿರಲು ಸಾಧ್ಯ ಎಂದರು.

ಕೃಷ್ಣಮಠದ ರಾಜಾಂಗಣದಲ್ಲಿ ಪುತ್ತಿಗೆ ಮಠದ ಶ್ರೀ ಸುಗುಣೇಂಜ್ರ ತೀರ್ಥ ಸ್ವಾಮೀಜಿ 64ನೇ ಜನ್ಮನಕ್ಷತ್ರಾಚರಣೆ ಸಂದರ್ಭದಲ್ಲಿ ಮಣಿಪಾಲ ಮಾಹೆಯು ಅಂಚೆ ಇಲಾಖೆ ಮೂಲಕ ಹೊರತಂದಿರುವ ಆಚಾರ್ಯ ಮಧ್ವರ ಅಂಚೆ ಚೀಟಿ ಬಿಡುಗಡೆ ಸಮಾರಂಭ ನಡೆಯಿತು. ಅದರಲ್ಲಿ ಡಿಸಿಎಂ ಪಾಲ್ಗೊಂಡಿದ್ದರು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾನು ಏನು ಮಾತನಾಡಿದರೂ ಅದರಲ್ಲಿ ತಪ್ಪು ಹುಡುಕುತ್ತಾರೆ.

ಅದು ಸುಲಭದ ಕೆಲಸ, ಆದ್ದರಿಂದ ಕೃಷ್ಣ ನನ್ನ ಬಾಯಿಂದ ಯಾವುದೇ ತಪ್ಪು ಮಾಡಿಸಬೇಡ ಎನ್ನುತ್ತಲೇ ಮಾತು ಆರಂಭಿಸಿದ ಡಿ.ಕೆ.ಶಿವಕುಮಾರ್, ಮಾತಿನುದ್ದಕ್ಕೂ ತತ್ವಜ್ಞಾನವನ್ನಾಡಿದರು.

ಉಡುಪಿಯಲ್ಲಿ ಶ್ರೀಕೃಷ್ಣನ ದರ್ಶನ ಪಡೆದ ಡಿಸಿಎಂ ಡಿಕೆಶಿ; ಶ್ರೀ ಸುಗಣೇಂದ್ರತೀರ್ಥ ಶ್ರೀಪಾದರ 64ನೇ ಜನ್ಮನಕ್ಷತ್ರೋತ್ಸವದಲ್ಲಿ ಭಾಗಿ ಧರ್ಮ, ಪೂಜೆ ಆಚರಣೆ ಪ್ರದರ್ಶನದ ವಸ್ತುಗಳಲ್ಲ, ಅವು ಅಂತರಂಗದಲ್ಲಿರಬೇಕು.

ದೇವನೊಬ್ಬನೇ ನಾಮ ಹಲವು, ಜೀವನದಲ್ಲಿ ಧರ್ಮರಾಯನ ಧರ್ಮನಿಷ್ಠೆ, ಅರ್ಜುನನ ಗುರಿ, ಭೀಮನ ಬಲ, ವಿ?ಧುರನ ನೀತಿ ಜೊತೆಗೆ ಕೃಷ್ಣನ ತಂತ್ರಗಾರಿಕೆಯೂ ಬೇಕು ಎಂದು ಕೋಟ ಶ್ರೀನಿವಾಸ ಪೂಜಾರಿ ಅವರನ್ನು ಕರೆದು ಹೇಳಿದರು.ಪ್ರಯತ್ನ ವಿಫಲವಾಗಬಹುದು, ಆದರೆ ಪ್ರಾರ್ಥನೆ ವಿಫಲವಾಗುವುದಿಲ್ಲ ಎಂದು ಹೇಳಿದ್ದಾರೆ.

# ಶೀಘ್ರದಲ್ಲೇ ಕೈಲಾಸ ಮಾನಸ ಸರೋವರ ಯಾತ್ರೆ ಪುನರಾರಂಭ: ಪ್ರಧಾನಿ ಮೋದಿ

**ಟಿಯಾನ್‌ಜಿನ್ (ಚೀನಾ):** ಭಾನುವಾರ ಶಾಂಘೈ ಸಹಕಾರ ಸಂಘಟನೆಯ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಬಳಿಕ ಮಾತನಾಡಿದ ಮೋದಿ, "ಕೈಲಾಸ ಮಾನಸ ಸರೋವರ ಯಾತ್ರೆ" ಪುನರಾರಂಭಗೊಂಡಿದೆ ಎಂದರು. ಜತೆಗೆ ಎರಡೂ ದೇಶಗಳ ನಡುವೆ ನೇರ ವಿಮಾನಯಾನವೂ ಆರಂಭವಾಗುತ್ತಿದೆ. ನಮ್ಮ ರಾಷ್ಟ್ರಗಳ ನಡುವಿನ ಸಹಕಾರದೊಂದಿಗೆ, 2.8 ಶತಕೋಟಿ ಜನರ ಹಿತಾಸಕ್ತಿಗಳು ಸಂಬಂಧ ಹೊಂದಿವೆ. ಇದು ಮಾನವೀಯತೆಗೆ ಅಗತ್ಯವಾಗಿದೆ ಎಂದು ಹೇಳಿದರು.

ಸುಮಾರು ಒಂದು ಗಂಟೆ ಕಾಲ ನಡೆದ ಈ ಸಭೆಯ ಸಂದರ್ಭದಲ್ಲಿ ಭಾರತದ ಕಡೆಯಿಂದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಕೂಡ ಹಾಜರಿದ್ದರು. ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಸಭೆಯಲ್ಲಿ ಭಾಗವಹಿಸಿದ್ದರು.

ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ಮೋದಿ, "ಪರಸ್ಪರ ನಂಬಿಕೆ, ಗೌರವ ಮತ್ತು ಸೂಕ್ಷ್ಮತೆಯ ಆಧಾರದ ಮೇಲೆ ನಮ್ಮ ಸಂಬಂಧವನ್ನು ಮುಂದಕ್ಕೆ ಕೊಂಡೊಯ್ಯಲು ನಾವು ದೃಢನಿಶ್ಚಯ



ಹೊಂದಿದ್ದೇವೆ. ಶೃಂಗಸಭೆಯ ಯಶಸ್ವಿ ಆತಿಥ್ಯಕ್ಕಾಗಿ ನಾವು ನಮ್ಮ ಶುಭಾಶಯಗಳನ್ನು ಸಲ್ಲಿಸುತ್ತೇವೆ ಮತ್ತು ಈ ಭೇಟಿ ಮತ್ತು ಈ ಸಭೆಗೆ ಆಹ್ವಾನಕ್ಕಾಗಿ ನಾನು ನಿಮಗೆ(ಜಿನ್‌ಪಿಂಗ್) ಧನ್ಯವಾದ ಸಲ್ಲಿಸುತ್ತೇನೆ ಎಂದು ಮೋದಿ ಹೇಳಿದರು.

2019ರ ಗಲ್ವಾನ್ ಸಂಘರ್ಷದ ಬಳಿಕ ಭಾರತ–ಚೀನಾ ಸಂಬಂಧ ಪೂರ್ಣ ಹಳಸಿತ್ತು. ಪರಿಸ್ಥಿತಿ ಯುದ್ಧದವರೆಗೂ ತಲುಪಿತ್ತು. ಬಳಿಕ ಉಭಯ ದೇಶಗಳು ನೇರ ವಿಮಾನ, ಪ್ರವಾಸಿ ವೀಸಾ ವಿತರಣೆ ಸ್ಥಗಿತಗೊಳಿಸಿದ್ದವು. ಅಗತ್ಯ ವಸ್ತು ಪೂರೈಕೆ ರದ್ದಾಗಿತ್ತು. ಇದೀಗ ಉಭಯ ರಾಷ್ಟ್ರಗಳ ನಡುವೆ ಮತ್ತೆ ಹಿಂದಿನಂತೆ ವ್ಯಾಪಾರ ಸಂಬಂಧ ಪುನರಾರಂಭಗೊಂಡಿದೆ.

# ಸಪ್ತ ಧಾನ್ಯ ಕಷಾಯ ಬೆಳೆ ವರ್ಧಕ

**ಚಿಕ್ಕಮಗಳೂರು, ಆ.11:** ಸಪ್ತ ಧಾನ್ಯ ಕಷಾಯವು ಬೆಳೆಯ ಗುಣಮಟ್ಟವನ್ನು ಹೆಚ್ಚಿಸುವ ಸರಳ, ಸಾವಯವ ವಿಧಾನವಾಗಿದೆ ಎಂದು ತಿಳಿಸಿರುವ ಜಂಟಿ ಕೃಷಿ ನಿರ್ದೇಶಕಿ ಹೆಚ್.ಎಸ್.ಸುಜಾತ ಅವುಗಳನ್ನು ತಯಾರಿಸುವ ಬಗೆಯನ್ನು ವಿವರಿಸಿದ್ದಾರೆ.

ಎರಡು ಲೀಟರ್ ಸಾಮರ್ಥ್ಯದ ಎರಡು ಪಾತ್ರೆಗಳು, ದೇಶಿ ಆಕಳ ಗೋಮೂತ್ರ 5 ಲೀಟರ್, ಎಳ್ಳು, ಗೋಧಿ ಕಾಳು, ಹೆಸರು, ಉದ್ದು, ಅಲಸಂದಿ, ಮಡಿಕೆ, ಅವರೆ ಕಾಳು, ಕಡಲೆಕಾಳು ತಲಾ 100 ಗ್ರಾಂ ಈ ಕಷಾಯ ತಯಾರಿಗೆ ಅಗತ್ಯವಾಗಿದೆ.

ತಯಾರಿಕೆ ವಿಧಾನ: ಒಂದು ಪಾತ್ರೆಯಲ್ಲಿ 100 ಗ್ರಾಂ ಎಳ್ಳನ್ನು ತೆಗೆದುಕೊಂಡು ತೋಯುವಷ್ಟು ನೀರು ಹಾಕಿ ರಾತ್ರಿಯಿಡೀ ನೆನೆಸಿಡಬೇಕು. ಮರುದಿನ ಬೆಳಿಗ್ಗೆ ಇನ್ನೊಂದು ದೊಡ್ಡ ಪಾತ್ರೆಯಲ್ಲಿ ತಲಾ 100 ಗ್ರಾಂ ಹೆಸರು, ಉದ್ದು, ಅಲಸಂದಿ, ಮಡಿಕೆ, ಅವರೆ ಕಾಳು, ಕಡಲೆಕಾಳು ಮತ್ತು ಗೋದಿ ಕಾಳುಗಳನ್ನು ಬೆರೆಸಿ, 6 ಇಂಚು ಎತ್ತರದವರೆಗೆ ನೀರು ಹಾಕಿ ಮೊಳಕೆ ಬರುವಂತೆ ಇಡಬೇಕು. ಮೊಳಕೆ ಬಂದ ನಂತರ, ಎರಡೂ ಪಾತ್ರೆಗಳ ಕಾಳುಗಳನ್ನು ಒಟ್ಟಿಗೆ ಸೇರಿಸಿ ಚಟ್ನಿಯಂತೆ ರುಬ್ಬಬೇಕು.

ಈ ಚಟ್ನಿಯನ್ನು 200 ಲೀಟರ್ ನೀರಿಗೆ ಬೆರೆಸಿ, 5 ಲೀಟರ್ ದೇಶಿ ಆಕಳ ಗೋಮೂತ್ರ ಮತ್ತು ಮೊಳಕೆಗಾಗಿ ನೆನೆಸಿದ ನೀರನ್ನು ಸೇರಿಸಬೇಕು. ಈ ಮಿಶ್ರಣವನ್ನು ತಂಪಾದ ಸ್ಥಳದಲ್ಲಿ 24 ಗಂಟೆಗಳ ಕಾಲ ಇರಿಸಬೇಕು. ದಿನಕ್ಕೆ ಮೂರು ಬಾರಿ ಪ್ರದಕ್ಷಿಣಾಕಾರವಾಗಿ ಕಲಕಬೇಕು. 24 ಗಂಟೆಗಳ ನಂತರ, ಮಿಶ್ರಣವನ್ನು ಬಟ್ಟೆಯಿಂದ ಸೋಸಿ, ಬೆಳೆ ಕಟಾವಿಗೆ 15–21 ದಿನಗಳ ಮೊದಲು ಬೆಳೆಗಳಿಗೆ ಸಿಂಪಡಿಸಬೇಕು.

ಕಾಳುಗಳು ಜೊಳ್ಳಾಗುವುದಿಲ್ಲ. ಕಾಳಿನ ತೂಕ ಹೆಚ್ಚಾಗುತ್ತದೆ. ಕಾಳುಗಳಿಗೆ ಹೊಳಪು ಬರುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ

**ಚಿಕ್ಕಮಗಳೂರು, ಏ.5:** ಸಾರ್ವಜನಿಕ ವಿತರಣಾ ಪದ್ಧತಿಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ 2025ರ ಆಗಸ್ಟ್ ಮಾಹೆಗೆ ಈ ಕೆಳಗಿನಂತೆ ಅಕ್ಕಿ ವಿತರಿಸಲಾಗುತ್ತಿದೆ.

ಅಂತ್ಯೋದಯ (ಎಎವೈ) ಪ್ರತೀ ಪಡಿತರ ಚೀಟಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನವರಿಗೆ ಎನ್‌ಎಫ್‌ಎಸ್‌ಎ ಯೋಜನೆಯಲ್ಲಿ ಕೇಂದ್ರದ 14 ಕೆ.ಜಿ. ಅಕ್ಕಿ, 21 ಕೆ.ಜಿ. ರಾಗಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರದ 35 ಕೆ.ಜಿ. ಅಕ್ಕಿ, ಈ ಎಲ್ಲಾ ತಾಲ್ಲೂಕುಗಳಿಗೆ ಅನ್ನಭಾಗ್ಯ ಯೋಜನೆಯಡಿ 4 ಮತ್ತು 4ಕ್ಕಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಯ ಪ್ರತೀ ಸದಸ್ಯರಿಗೆ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು.

ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನವರಿಗೆ ಆದ್ಯತಾ (ಬಿಪಿಎಲ್) ಪಡಿತರ ಚೀಟಿಗೆ ಒಬ್ಬರು ಸದಸ್ಯರಿಗೆ ಎನ್‌ಎಫ್‌ಎಸ್‌ಎ ಯೋಜನೆಯಡಿ ಕೇಂದ್ರದಿಂದ 2 ಕೆ.ಜಿ. ಅಕ್ಕಿ, 3 ಕೆ.ಜಿ. ರಾಗಿ, ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ ಕೇಂದ್ರ ಹಾಗೂ ರಾಜ್ಯದ ತಲಾ 5 ಕೆ.ಜಿ. ಅಕ್ಕಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರ ಹಾಗೂ ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು ಎಂದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಸು, ಕುರಿ, ಕೋಳಿ ಸಾಕಣೆ ತರಬೇತಿ

**ಚಿಕ್ಕಮಗಳೂರು, ಆ.11:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಹಸು, ಕುರಿ ಮತ್ತು ಕೋಳಿ ಸಾಕಾಣಿ–ಕೆ ಕುರಿತ 13 ದಿನಗಳ ಉಚಿತ ತರಬೇತಿಯು ಸೆಪ್ಟೆಂಬರ್ 8 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ ಯುವತಿಯರು ಅರ್ಜಿ ಸಲ್ಲಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನವಾಗಿದೆ.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9241482541, 9113880324 ಅನ್ನು ಸಂಪರ್ಕಿಸಬಹುದು ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಮಾದಕ ವ್ಯವಸನದಿಂದ ದೂರವಿರಿ: ಎಎಸ್ಪಿ

**ದಾವಣಗೆರೆ:** ಮಾದಕ ದ್ರವ್ಯ ಸೇವನೆ ಮಾಡುವುದು ಅತ್ಯಂತ ಹೀನ ಕೃತ್ಯವಾಗಿದ್ದು, ಯುವ ಸಮೂಹ ಮಾದಕ ಚಟಕ್ಕೆ ಅಂಟಿಕೊಳ್ಳದೆ, ಸಾಧನೆಯ ಕಡೆಗೆ ಮನಸ್ಸು ಮಾಡಬೇಕು ಎಂದು ಜಿಲ್ಲಾ ಹೆಚ್ಚುವರಿ ಪೋಲೀಸ್ ಅಧೀಕ್ಷಕರಾದ ಪರಮೇಶ್ವರ್ ಹೆಗಡೆ ಕರೆ ನೀಡಿದರು.

ದಾವಣಗೆರೆ ಜಿಲ್ಲಾ ಪೋಲೀಸ್. ಬಡಾವಣೆ ಪೋಲೀಸ್ ಠಾಣೆ, ದಾವಣಗೆರೆ (12 ನೇ ಸುಧಾರಿತ ಬೀಟ್) ಇವರ ಸಂಯುಕ್ತಾಶ್ರಯದಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ನಗರದ ಸೈನ್ಸ್ ಅಕಾಡೆಮಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿದ್ದ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರುದ್ಧದ ಜನ ಜಾಗೃತಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಇಂದಿನ ಮೊಬೈಲ್ ಯುಗದಲ್ಲಿ ವಿದ್ಯಾರ್ಥಿಗಳು ತಮ್ಮ ಬದುಕನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ಸಾಧನೆ ಮಾಡುವ ಕಡೆ ಗಮನ ಹರಿಸುತ್ತಿಲ್ಲ. ಡ್ರಗ್ಸ್ ಬಳಕೆ, ಸಾಗಾಟ, ಮತ್ತು ಸೇವನೆಗೆ ಪ್ರಚೋದನೆಯೂ ಅತ್ಯಂತ ದೊಡ್ಡ ಅಪರಾಧ. ಇತ್ತೀಚೆಗೆ ದಾವಣಗೆರೆಯಲ್ಲಿ ಅನೇಕ ಡ್ರಗ್ಸ್ ಪೆಡ್ಲರ್‌ಗಳನ್ನು ನಾವು ಯಶಸ್ವಿಯಾಗಿ ಬಂಧಿಸಿದ್ದೇವೆ. ಬಹುತೇಕ ಡ್ರಗ್ಸ್ ಪೆಡ್ಲರ್ ಗಳು ನಮಗೆ ಶಾಲಾ–ಕಾಲೇಜುಗಳ ಬಳಿ, ಬೀಡಾ ಅಂಗಡಿಗಳ ಬಳಿಯಲ್ಲಿ ಸಿಕ್ಕಿದ್ದಾರೆ ಎಂದು ತಿಳಿಸಿದರು.

ದಾವಣಗೆರೆ ನಗರ ಉಪ ವಿಭಾಗದ ಉಪ ಅಧೀಕ್ಷಕ ಶರಣ ಬಸವೇಶ್ವರ ಭೀಮರಾವ್ ಮಾತನಾಡಿ, ನಾವು ನಮ್ಮ ಸುಂದರವಾದ ಜೀವನವನ್ನು ಹಾಳು ಮಾಡಿಕೊಳ್ಳಬಾರದು. ಹಿಂದೆಲ್ಲಾ ಶತ್ರುಗಳು ಅಣುಬಾಂಬುಗಳ ಮೂಲಕ ದ್ವೇಷ ಸಾಧನೆ ಮಾಡುವುದನ್ನು ಪ್ರತ್ಯಕ್ಷ ಯುದ್ಧ ಮಾಡುವುದನ್ನು ಕೇಳಿದ್ದೇವೆ. ಆದರೆ ಈಗ ಹೊಸ ವಿಧಾನದಲ್ಲಿ ಶತ್ರುಗಳು ಮೊಬೈಲ್, ರೀಲ್ಸ್, ಮಾದಕ ವಸ್ತುಗಳನ್ನು ವಿತರಿಸುವ ಮೂಲಕ ಯುವ ಸಮೂಹವನ್ನು ಹಾಳು ಮಾಡಿ ದೇಶದ ಸರ್ವನಾಶಕ್ಕೆ ಹೊಂಚು ಹಾಕುತ್ತಾರೆ ಎಂದು ತಿಳಿಸಿದರು. ಮಾದಕ ವ್ಯಸನದಿಂದ ಯುವ ಸಮೂಹ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಮಾದಕ ವಸ್ತುಗಳ ದುಶ್ಚಟಕ್ಕೆ ಬಿದ್ದರೆ ಭವಿಷ್ಯ ಹಾಳಾಗುವುದರ ಜೊತೆಗೆ ಒಮ್ಮೆ ಎಫ್ ಐ ಆರ್ ಆದರೆ ಅದರಿಂದ ಹೊರಬರುವುದು ಕಷ್ಟಕರವಾದುದು. ಆದ್ದರಿಂದ ತಾವುಗಳು ಮಾದಕ ವ್ಯಸನದ ದುಶ್ಚಟಕ್ಕೆ ಬೀಳದೆ ಎಚ್ಚರಿಕೆಯಿಂದ ಇದ್ದು. ಹಾಗೆ ದುಶ್ಚಟಕ್ಕೆ ಬೀಳುವವರ ಅಥವಾ ಒಳಗಾದವರ ಬಗ್ಗೆ ತಮ್ಮ ಗಮನಕ್ಕೆ ಬಂದರೆ 112 ನಂಬರ್ಗೆ ಕರೆ ಮಾಡಿ ಸೂಚಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಬಡಾವಣಾ ಪೋಲೀಸ್ ಠಾಣೆಯ ಪೋಲೀಸ್ ಇನ್ಸ್ ಪೆಕ್ಟರ್ ಎಂ. ಆರ್. ಚೌಬೆ, ಸಂಸ್ಥೆಯ ನಿರ್ದೇಶಕರೂ ಹಾಗೂ ಪಾಲಿಕೆಯ ಮಾಜಿ ಮೇಯರ್ ಎಸ್ ಟಿ ವೀರೇಶ್, ಸಂಸ್ಥೆಯ ಕಾರ್ಯದರ್ಶಿಗಳಾದ ವೈ ದಿ ವಿನಯ್ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಜಿ. ವಿರೂಪಾಕ್ಷಪ್ಪ ಉಪಸ್ಥಿತರಿದ್ದರು. ಕಾಲೇಜಿನ ಇಂಗ್ಲಿಷ್ ಉಪನ್ಯಾಸಕರಾದ ಡಿ. ಸುಧನ್ವ ಪ್ರಾರ್ಥಿಸಿದರೆ, ಕಾಲೇಜಿನ ಉಪ ಪ್ರಾಂಶುಪಾಲರಾದ ಪ್ರದೀಪ ಕೆ ವಿ ಕಾರಂತ್ ಕಾರ್ಯಕ್ರಮ ನಿರ್ವಹಣೆ ಮಾಡಿದರು.

# ಹಾಲುಕೊಳ್ಳದ ಜಂಗಮೇಶ್ವರಸ್ವಾಮಿಯ ಪುನರ್ ನಿರ್ಮಾಣ ಕಟ್ಟಡ ಲೋಕಾರ್ಪಣೆ

**ಹೊಳಲ್ಕೆರೆ :** ಮೂರನೆ ಬಾರಿ ಹೊಳಲ್ಕೆರೆಯಲ್ಲಿ ಶಾಸಕನಾಗಿದ್ದೇನೆ. ಮತ ಹಾಕಿದವರು, ಹಾಕದವರು ಎನ್ನುವ ತಾರತಮ್ಯ ಯಾರಿಗೂ ಮಾಡಿಲ್ಲ. ಎಲ್ಲರನ್ನು ಸಮಾನವಾಗಿ ಕಾಣುತ್ತಿದ್ದೇನೆ. ಅಧಿಕಾರವಿದ್ದಾಗ ಜನರಿಗೆ ಉಪಕಾರ ಮಾಡಬೇಕೆಂಬ ಮನೋಭಿಲಾಷೆ ನನ್ನದು ಎಂದು ಶಾಸಕ ಡಾ.ಎಂ.ಚಂದ್ರಪ್ಪ ನುಡಿದರು.

ತಾಲ್ಲೂಕಿನ ತಾಳಿಕಟ್ಟೆ ಗ್ರಾಮದಲ್ಲಿ ಹಾಲುಕೊಳ್ಳದ ಜಂಗಮೇಶ್ವರಸ್ವಾಮಿಯ ಪುನರ್ ನಿರ್ಮಾಣ ಕಟ್ಟಡ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಪ್ರಥಮ ಬಾರಿಗೆ ಭರಮಸಾಗರ ವಿಧಾನಸಭಾ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸಿದಾಗ ಮತ ಕೇಳಲು ಹಳ್ಳಿಗಳಿಗೆ ಹೋಗಲು ರಸ್ತೆಗಳಿರಲಿಲ್ಲ. ಗೆದ್ದ ಮೇಲೆ ಐದು ವರ್ಷದಲ್ಲಿ 386 ಹಳ್ಳಿಗಳಿಗೆ ರಸ್ತೆ ಮಾಡಿಸಿದ್ದರಿಂದ ಜನ ರಸ್ತೆ ರಾಜ ಎನ್ನುವ ಬಿರುದು ನೀಡಿ ಎರಡನೆ



ಬಾರಿಗೆ ಚುನಾವಣೆಗೆ ನಿಂತಾಗ ಯುವಕರು ನನ್ನನ್ನು ಹೆಗಲ ಮೇಲೆ ಕೂರಿಸಿಕೊಂಡು ಮೆರವಣಿಗೆ ಮಾಡಿ 21 ಸಾವಿರ ಮತಗಳ ಅಂತರದಿಂದ ಮತ್ತೆ ಗೆಲ್ಲಿಸಿದರೆಂದು ಶಾಸಕ ಡಾ.ಎಂ.ಚಂದ್ರಪ್ಪ ಸ್ಮರಿಸಿಕೊಂಡರು.

ಸಾರ್ವಜನಿಕರ ಬದುಕನ್ನು ಸ್ವಂತ ಬದುಕೆಂದು ಅರ್ಥಮಾಡಿಕೊಂಡು ಕ್ಷೇತ್ರದ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ. ಭದ್ರಾ ಜಲಾಶಯದಿಂದ ಇನ್ನು ಮೂರು ತಿಂಗಳೊಳಗೆ ತಾಲ್ಲೂಕಿನ 37 ಕೆರೆಗಳಿಗೆ ನೀರು ತುಂಬಿಸುತ್ತೇನೆಂದು ಭರವಸೆ ನೀಡಿದರು.

ಹೊಸದುರ್ಗ ಕನಕ ಗುರುಪೀಠದ ಈಶ್ವರಾನಂದಪುರಿ ಮಹಾಸ್ವಾಮೀಜಿ ಮಾತನಾಡಿ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪನವರು ಪಕ್ಷಾತೀತವಾಗಿದ್ದಾರೆ. ಬೇರೆ ಪಕ್ಷದವರೆಂದು ಯಾರನ್ನು ಕಡೆಗಣಿಸುವುದಿಲ್ಲ. ಇಂತಹ ಶಾಸಕರು ನಿಮಗೆ ಸಿಕ್ಕಿರುವುದು ಪುಣ್ಯ. ಗ್ರಾಮಕ್ಕೆ ಏನೇನು ಬೇಕು ಎನ್ನುವುದನ್ನು ಪಟ್ಟಿ ಮಾಡಿಕೊಂಡು ಶಾಸಕರಿಂದ ಅನುಕೂಲ ಪಡೆದುಕೊಳ್ಳಿ. ಇನ್ನು ಮೂರು ತಿಂಗಳೊಳಗೆ ಭದ್ರಾ ಜಲಾಶಯದಿಂದ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವುದಾಗಿ ಮಾತು ಕೊಟ್ಟಿದ್ದಾರೆ. ಅವರಲ್ಲಿ ಬದ್ದತೆಯಿದೆ. ಹೇಳಿದ ಕೆಲಸವನ್ನು ಮಾಡಿ ಮುಗಿಸುವ ಸಾಮರ್ಥ್ಯವಿದೆ. ಹೊಸಕೆರೆ ಮತ್ತು ಹಳೆಕೆರೆಯ ಹೂಳೆತ್ತುವಂತೆ ಶಾಸಕರಲ್ಲಿ ಬೇಡಿಕೆಯಿಟ್ಟ ಸ್ವಾಮೀಜಿ ಶಾಸಕ ಡಾ.ಎಂ.ಚಂದ್ರಪ್ಪನವರಿಗೆ ನೀವುಗಳೆಲ್ಲಾ ಸಹಕಾರ ಕೊಡಿ ಎಂದು ತಾಳಿಕಟ್ಟೆ ಗ್ರಾಮದ ಹಾಲುಮತಸ್ಥರಿಗೆ ಸೂಚಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಕೃಷ್ಣಮೂರ್ತಿ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಬಿ.ಗಂಗಾಧರ್, ಗೋವಿಂದಪ್ಪ, ಚಿಕ್ಕಪ್ಪ, ಹಳ್ಳಪ್ಪ, ಯಲ್ಲಪ್ಪ, ಚಂದ್ರಪ್ಪ ಹಾಗೂ ಊರಿನ ಪ್ರಮುಖರು ಈ ಸಂದರ್ಭದಲ್ಲಿ ಹಾಜರಿದ್ದರು.

## ಸಾರಿಗೆ ಬಸ್–ಕಾರು ಮುಖಾಮುಖಿ ಡಿಕ್ಕಿ ಹಲವರಿಗೆ ಪೆಟ್ಟು

**ಮೂಡಿಗೆರೆ:** ಕೆಎಸ್‌ಆರ್‌ಟಿಸಿ ಬಸ್ ಹಾಗೂ ಕಾರ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದ ಪರಿಣಾಮ ಕಾರ್‌ನಲ್ಲಿದ್ದ ನಾಲ್ವರು ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಚಾರ್ಮಾಡಿ ಘಾಟ್‌ನಲ್ಲಿ ನಡೆದಿದೆ.



ಕಾರಿನಲ್ಲಿದ್ದವರು ಶಿವಮೊಗ್ಗದಿಂದ ಧರ್ಮಸ್ಥಳಕ್ಕೆ ತೆರಳುತ್ತಿದ್ದರು ಎಂದು ತಿಳಿದು ಬಂದಿದೆ. ಅಪಘಾತ ಸಂಭವಿಸುತ್ತಿದ್ದಂತೆಯೇ ಚಾರ್ಮಾಡಿ ಘಾಟ್‌ನಲ್ಲಿ ಟ್ರಾಫಿಕ್ ಜಾಮ್ ಉಂಟಾಯಿತು, ವಿಷಯ ತಿಳಿದು ಸ್ಥಳಕ್ಕೆ ತೆರಳಿದ ಬಣಕಲ್ ಪೊಲೀಸರು ಅಪಘಾತಗೊಂಡಿದ್ದ ಕಾರ್ ಹಾಗೂ ಬಸ್ಸನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ.

ಜೂನ್ ಹಾಗೂ ಜುಲೈ ತಿಂಗಳಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವ ವೇಳೆ ಪದೇ ಪದೇ ಅಪಘಾತಗಳು ಮರುಕಳಿಸುತ್ತಿದ್ದವು ಇದೀಗ ಮಳೆ ಕಡಿಮೆಯಾದ ಬೆನ್ನಲ್ಲೇ ಅಪಘಾತಗಳ ಸಂಖ್ಯೆ ಇಳಿಕೆಯಾಗಿದೆ. ವಾರಾಂತ್ಯಗಳಲ್ಲಿ ಹೆಚ್ಚಿನ ಜನರು ಧರ್ಮಸ್ಥಳಕ್ಕೆ ತೆರುಳುವುದರಿಂದ ಎಚ್ಚರಿಕೆ ಚಾಲನೆ ಅಗತ್ಯವಾಗಿದೆ.

# ಅಕ್ಷರಾಭ್ಯಾಸ ಕಾರ್ಯಕ್ರಮ



**ಶಿವಮೊಗ್ಗ,ಆ,11:** ಹಿಂದೂ ಪದ್ಧತಿಯಲ್ಲಿ, ಅಕ್ಷರಾಭ್ಯಾಸಂ ಅಥವಾ ವಿದ್ಯಾರಂಭಂ ಎಂದರೆ ಮಗುವನ್ನು ಶಿಕ್ಷಣದ ಪ್ರಪಂಚಕ್ಕೆ ವಿಧ್ಯುಕ್ತವಾಗಿ ಸೇರಿಸುವುದು. ಅಕ್ಷರ, ಅಂದರೆ "ಅಕ್ಷರ" ಮತ್ತು ಅಭ್ಯಾಸ, ಅಂದರೆ "ಅಧ್ಯಯನ". ಈ ಪದವು ಎರಡು ಪದಗಳ ಸಂಯೋಜನೆಯಾಗಿದೆ ಎಂದು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥಸ್ವಾಮೀಜಿ ಅಭಿಪ್ರಾಯಪಟ್ಟರು.

ಅವರು ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಶಿವಮೊಗ್ಗ ಶಾಖೆಯ ಶರಾವತಿ ನಗರದ ಶ್ರೀ ಆದಿಚುಂಚನಗಿರಿ ಸಂಯುಕ್ತ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಪ್ರಿ ಕೆ ಜಿ ಮತ್ತು ಎಲ್ ಕೆ ಜಿ ಪುಟಾಣಿ ಮಕ್ಕಳಿಗೆ ಬಿ ಜಿ ಎಸ್ ಸಭಾಭವನದಲ್ಲಿ ಅಕ್ಷರಾಭ್ಯಾಸ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ,ಅಕ್ಷರ ಅಭ್ಯಾಸವು ವ್ಯಕ್ತಿಯೊಬ್ಬನ ಜೀವನದಲ್ಲಿ ಬಹಳ ಮುಖ್ಯವಾದ ಪಾತ್ರ ವಹಿಸುತ್ತದೆ. ಆದ್ದರಿಂದ, ಪ್ರತಿಯೊಬ್ಬರೂ ಅಕ್ಷರ ಅಭ್ಯಾಸವನ್ನು ಗಂಭೀರವಾಗಿ ಪರಿಗಣಿಸಬೇಕು.

ಶಿಕ್ಷಣದ ಆರಂಭವು ಪ್ರತಿಯೊಂದು ಮಗುವಿನ ಜೀವನದಲ್ಲಿ ಒಂದು ಪ್ರಮುಖ ಮೈಲಿಗಲ್ಲು. ಆದ್ದರಿಂದ ಈ ಪ್ರಯಾಣವನ್ನು ಶುಭ ಸೂಚನೆಯಾಗಿ, ವಿದ್ಯಾರಂಭದಂತಹ ಸಾಂಪ್ರದಾಯಿಕ ಸಮಾರಂಭದೊಂದಿಗೆ ಪ್ರಾರಂಭಿಸುವುದು ಅರ್ಥಪೂರ್ಣವಾಗಿದೆ.ಮಕ್ಕಳಲ್ಲಿ ನಾವು ಸಂಸ್ಕೃತಿ ಹಾಗೂ ಸಂಸ್ಕಾರವನ್ನು ಹುಟ್ಟು ಹಾಕಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಕರು ಮತ್ತು ಪೋಷಕರು ನಿತ್ಯ ಶ್ರಮ ವಹಿಸಬೇಕು ಎಂದರು.

ಮಗುವಿನ ತಂದೆ ಅಥವಾ ಗುರುವು ಮಗುವಿನ ಕೈ ಹಿಡಿದು, ಸ್ಲೇಟ್ ಅಥವಾ ತಟ್ಟೆಯಲ್ಲಿ ಅಕ್ಕಿಯ ಮೇಲೆ ಓಂ, ಶ್ರೀ, ಮತ್ತು ಇತರ ದೇವರ ಹೆಸರುಗಳನ್ನು ಬರೆಯುತ್ತಾರೆ. ನಂತರ, ಮಗುವು ತಾನೇ ಅಕ್ಷರಗಳನ್ನು ಬರೆಯಲು ಪ್ರಯತ್ನಿಸುತ್ತದೆ ಎಂದು ಪೂಜ್ಯರು ತಿಳಿಸಿದರು.

ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ನಾದಮಯಾನಂದನಾಥ ಸ್ವಾಮೀಜಿ ಉಪಸ್ಥಿತರಿದ್ದರು. ಶಾಲೆಯ ಪ್ರಾಂಶುಪಾಲರು, ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಮತ್ತು ಪೋಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

### ನಗರದ ದುಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಸಚಿವ ಎಚ್.ಕೆ.ಪಾಟೀಲ ಭೇಟಿ

# ಬಡಮಹಿಳೆ ಮತ್ತು ಮಕ್ಕಳಿಗೆ ವೇದ್ಯಕೀಯ ಸೇವೆ ತ್ವರಿಗತಿಯಲ್ಲಿ ದೊರಕಿಸಿ : ಸಚಿವ ಎಚ್.ಕೆ.ಪಾಟೀಲ




**ಗದಗ:** ಬಡಮಹಿಳೆ ಮತ್ತು ಮಕ್ಕಳಿಗೆ ವೈದ್ಯಕೀಯ ಸೇವೆ ತ್ವರಿತಗತಿಯಲ್ಲಿ ದೊರಕಬೇಕು. ಅವರು ಚಿಕಿತ್ಸೆಯಿಂದ ವಂಚಿತರಾಗಬಾರದು ಎಂದು ರಾಜ್ಯದ ಕಾನೂನು ನ್ಯಾಯ ಹಾಗೂ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್ ಕೆ ಪಾಟೀಲ್ ತಿಳಿಸಿದರು.

ನಗರದ ದುಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ದುಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಹಾಗೂ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಕುಂದುಕೊರತೆ ಸಭೆ ಜರುಗಿಸಿ ಮಾತನಾಡಿದರು.

ಆಸ್ಪತ್ರೆಯಲ್ಲಿ ರೋಗಿಗಳಿಗೆ ಮೂಲಭೂತ ಸೌಲಭ್ಯದ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಆಸ್ಪತ್ರೆಯ ಒಳಗಡೆ ಹಾಗೂ ಹೊರಗಡೆ ಆವರಣ ಸ್ವಚ್ಛತೆಯಿಂದ ಕೂಡಿರುವಂತೆ ಕ್ರಮ ವಹಿಸಬೇಕು. ಆಸ್ಪತ್ರೆಗೆ ಬಂದ ರೋಗಿಗಳ ಸಮಸ್ಯೆಗಳಿಗೆ ಸ್ಪಂದಿಸಿ ಚಿಕಿತ್ಸೆ ನೀಡಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವರು ಆಸ್ಪತ್ರೆಯಲ್ಲಿನ ದಾಖಲಾದ ರೋಗಿ ಹಾಗೂ ಅವರ ಸಂಬಂಧಿಕರೊಂದಿಗೆ ಮಾತನಾಡಿ ಮೂಲಭೂತ ಸೌಕರ್ಯಗಳು ಒದಗುತ್ತಿರುವ ಕುರಿತು ಹಾಗೂ ಕುಂದುಕೊರತೆಗಳನ್ನು ಆಲಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸವನಗೌಡ ಕರಿಗೌಡರ ಮಾತನಾಡಿ ಪ್ರತಿದಿನ 80 ರಿಂದ 100 ಒಪಿಡಿ ಹೊರರೋಗಿಗಳ ವಿಭಾಗದಲ್ಲಿ ಬಾಣಂತಿಯರು ಹಾಗೂ ಸ್ತ್ರೀ ರೋಗಿಗಳು ಚಿಕಿತ್ಸೆ ಸೇವೆಯನ್ನು ಪಡೆಯುತ್ತಾರೆ. ಸಂತಾನ ಹರಣ ಶಸ್ತ್ರ ಚಿಕಿತ್ಸೆ 200 ರಿಂದ 300 ಸೇವೆಯನ್ನು ಪಡೆಯುತ್ತಾರೆ ಎಂದು ಸಭೆಗೆ ತಿಳಿಸಿದರು. ಒಂದು ವರ್ಷದಲ್ಲಿ ಒಟ್ಟು 500 ರಿಂದ 600 ವರೆಗೆ ಹೆರಿಗೆ ಚಿಕಿತ್ಸೆ ಮಾಡಲಾಗುತ್ತಿದೆ ಎಂದು ಅಂಕಿ ಅಂಶವನ್ನು ಸಭೆಗೆ ತಿಳಿಸಿದರು.

ಜಿಲ್ಲಾ ಕೇಂದ್ರದಲ್ಲಿ ಹೆರಿಗೆ ಆಸ್ಪತ್ರೆಗೆ ಬರುವ ಹೆರಿಗೆ ಗರ್ಭಿಣಿ ತಾಯಂದಿರು ಸಹಜ ಹೆರಿಗೆಯು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ, ತಾಲೂಕು ಆರೋಗ್ಯ ಕೇಂದ್ರದಲ್ಲಿ ನಡೆಯುತ್ತವೆ. ಮತ್ತು ಸಹಜವಾಗಿ ಹೆರಿಗೆ ಆಗದೆ ಇರುವ ಗರ್ಭಿಣಿ ತಾಯಂದಿರಿಗೆ ಗದಗ್ ಕೇಂದ್ರ ಸ್ಥಾನದಲ್ಲಿರುವ ಮಾನ್ವಿ ದುಂಡಪ್ಪ ಮಹಿಳಾ ಮತ್ತು ಮಕ್ಕಳ ಹೆರಿಗೆ ಆಸ್ಪತ್ರೆಗೆ ಕಳುಹಿಸಲಾಗುತ್ತದೆ. 4:30 ಗಂಟೆಯ ನಂತರದ ಅವಧಿಯಲ್ಲಿ ಸಾಯಂಕಾಲ ಅರವಳಿಕೆ ತಜ್ಞರು ಇಲ್ಲದೆ ಇರುವ ಕಾರಣ, ಕೆ ಎಚ್ ಪಾಟೀಲ್ ಸರ್ಕಾರಿ ಆಸ್ಪತ್ರೆಗೆ ಹೆರಿಗೆ ಚಿಕಿತ್ಸೆಗೆ ಹೋಗುತ್ತಾರೆ ಎಂದು ಸಭೆಯ ಗಮನಕ್ಕೆ ತಂದರು.

ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್.ನೀಲಗುಂದ ಅವರು ಆಸ್ಪತ್ರೆಗಳಲ್ಲಿನ ಕುಂದುಕೊರತೆಗಳ ನಿವಾರಣೆಗೆ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರ್‌ಸಾಬ ಬಬರ್ಜಿ, ಜಿಲ್ಲಾ ಪಂಚಾಯತ್ ಸಿಇಒ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಮಕ್ಕಳ ತಜ್ಞರು ಸ್ತ್ರೀ–ರೋಗ ತಜ್ಞರು, ವೈದ್ಯರು ಅಧಿಕಾರಿಗಳು ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಪಠ್ಯ ಕ್ರಮದ ಜೊತೆಗೆ ಪಠ್ಯೇತರ ಸಾಮಾನ್ಯ ತಿಳುವಳಿಕೆ ಅತಿಮುಖ್ಯ : ಡಾ. ಬಸವಕುಮಾರ ಸ್ವಾಮೀಜಿ

**ಚಿತ್ರದುರ್ಗ, ಆ. 10 :** ಸಮಾಜದಲ್ಲಿ ಇನ್ನೂ ಸಾಮಾಜಿಕ ಅಸಮಾನತೆ ಶೇಕಡಾವಾರು ಜನರ ಜೀವನದ ಮೇಲೆ ಪರಿಣಾಮ ಬೀರುತ್ತಿರುವುದು ವಿಷಾದಕರ. ಈ ಅಸಮಾನತೆಯನ್ನು ನಿವಾರಿಸಲು ಶಿಕ್ಷಣವೇ ಶಕ್ತಿಯುತ ಪರಿಹಾರೋಪಾಯವಾಗಿದೆ ಎಂದು ಎಸ್.ಜೆ.ಎಂ. ವಿದ್ಯಾಪೀಠ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳು ಹೇಳಿದರು.

ನಗರದ ಎಸ್.ಜೆ.ಎಂ. ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಸಮಾಜಶಾಸ್ತ್ರದ ಅಧ್ಯಾಪಕ ಸಂಘ ಅವರ ಸಂಯುಕ್ತ ಆಶ್ರಯದಲ್ಲಿ ಆಗಸ್ಟ್ 6ರಂದು ಬುಧವಾರ ಸಮಾಜಶಾಸ್ತ್ರ 3ನೇ ಮತ್ತು 4ನೆಯ ಸೆಮಿಸ್ಟರ್‌ನ ಪಠ್ಯಕ್ರಮದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಶ್ರೀಗಳು, ಜಯದೇವ ವಿದ್ಯಾರ್ಥಿ ನಿಲಯಗಳ ಮೂಲಕ ಹಿಂದುಳಿದ ಮತ್ತು ಬಡವರ್ಗದ ವಿದ್ಯಾರ್ಥಿಗಳಿಗೆ ಉಚಿತ ಪ್ರಸಾದ ವಸತಿ ಅನುಕೂಲಗಳನ್ನು ಕಲ್ಪಿಸಲಾಗುತ್ತಿದೆ. ಈ ಯೋಜನೆಗಳು ವಿದ್ಯಾರ್ಥಿಗಳಿಗೆ ಸಮಾನ ಅವಕಾಶಗಳನ್ನು ನೀಡುತ್ತಿವೆ ಮತ್ತು ಶಿಕ್ಷಣದ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಹಾಯ ಮಾಡುತ್ತಿವೆ. ಈ ನೆಲೆಗಟ್ಟಿನಲ್ಲಿ ಚಿತ್ರದುರ್ಗ ಮುರುಘಾಮಠವು ನೀಡುತ್ತಿರುವ ಕೊಡುಗೆ ಅನನ್ಯವಾಗಿದೆ. ನೂರಾರು ಹಾಸ್ಟೆಲ್‌ಗಳನ್ನು ಸ್ಥಾಪಿಸಿ ಸಾವಿರಾರು ವಿದ್ಯಾರ್ಥಿಗಳಿಗೆ ಬೆಳಕಿನ ದಾರಿ ತೋರಿಸಲಾಗಿದೆ. ಇಂಥ ಸೇವಾ ಕಾರ್ಯಗಳು ನಿಜವಾದ ಅರ್ಥದಲ್ಲಿ ಸಾಮಾಜಿಕ ಸಮಾನತೆಗೆ ಪ್ರೇರಣೆಯಾಗಿದೆ ಎಂದರು.

ಕರ್ನಾಟಕ ವಿಶ್ವವಿದ್ಯಾಲಯದ ಸಮಾಜಶಾಸ್ತ್ರ ವಿಭಾಗ ಹಿರಿಯ ಪ್ರಾಧ್ಯಾಪಕ ಡಾ. ಶೌಕತ್ ಅಜೀಂ ಮಾತನಾಡುತ್ತ, ಸಮಾಜ ಎಂದರೆ ಸರ್ವ ಮಾನವ ಜನಾಂಗದ ಅಧ್ಯಯನ. ಇಂತಹ ಸಮಾಜವು ಸಹಬಾಳ್ವೆ, ಪರಸ್ಪರ ಗೌರವ ಮತ್ತು ನೈತಿಕ ಮೌಲ್ಯಗಳ ಮೇಲೆ ನಿಂತಿದೆ. ಈ ಮೌಲ್ಯಗಳನ್ನು ಮಕ್ಕಳಿಗೆ ಕಲಿಸುವಲ್ಲಿ ತಾಯಿ–ತಂದೆ ಮಹತ್ವದ ಪಾತ್ರವಹಿಸುತ್ತಾರೆ. ಪೋಷಕರು ಬದುಕಿಗೆ ದಿಕ್ಕು ನೀಡುವ ಮೊದಲ ಗುರುಗಳು. ಸಮಾಜವನ್ನು ವೈಜ್ಞಾನಿಕವಾಗಿ ಅರ್ಥಮಾಡಿಕೊಳ್ಳಲು ಸಮಾಜಶಾಸ್ತ್ರ ಅನಿವಾರ್ಯವಾಗಿದೆ. ಇದು ಸಮಾಜದ ಸಮಸ್ಯೆಗಳನ್ನು ತಿಳಿದು ಅವುಗಳಿಗೆ ಪರಿಹಾರವನ್ನೂ ಸೂಚಿಸುತ್ತದೆ. ಸಮಾಜ, ಪೋಷಕರು ಮತ್ತು ಸಮಾಜಶಾಸ್ತ್ರ ಈ ಮೂರೂ ಉತ್ತಮ ಜೀವನದ ಆಧಾರ ಶಕ್ತಿಗಳಾಗಿವೆ. ಎಂದು ತಿಳಿಸಿದರು.



ಎಸ್.ಜೆ.ಎಂ. ವಿದ್ಯಾಪೀಠದ ಶಿಕ್ಷಣಾಧಿಕಾರಿ ಚೆಲುವರಾಜ್ ಎನ್. ಮಾತನಾಡಿ, ಸಮಾಜಶಾಸ್ತ್ರ ವಿಭಾಗದಲ್ಲಿ ಅತ್ಯುತ್ತಮ ಅವಕಾಶ ಇದೆ. ಅದನ್ನು ಪ್ರಾಧ್ಯಾಪಕರುಗಳು ಕಾರ್ಯಾಗಾರದ ಮೂಲಕ ವಿದ್ಯಾರ್ಥಿಗಳಿಗೆ ತಿಳಿಸುವುದು ಅಗತ್ಯ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಎಲ್. ಈಶ್ವರಪ್ಪ ಮಾತನಾಡಿ, ನಮ್ಮ ಕಾಲೇಜಿನಲ್ಲಿ ಈ ಕಾರ್ಯಕ್ರಮ ನಡೆಸಲು ಕೇಳಿದಾಗ ಬೇರೆ ಕಾಲೇಜನಲ್ಲಿ ಈಗಾಗಲೆ ನಡೆಸಲು ಮುಂದೆಬಂದಿದ್ದಾರೆ ಎಂದು ಹೇಳಿದಾಗ ಬಿಡದೆ ಚಿತ್ರದುರ್ಗದಲ್ಲಿ ನಡೆಸಲೇಬೇಕು ಎಂದು ಪ್ರಯತ್ನಿಸಲಾಯಿತು. ಈ ಕಾರ್ಯಕ್ರಮದಲ್ಲಿ ಉಪನ್ಯಾಸಕ ಗಿರೀಶ್ ಎಲ್ಲಾ ಉಸ್ತುವಾರಿ ತೆಗೆದು–ಕೊಂಡು ನಿರ್ವಹಿಸಿದರು ಎಂದು ಹೇಳಿದರು.

ದಾವಣಗೆರೆ ವಿಶ್ವವಿದ್ಯಾಲಯ ಪದವಿ ಕಾಲೇಜು ಅಧ್ಯಾಪಕ ಸಂಘದ ಅಧ್ಯಕ್ಷ ಡಾ. ಹೆಚ್. ತಿಪ್ಪೇಸ್ವಾಮಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ದಾವಣಗೆರೆ ವಿಶ್ವವಿದ್ಯಾಲಯದ ವಿವಿಧ ಪ್ರಥಮದರ್ಜೆ ಕಾಲೇಜುಗಳ ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು ಹಾಗೂ ಎಸ್.ಜೆ.ಎಂ. ಕಾಲೇಜಿನ ಬೋಧಕ ಹಾಗೂ ಬೋಧ–ಕೇತರ ಸಿಬ್ಬಂದಿ ಹಾಗೂ ಸಮಾಜಶಾಸ್ತ್ರದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಡಾ ವಿಮೋಚನಾ ಸ್ವಾಗತಿಸಿದರು. ದ್ವಿತೀಯ ಬಿ.ಎ. ವಿದ್ಯಾರ್ಥಿಗಳಾದ ಬಿಂದು ಲಾವಣ್ಯ ವಚನಗೀತೆ ಮೂಲಕ ಪ್ರಾರ್ಥನೆ ಮಾಡಿದರು ಅರ್ಥಶಾಸ್ತ್ರ ಸಹಾಯಕ ಪ್ರಾಧ್ಯಾಪಕ ನಾಗರಾಜ್ ಜಿ.ಎಸ್. ವಂದಿಸಿದರು. ಸಮಾಜಶಾಸ್ತ್ರ ಉಪನ್ಯಾಸಕರಾದ ಟಿ.ಎಸ್. ಗಿರೀಶ್ ನಿರೂಪಿಸಿದರು.

## ವಿಕಲಚೇತನ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಿಗೆ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಹಾಸನ :** ಪ್ರತಿ ವರ್ಷದಂತೆ ಡಿಸೆಂಬರ್ 03 ರಂದು ವಿಶ್ವ ವಿಕಲಚೇತನರ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸುವ ಸಂಬಂಧವಾಗಿ, ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ ಮತ್ತು ವೈಯಕ್ತಿಕ ವಿಭಾಗದಡಿ ರಾಜ್ಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿದ್ದು, ವಿಕಲಚೇತನರ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು, ವಿಶೇಷ ಶಿಕ್ಷಕರು ಮತ್ತು ವೈಯಕ್ತಿಕ ವಿಭಾಗದಡಿ ಸಾಧನೆಗೈದ ವಿಕಲಚೇತನರು ಅ.10 ರೊಳಗೆ ತಮ್ಮ ಸಾಧನೆಯ ದಾಖಲಾತಿಗಳೊಂದಿಗೆ ನಿಗಧಿತ ಅರ್ಜಿಯೊಂದಿಗೆ ಪ್ರಸ್ತಾವನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಹಾಸನ ಇವರಿಗೆ ಸಲ್ಲಿಸುವುದು.

ನಿಗಧಿತ ಅರ್ಜಿ ನಮೂನೆಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, 9ನೇ ಕ್ರಾಸ್, ಶಂಕರಮಠ ರಸ್ತೆ, ಕೆ.ಆರ್.ಪುರಂ, ಹಾಸನ ದೂರವಾಣಿ ಸಂಖ್ಯೆ 08172–295546 ರವರನ್ನು ಸಂಪರ್ಕಿಸಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಅರ್ಹ ವಿಕಲಚೇತನರಿಗೆ ಅವಶ್ಯವಿರುವ ಸಾಧನ ಸಲಕರಣೆಗಳ ವಿತರಣೆ ಯೋಜನೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಸಂಬಂಧವಾಗಿ ಹಾಗೂ ಯೋಜನೆಗಳು/ಕಾರ್ಯಕ್ರಮಗಳ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, 9ನೇ ಕ್ರಾಸ್, ಶಂಕರಮಠ ರಸ್ತೆ, ಕೆ.ಆರ್.ಪುರಂ, ಹಾಸನ ದೂರವಾಣಿ ಸಂಖ್ಯೆ; 08172–264546/295546 ಹಾಗೂ ಸಂಬಂಧಪಟ್ಟ ತಾಲ್ಲೂಕಿನ ತಾಲ್ಲೂಕು ಪಂಚಾಯತ್ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದೇಶ ಪುನರ್ವಸತಿ ಕಾರ್ಯಕರ್ತರು(ಒಖಫ) ರವರುಗಳಾದ ಹಾಸನ–9964536271, ಚನ್ನರಾಯಪಟ್ಟಣ–9731401621, ಅರಸೀಕೆರೆ–9902649777, ಹೊಳೆನರಸೀಪುರ–9844229927, ಬೇಲೂರು–8861899350, ಆಲೂರು–9844572560, ಅರಕಲಗೂಡು–9902757869, ಸಕಲೇಶಪುರ–9482262448 ಸಂಪರ್ಕಿಸಬಹುದಾಗಿದೆ ಎಂದು

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ವಸತಿ ನಿಲಯಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿ: ಡಾ.ಸೀಮಾ



**ಚಿಕ್ಕಮಗಳೂರು:** ವಸತಿ ನಿಲಯಗಳ ಸುತ್ತಮುತ್ತ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆಗೊಳಿಸಿ ಸ್ವಚ್ಛತೆ ಕಾಪಾಡುವಂತೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎಸ್.ಸೀಮಾ ತಿಳಿಸಿದರು.

ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆಯ ಪ್ರಯುಕ್ತ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ವಸತಿ ನಿಲಯ ಪಾಲಕರಿಗೆ ಇಂದು ಆಯೋಜಿಸಿದ್ದ ಡೆಂಗ್ಯೂ ಮಾಹಿತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಡೆಂಗ್ಯೂ, ಮಲೇರಿಯಾ, ಚಿಕೂನ್ ಗುನ್ಯದಂತಹ ರೋಗಗಳು ಮಳೆಗಾಲದಲ್ಲಿ ಅತೀ ಹೆಚ್ಚಾಗಿ ಕಂಡು ಬಂದಿರುವುದರಿಂದ ನಿಂತ ನೀರನ್ನು ಸರಾಗವಾಗಿ ಹರಿಯುವಂತೆ ಮಾಡುವುದು ಅಗತ್ಯ. ನೀರಿನ ಎಲ್ಲಾ ಪರಿಕರಗಳನ್ನು ಸಮರ್ಪಕವಾಗಿ ಮುಚ್ಚಿಡುವುದರಿಂದ ಸೊಳ್ಳೆಗಳನ್ನು ನಿಯಂತ್ರಿಸಬಹುದು. ಜೊತೆಗೆ ಎಲ್ಲಾ ವಸತಿ ನಿಲಯಗಳಲ್ಲಿ ಸೊಳ್ಳೆ ಪರದೆ ಮತ್ತು ಮೆಶ್‌ಗಳನ್ನು ಅಳವಡಿಸುವಂತೆ ಸೂಚನೆ ನೀಡಿದರು.

ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಶಶಿಕಲಾ ಮಾತನಾಡಿ, ಗ್ರಾಮೀಣ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳನ್ನು ಒಳಗೊಂಡಂತೆ ತಂಡಗಳನ್ನಾಗಿ ಮಾಡಿ ಲಾರ್ವಾ ಸಮೀಕ್ಷೆ ನಡೆಸಲಾಗುತ್ತಿದೆ. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಬಗ್ಗೆ ಮತ್ತು ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ದೇವರಾಜ್ ಮಾತನಾಡಿ, ಡೆಂಗ್ಯೂ ನಿಯಂತ್ರಣ ಮತ್ತು ಇಲಾಖಾವಾರು ಅನುಸರಿಸಬೇಕಾದ ಜವಾಬ್ದಾರಿಗಳ ಬಗ್ಗೆ ಹಾಗೂ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸುವಂತೆ ವಸತಿ ನಿಲಯ ಪಾಲಕರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜೆ.ಎನ್.ಬೇಬಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ್, ತಾಲ್ಲೂಕು ಆಶಾ ಮೇಲ್ವಿಚಾರಕಿ ಕಲಾಧರೆ, ತಾಲ್ಲೂಕು ವ್ಯಾಪ್ತಿಯ ವಸತಿ ನಿಲಯಗಳ ನಿಲಯಪಾಲಕರು ಭಾಗವಹಿಸಿದ್ದರು.

30ಸಿಕೆಎಂ3: ಡೆಂಗ್ಯೂ ವಿರೋಧಿ ಮಾಸಾಚರಣೆಯ ಪ್ರಯುಕ್ತ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ವಸತಿ ನಿಲಯ ಪಾಲಕರಿಗೆ ಇಂದು ಆಯೋಜಿಸಿದ್ದ ಡೆಂಗ್ಯೂ ಮಾಹಿತಿ ಕಾರ್ಯಾಗಾರದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎಸ್.ಸೀಮಾ ಮಾತನಾಡಿದರು.

## ಅನಿವಾಸಿ ಭಾರತೀಯ ಸಮಿತಿ ಉಪಾಧ್ಯಕ್ಷರ ಪ್ರವಾಸ

**ಚಿಕ್ಕಮಗಳೂರು:** ಕರ್ನಾಟಕ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ ಅವರು ಆಗಸ್ಟ್ 30 ರಂದು ಜಿಲ್ಲೆಗೆ ಆಗಮಿಸಿ ಶೃಂಗೇರಿಯ ಅತಿಥಿಗೃಹದಲ್ಲಿ ವಾಸ್ತವ್ಯ ಮಾಡುವರು. ಆಗಸ್ಟ್ 31 ರಂದು ಬೆಳಿಗ್ಗೆ 9 ಗಂಟೆಗೆ ಶೃಂಗೇರಿ ಅತಿಥಿ ಗೃಹದಿಂದ ಹೊರಟು 9.30 ಗಂಟೆಗೆ ನಾರ್ವೆಯ ಶ್ರೀ ಸ್ವಯಂ ಪ್ರಕಾಶ ಸರಸ್ವತಿ ವಿದ್ಯಾಸಂಸ್ಥೆಯ ಕ್ರೀಡಾಂಗಣ ತಲುಪುವರು.ಅನಂತರ ಶ್ರೀ ಸ್ವಯಂ ಪ್ರಕಾಶ ಸರಸ್ವತಿ ವಿದ್ಯಾಸಂಸ್ಥೆಯ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು, ತಾಲ್ಲೂಕು ಪಂಚಾಯಿತಿ, ಕೊಪ್ಪ, ಜಿಲ್ಲಾ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ಶ್ರೀ ಸ್ವಯಂ ಪ್ರಕಾಶ ಸರಸ್ವತಿ ವಿದ್ಯಾಸಂಸ್ಥೆ ಹಾಗೂ ಆಪ್ತಶ್ರೀ ಯುವಕ ಸಂಘದ ಸಂಯುಕ್ತ ಆಶ್ರಯದಲ್ಲಿ ಆಯೋಜನೆಗೊಂಡಿರುವ ಕೊಪ್ಪ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಬಾಳೆಹೊನ್ನೂರು, ಚಿಕ್ಕಮಗಳೂರು, ಹಾಸನ ಮೂಲಕ ಬೆಂಗಳೂರಿಗೆ ತೆರಳುವರು ಎಂದು ಉಪಾಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನುಗಾರಿಕೆ ಇಲಾಖೆಯಿಂದ ನೆರವಿಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** 2025–26ನೇ ಸಾಲಿನ ಮೀನುಗಾರಿಕೆ ಇಲಾಖೆ ವತಿಯಿಂದ ರಾಜ್ಯವಲಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ನೆರವು ನೀಡಲು ಅರ್ಜಿ ಅಹ್ವಾನಿಸಲಾಗಿದೆ.ಮೀನುಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಶೇ.50 ರಷ್ಟು ಅಥವಾ ಗರಿಷ್ಠ ರೂ. 3 ಲಕ್ಷ ಆರ್ಥಿಕ ನೆರವು ನೀಡಲಾಗುವುದು. ಜಿಲ್ಲೆಗೆ ಪ.ಜಾತಿ–2 ಮತ್ತು ಪ.ಪಂಗಡ–1 ಗುರಿ ನಿಗದಿಪಡಿಸಲಾಗಿದೆ. ಅರ್ಜಿಯನ್ನು ಸೆಪ್ಟೆಂಬರ್ 10 ರೊಳಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಚಿಕ್ಕಮಗಳೂರು, ಮೂಡಿಗೆರೆ: 8217096041, ಕಡೂರು: 9481050325, ತರೀಕೆರೆ: 9449363007 ನರಸಿಂಹರಾಜಪುರ, ಕೊಪ್ಪ, ಶೃಂಗೇರಿ:7411174772) ಗಳನ್ನು ಸಂಪರ್ಕಿಸಲು ಮತ್ತು ಅರ್ಜಿ ಸಲ್ಲಿಸುವಂತೆ ಮೀನುಗಾರಿಕೆ ಉಪನಿರ್ದೇಶಕರು(ಜಿ.ಪಂ.) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸತತ 216 ತಾಸು ಭರತನಾಟ್ಯ ಪ್ರದರ್ಶನ

## ದೀಕ್ಷಾ ಗೋಲ್ಡನ್ ಬುಕ್ ವರ್ಲ್ಡ್ ರೆಕಾರ್ಡ್ ಹೊಸ ದಾಖಲೆ




**ಉಡುಪಿ:** ಸತತ 216 ತಾಸು ಭರತನಾಟ್ಯ ಪ್ರದರ್ಶನದ ಮೂಲಕ ಹೊಸ ದಾಖಲೆ ಬರೆದಿರುವ ವಿದುಷಿ ದೀಕ್ಷಾ ವಿ. (23) ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್‌ನಲ್ಲಿ ತಮ್ಮ ಹೆಸರನ್ನು ದಾಖಲಿಸಿದ್ದಾರೆ.

ಆ.21ರಂದು ಭರತನಾಟ್ಯ ಪ್ರದರ್ಶನ ಆರಂಭಿಸಿದ ಅವರು, ಆ.30ರ ಮಧ್ಯಾಹ್ನ 3.30ಕ್ಕೆ ಅಂತ್ಯಗೊಳಿಸಿದರು. ಪ್ರತಿ ಮೂರು ಗಂಟೆಗೆ ಒಮ್ಮೆ 15 ನಿಮಿಷಗಳ ವಿರಾಮವನ್ನು ಕ್ಕನುಗುಣವಾಗಿ ಪಡೆದರು. ನಿಯಮ

ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಏಷ್ಯಾ ಹೆಡ್ ಮನೀಶ್ ಬಿಷ್ಣೋಯ್ ಅವರು ವಿದುಷಿದೀಕ್ಷಾ ವಿ. ಅವರ ದಾಖಲೆಯ ಬಗ್ಗೆ ಘೋಷಿಸಿದರು.ಈ ಹಿಂದಿದ್ದ 127 ತಾಸಿನ ಡಾನ್ಸ್‌ನ ವರ್ಲ್ಡ್ ರೆಕಾರ್ಡ್ ಅನ್ನು ರೆಮೋನಾ ಮುರಿದು 170 ತಾಸು ದಾಖಲೆ ಮಾಡಿದ್ದರು. ಈ ಎಲ್ಲ ದಾಖಲೆಯನ್ನು ಬ್ರಹ್ಮಾವರ ತಾಲೂಕಿನ ಮುಂಡ್ಕಿನಜೆಡ್ಡಿ ಮೂಲದ ದೀಕ್ಷಾ ದಾಟಿ ಹೊಸ ದಾಖಲೆ ಬರೆದರು.

ಅಜ್ಜರಕಾಡು ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣ ದಲ್ಲಿ ಶನಿವಾರ ನಡೆದ ಪ್ರಮಾಣ ಪತ್ರ ವಿತರಣಾ ಸಮಾರಂಭಭಾಗವಹಿಸಿ ದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಭಿನಂದನೆ ಸಲ್ಲಿಸಿದರು.

# ನಿವೃತ್ತ ನ್ಯಾಯಾಧೀಶರಿಂದ ತನಿಖೆ

**ಯಾದಗಿರಿ:** ವಿದ್ಯಾರ್ಥಿನಿಯ ಹೆರಿಗೆ ಪ್ರಕರಣ ನಾಗರಿಕ ಸಮಾಜವೇ ತಲೆ ತಗ್ಗಿಸುವಂಥದ್ದಾಗಿದೆ. ಈ ಪ್ರಕರಣ ಬಯಲಿಗೆಳೆಯಲು ನಿವೃತ್ತ ನ್ಯಾಯಾಧೀಶರಿಂದ ತನಿಖೆ ನಡೆಸಲಾಗುವುದು ಎಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ (ಕ್ರೈಸ್) ಕಾರ್ಯನಿರ್ವಾಹಕ ನಿರ್ದೇಶಕ ಹೇಳಿದರು. ಕಾಂತರಾಜು

ವಿದ್ಯಾರ್ಥಿನಿ ದಾಖಲಾಗಿ ರುವ ಶಹಾಪುರದ ಆಸ್ಪತ್ರೆಗೆ ಶನಿವಾರ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, 'ಇಡೀ ಪ್ರಕರಣ ಎಲ್ಲ ಆಯಾಮಗಳಿಂದ ತನಿಖೆ ನಡೆಸಿ ವರದಿ ಸಲ್ಲಿಸಲು ನಿವೃತ್ತ ನ್ಯಾಯಾಧೀಶ ಗೋಪಾಲ್ ಅವರನ್ನು ಜತೆಗೆ ಸಮಾಜ

ವಿದ್ಯಾರ್ಥಿನಿ ಹೆರಿಗೆ ಕೇಸ್

ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚೆನ್ನಬಸಪ್ಪ ನೋಡಲ್ ಯನ್ನಾಗಿ ನೇಮಿಸಿ ಆದೇಶಿಸಲಾಗಿದೆ. ಇನ್ಮುಂದೆ ಇಂತಹ ಘಟನೆಗಳನ್ನು ನಡೆಯದಂತೆ ಸೂಕ್ತ ಎಚ್ಚರಿಕೆ ವಹಿಸಲು ಕ್ರೈಸ್ ವಸತಿ ನಿಲಯಗಳ ಅಧಿಕಾರಿಗಳಿಗೆ ಸೂಚಿಸಲಾಗು ವುದು," ಎಂದರು.

ಕ್ರೈಸ್ ನಿರ್ದೇಶಕ ಕಾಂತರಾಜು ಭೇಟಿ ವಸತಿ ಶಾಲೆಯಲ್ಲಿ ಕಾರ್ಯ

"ಇದು ನಿರ್ಲಕ್ಷ್ಯತನದ ಪರಮಾವಧಿ ಪ್ರಕರಣ. ನಿರ್ವಹಿಸುತ್ತಿರುವ ಮತ್ತು ಜವಾಬ್ದಾರಿಯುತ ಸ್ಥಾನದಲ್ಲಿರುವ ಪ್ರಾಚಾರ್ಯರು, ವಸತಿ ನಿಲಯ ಮೇಲ್ವಿಚಾರಕಿ, ಶಿಕ್ಷಕರ ಕರ್ತವ್ಯ ಲೋಪದ ವಿರುದ್ಧ ದೂರು ದಾಖಲಿಸಿ ಅಮಾನತು

ಗೊಳಿಸಲಾಗಿದೆ. ಗುತ್ತಿಗೆ ಆಧಾರದ ಸ್ಟಾಫ್ ನರ್ಸ್ ಅವರನ್ನು ಕರ್ತವ್ಯ ದಿಂದ ವಜಾ ವಿದ್ಯಾರ್ಥಿನಿಯ ಎಡವಿದ್ದಾರೆ," ಎಂದರು.

### ಸ್ವಂತ ಕಟ್ಟಡ ಶೀಘ್ರ

**"ಹಲವಾರು ವರ್ಷಗಳಿಂದ ಬಾಲಕಿಯ ವಸತಿ ನಿಲಯಗಳು ಖಾಸಗಿ ಕಟ್ಟಡಗಳಲ್ಲಿ ನಡೆಯುತ್ತಿದ್ದು, ಭದ್ರತಾ ದೃಷ್ಟಿಯಿಂದ ಅಷ್ಟೊಂದು ಸೂಕ್ತವಲ್ಲ. ಆದಷ್ಟು ಸ್ವಂತ ಕಟ್ಟಡ ನಿರ್ಮಾಣಕ್ಕಿರುವ ಅಡೆತಡೆಗಳನ್ನು ನಿವಾರಿಸಲು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳ ಜತೆ ಮಾತನಾಡಿ ಕ್ರಮ ಕೈಗೊಳ್ಳಲಾಗುವುದು," ಎಂದು ಕಾಂತರಾಜು ಹೇಳಿದರು.**

# ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಪ್ರವಾಸ

**ಚಿತ್ರದುರ್ಗ:** ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ಸೆಪ್ಟೆಂಬರ್ 03 ಮತ್ತು 04ರಂದು ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಅಧ್ಯಕ್ಷರು ಸೆ.03ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗಕ್ಕೆ ಆಗಮಿಸಿ, ಬೆಳಿಗ್ಗೆ 10.30ಕ್ಕೆ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿ ಅವರ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಅಧ್ಯಕ್ಷರು ಸೆ.03ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗಕ್ಕೆ ಆಗಮಿಸಿ, ಬೆಳಿಗ್ಗೆ 10.30ಕ್ಕೆ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿ ಅವರ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದಲ್ಲಿರುವ ಅಲ್ಪಸಂಖ್ಯಾತರ ವಸತಿ ನಿಲಯ, ಸರ್ಕಾರಿ ಉರ್ದು ಶಾಲೆಗಳಿಗೆ ಭೇಟಿ, ಕೊಳಚೆ ಪ್ರದೇಶ, ಕಾಲೋನಿ ಅಭಿವೃದ್ಧಿ ಮತ್ತು ಇತರೆ ಕಾಮಗಾರಿಗಳ ಪರಿಶೀಲನೆ ನಡೆಸುವರು.

ಮಧ್ಯಾಹ್ನ 3.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರೈಸ್ಥರು,

ಜೈನ್, ಬೌದ್ಧರು, ಸಿಖ್ ಮತ್ತು ಪಾರ್ಸಿ ಸಮುದಾಯ ಪ್ರಮುಖರೊಂದಿಗೆ ಸಮಾಲೋಚನೆ ಹಾಗೂ ಕುಂದು ಕೊರತೆ ಅರ್ಜಿ

ಸ್ವೀಕರಿಸುವುದು. ನಂತರ ಪ್ರವಾಸಿ ಮಂದಿರದಲ್ಲಿ ವಾಸ್ತವ್ಯ ಮಾಡುವರು.ಸೆ.04ರಂದು ಬೆಳಿಗ್ಗೆ 10.30ಕ್ಕೆ ಸರ್ಕಾರಿ ಶಾಲೆಗಳಿಗೆ ಭೇಟಿ, ಮಧ್ಯಾಹ್ನ 3.30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ

ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ನಂತರ ಸಂಜೆ 5ಕ್ಕೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ತಿಳಿಸಿದ್ದಾರೆ.

## ದಾವಣಗೆರೆ ಜಿಲ್ಲಾ ದಸರಾ ಕ್ರೀಡಾಕೂಟ–2025–26

**ದಾವಣಗೆರೆ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಸೆಪ್ಟೆಂಬರ್ 1 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ದಾವಣಗೆರೆ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಉದ್ಘಾಟಿಸುವರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ದಿ ನಿಗಮದ ಅಧ್ಯಕ್ಷರಾದ ಆಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ದಿ ನಿಗಮ ನಿಯಮಿಯ ಅಧ್ಯಕ್ಷರಾದ ಎನ್.ಜಯದೇವನಾಯ್ಕ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್‌ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಆಯುಕ್ತೆ ರೇಣುಕಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಎಸ್.ಎ ಶ್ರೀಹರ್ಷ ಉಪಸ್ಥಿತರಿರುವರು.

## ಸಿಇಟಿ ಸೀಟು ಹಂಚಿಕೆ : ಎರಡನೇ ಸುತ್ತಿನ ಅಂತಿಮ ಫಲಿತಾಂಶ ಪ್ರಕಟ

**ಬೆಂಗಳೂರು:** ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಎರಡನೇ ಸುತ್ತಿನ ಸೀಟು ಹಂಚಿಕೆಯ ಅಂತಿಮ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದ್ದು, ಸೀಟು ಹಂಚಿಕೆಯಾದವರು ಸೆ.3ರೊಳಗೆ ಕಾಲೇಜಿಗೆ ವರದಿ ಮಾಡಿಕೊಳ್ಳಲು ಸೂಚನೆ ನೀಡಿದೆ.ವೈದ್ಯಕೀಯ, ದಂತ ವೈದ್ಯಕೀಯ ಕೋರ್ಸ್ ಗಳ ಎರಡನೇ ಸುತ್ತಿನ ಅಂತಿಮ ಫಲಿತಾಂಶವನ್ನು ಎಂಸಿಸಿ ಫಲಿತಾಂಶ ಹೊರಬಿದ್ದ ನಂತರ ಪ್ರಕಟಿಸಲಾಗುವುದು. ಅಲ್ಲಿಯವರೆಗೂ ಈ ಕೋರ್ಸ್‌ಗಳಿಗೆ ಸೀಟು ಹಂಚಿಕೆಯಾದವರಿಗೆ ಯಾವುದೇ ಛಾಯ್ಸ್ ಆಯ್ಕೆಗೆ ಅವಕಾಶ ಇರುವುದಿಲ್ಲ ಎಂದು ಪ್ರಾಧಿಕಾರ ತಿಳಿಸಿದೆ.ವೈದ್ಯಕೀಯ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ ಅಖಿಲ ಭಾರತ ಮಟ್ಟದ ಎರಡನೇ ಸುತ್ತಿನ ಸೀಟು ಹಂಚಿಕೆ ಪ್ರಕ್ರಿಯೆ ವಿಳಂಬವಾಗುತ್ತಿರುವ ಕಾರಣ ಯುಜಿಸಿಇಟಿ ಅಭ್ಯರ್ಥಿಗಳ ಪ್ರವೇಶಕ್ಕೆ ಅವಕಾಶ ನೀಡಲಾಗಿದೆ.

# ಎಂಎಸ್‌ಎಂಇ ಗಳ ಕಾರ್ಯಕ್ಷಮತೆ–ವೇಗ ಹೆಚ್ಚಿಸಲು ಕಾರ್ಯಕ್ರಮ : ಗಣೇಶ್ ಆರ್



**ಶಿವಮೊಗ್ಗ :** ಹೆಚ್ಚಿನ ಉದ್ಯೋಗಾವಕಾಶ ಮತ್ತು ಆರ್ಥಿಕತೆಗೆ ಉತ್ತಮ ಕೊಡುಗೆ ನೀಡುತ್ತಿರುವ ಎಂಎಸ್‌ಎಂಇ ಗಳ ಕಾರ್ಯಕ್ಷಮತೆ ಮತ್ತು ವೇಗ ಹೆಚ್ಚಿಸುವ ಉದ್ದೇಶದಿಂದ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದ್ದು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಗಣೇಶ್ ಆರ್ ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಶಿವಮೊಗ್ಗ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಇವರ ಸಹಯೋಗದಲ್ಲಿ "ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು" (ಆರ್‌ಎಎಂಪಿ) ಯೋಜನೆಯಡಿಯಲ್ಲಿ ಲೀನ್ ಯೋಜನೆ ಮತ್ತು ಝಡ್.ಇ.ಡಿ. ಹಾಗೂ ರಫ್ತು ಕುರಿತು ಗೋಪಾಲ ಗೌಡ ಬಡಾವಣೆಯ ಜಿಲ್ಲಾ ಔಷಧ ಭವನದಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೃಷಿ ನಂತರ ಹೆಚ್ಚಿನ ಉದ್ಯೋಗಾವಕಾಶಗಳನ್ನು ಒದಗಿಸುತ್ತಿರುವುದು ಎಂಎಸ್‌ಎಂಇ(ಅತಿ ಸಣ್ಣ, ಸಣ್ಣ, ಮಧ್ಯಮ ಉದ್ಯಮಗಳು)ಗಳು. ಈ ಉದ್ಯಮಗಳ ಕಾರ್ಯಕ್ಷಮತೆ ಹೆಚ್ಚಿಸಲು ಮತ್ತು ವೇಗಗೊಳಿಸುವ ಉದ್ದೇಶದಿಂದ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಕೈಗೊಂಡಿದ್ದು, ಕಾಸಿಯಾ ಎಂಎಸ್‌ಎಂಸಿಗಳಿಗೆ ಪೂರಕವಾಗಿ ಕೆಲಸ ಮಾಡುತ್ತಾ ಸಹಕರಿಸುತ್ತಿರುವುದು ಅಭಿನಂದನೀಯ.

ಸರ್ಕಾರ ಪ್ರತಿ 5 ವರ್ಷಕ್ಕೊಮ್ಮೆ ಕೈಗಾರಿಕಾ ನೀತಿ ತಂದು ಕೈಗಾರಿಕೆಗಳಿಗೆ ಹಲವಾರು ಉತ್ತೇಜನ, ಸೌಲಭ್ಯಗಳನ್ನು ನೀಡುತ್ತಿದ್ದು ಇದರ ಸದುಪಯೋಗವನ್ನು ಉದ್ಯಮಿಗಳು ಮಾಡಿಕೊಳ್ಳಬೇಕು. ಉದ್ಯಮಿಗಳು ಸರ್ಕಾರದ ವಿವಿಧ ಯೋಜನೆಗಳ ಉಪಯೋಗ ಪಡೆದು ಹೆಚ್ಚಿನ ಸಂಖ್ಯೆಯ ಕೈಗಾರಿಕೆಗಳ ಸ್ಥಾಪನೆ, ವಿಸ್ತರಣೆ, ಮಾರ್ಪಾಡು ಮಾಡಬಹುದು ಎಂದರು.

ಕೇಂದ್ರ ಸರ್ಕಾರ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಎಂಪ್ಲಾಯ್‌ಮೆಂಟ್ ಲಿಂಕ್ಡ್ ಇನ್ಸೆಂಟಿಸ್ ಸ್ಕೀಂ ಎಂಬ ಮಹಾತ್ವಾಕಾಂಕ್ಷಿ ಯೋಜನೆಯನ್ನು ಜಾರಿಗೆ ತಂದಿದ್ದು ಈ ಯೋಜನೆಯಡಿ ಎರಡು ವರ್ಷಗಳ ಕಾಲ ಉದ್ಯೋಗ ನೀಡಿದವರಿಗೆ ಮತ್ತು ಉದ್ಯೋಗ ಪಡೆದವರಿಬ್ಬರಿಗೂ ಪ್ರೋತ್ಸಾಹಧನ ನೀಡುತ್ತದೆ ಎಂದು ತಿಳಿಸಿದರು.

ಸಿಡ್ಬಿ ಡಿಜಿಎಂ ಗುಣಶೇಖರನ್ ಮಾತನಾಡಿ, ಇಂತಹ ಕಾರ್ಯಕ್ರಮಗಳು ಯುವ ಮತ್ತು ನವೋದ್ಯಮಿಗಳಿಗೆ ಕೈಗಾರಿಕೆಯಲ್ಲಿನ ವಿವಿಧ, ಹೊಸ ಹೊಸ ಅವಕಾಶಗಳ ಕುರಿತು ಮಾಹಿತಿ ಮತ್ತು ಅರಿವು ಮೂಡಿಸಲು ಸಹಕಾರಿಯಾಗಿದೆ. ಉದ್ಯಮಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇಂತಹ ಕಾರ್ಯಕ್ರಮಗಳಸಲ್ಲಿ ಪಾಲ್ಗೊಂಡು ಸದುಪಯೋಗ ಪಡೆಯಬೇಕು. ವೇದಿಕೆ ಕಾರ್ಯಕ್ರಮದ ನಂತರ ಝಡ್.ಇ.ಡಿ. ಹಾಗೂ ರಫ್ತು ಕುರಿತು ಹೆಚ್ಚಿನ ಮಾಹಿತಿ ನೀಡಲಾಗುವುದು. ಈ ವಿಷಯದ ಕುರಿತು ಸಂದೇಹಗಳಿದ್ದರೆ ಕೇಳಿ ತಿಳಿದುಕೊಳ್ಳಬಹುದು ಎಂದರು.

ಜಿಲ್ಲಾ ಕೈಗಾರಿಕಾ ಸಂಘದ ಅಧ್ಯಕ್ಷರಾದ ಜೋಯಿಸ್ ರಾಮಾಚಾರ್ ಮಾತನಾಡಿ, ಪ್ರತಿ ಜಿಲ್ಲೆಯಲ್ಲಿ ಈ ಕಾರ್ಯಕ್ರಮಗಳು ನಡೆಯುತ್ತಿದ್ದು ಯೋಜನೆಗಳ ಕುರಿತು ಅರಿವು ನೀಡುತ್ತಿದೆ. ಬ್ಯಾಂಕಿಂಗ್ ವಲಯದಿಂದ ಸಾಕಷ್ಟು ಪ್ರಯೋಜನಗಳಿವೆ. ಇದೆ. ಲೀನ್ ಯೋಜನೆಯಿಂದಾಗಿ ಉತ್ಪಾದನೆ ಪ್ರಕ್ರಿಯೆ ವೆಚ್ಚ ಕಡಿಮೆ ಆಗುತ್ತಿದೆ. ಕೈಗಾರಿಕ ಬೆಳೆಯಬೇಕೆಂದರೆ ದೇಶೀಯ ಮಾರುಕಟ್ಟೆ ಜೊತೆಗೆ ವಿದೇಶೀ ಮಾರುಕಟ್ಟೆಯನ್ನು ಪ್ರವೇಶಿಸಬೇಕು. ವಿವಿಧ ಯೋಜನೆಗಳು, ವಿದೇಶಿ ಮಾರುಕಟ್ಟೆ ಮತ್ತು ರಫ್ತು ಕುರಿತು ಈ ಕಾರ್ಯಕ್ರಮದಲ್ಲಿ ಸಾಕಷ್ಟು ಮಾಹಿತಿ ಮತ್ತು ಸಹಕಾರ ದೊರೆಯಲಿದೆ ಎಂದರು.

ವಿ.ಟಿ.ಪಿ.ಸಿ. ಧಾರವಾಡ ಶಾಖಾ ಕಛೇರಿಯ ಸಹಾಯಕ ನಿರ್ದೇಶಕ ಟಿ. ಎಸ್. ಮಲ್ಲಿಕಾರ್ಜುನ ಮಾತನಾಡಿ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ ಸರ್ಕಾರದ ಅಂಗ ಸಂಸ್ಥೆಯಾಗಿದ್ದು ರಫ್ತು ನೋಡಲ್ ಏಜೆನ್ಸಿಯಾಗಿದೆ. ರಫ್ತಿಗೆ ಉತ್ತೇಜನ ನೀಡಲಿದೆ. 2024–25 ನೇ ಸಾಲಿನಲ್ಲಿ ನಮ್ಮ ರಾಜ್ಯ ಶೇ.40 ರಷ್ಟು ಐಟಿ ಸರ್ವಿಸ್ ರಫ್ತು ಮಾಡಿದೆ. ಇತರೆ ರಫ್ತಿನಲ್ಲಿ 4 ನೇ ಸ್ಥಾನದಲ್ಲಿದ್ದು ಎರಡನೇ ಸ್ಥಾನಕ್ಕೆ ಬರಲು ಪ್ರಯತ್ನ ಮಾಡಲಾಗುತ್ತಿದೆ. ಕಳೆದ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಿಂದ ರೂ. 443.7 ಕೋಟಿ ಮೊತ್ತದ ಸರಕು ರಫ್ತು ಮಾಡಲಾಗಿದೆ.

ವಿಟಿಪಿಸಿ ಯು ರಫ್ತುದಾರರಿಗೆ ಮಾರುಕಟ್ಟೆ ಅವಕಾಶ ನೀಡುತ್ತದೆ. ಮಾರುಕಟ್ಟೆ ಅಭಿವೃದ್ಧಿ ಸಹಾಯ ಯೋಜನೆಯಡಿ ಸಹಕರಿಸುತ್ತದೆ. ವಿದೇಶಗಳಲ್ಲಿ ನಡೆಯುವ ಟ್ರೇಡ್ ಫೇರ್‌ಗಳಲ್ಲಿ ಭಾಗವಹಿಸಲು ಸಹಾಯ ಮಾಡುತ್ತದೆ ಎಂದು ತಿಳಿಸಿದರು.

ಸಿಡ್ಬಿ ಪ್ರಾದೇಶಿಕ ಕಚೇರಿಯ ಪ್ರಧಾನ ವ್ಯವಸ್ಥಾಪಕ ಎಸ್.ಶ್ರೀಪತಿ, ಕಾಸಿಯಾ ಗೌರವ ಪ್ರಧಾನ ಕಾರ್ಯದರ್ಶಿ ಎಸ್. ಎಂ. ಹುಸೇನ್, ಗ್ರಾಮೀಣ ಜಂಟಿ ಕಾರ್ಯದರ್ಶಿ ಕೇಶವ ಮೂರ್ತಿ ಆರ್ (ಕಿರಣ್), ನಗರ ಜಂಟಿ ಕಾರ್ಯದರ್ಶಿ ಎಸ್. ವಿಶ್ವೇಶ್ವರಯ್ಯ ಇತರೆ ಉದ್ಯಮಿಗಳು ಹಾಜರಿದ್ದರು. ಕಾಸಿಯಾ ಉಪಾಧ್ಯಕ್ಷರು ನಿಂಗಣ್ಣ ಎಸ್. ಬಿರಾದರ ಸ್ವಾಗತಿಸಿದರು.


**ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ.ನ್ಯಾಯಾಲಯ, ಜಗಳೂರು**

**ಸಿ.ಆರ್ ಎಲ್.ಮಿಸ್ ನಂ:676/2025**

**ಅರ್ಜಿದಾರರು**:1) ಶ್ರೀ ಎಸ್. ಚಂದ್ರನಾಯ್ಕ, ಬಿನ್ ಸಂಗಡನಾಯ್ಕ, ವಯಸ್ಸು 55 ವರ್ಷ, ಜಿರಾಯ್ತಿ, ಮಹಾರಾಜನಹಟ್ಟಿ ಗ್ರಾಮ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

**ವಿರುದ್ಧ**

**ಎದುರುದಾರರು:** ತಹಶೀಲ್ದಾರ್‌ರವರು, ತಾಲ್ಲೂಕು ಕಛೇರಿ, ಜಗಳೂರು

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣದಲ್ಲಿ ಅರ್ಜಿದಾರರ ತಾಯಿಯವರಾದ ಶ್ರೀಮತಿ ಸಾಲಿಬಾಯಿ ಕೋಂ ಸಂಗಡನಾಯ್ಕ, ಇವರು ದಿನಾಂಕ :08–05–2021 ರಂದು ಜಗಳೂರು ತಾಲ್ಲೂಕು, ಮಹಾರಾಜನಹಟ್ಟಿ ಗ್ರಾಮದಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ 03 – 10 –2025 ರಂದು ಬೆಳಿಗ್ಗೆ 11–00 ಗಂಟೆಗೆ ವಿಚಾರಣೆಗಾಗಿ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರದಾದರೂ ತಕರಾರು ಇದ್ದಲ್ಲಿ ತಾವಾಗಲೀ, ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ 29–8–2025 ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/–**
**ಅರ್ಜಿದಾರರ ಪರ ವಕೀಲರು**
**ಎಸ್.ಐ ಕುಂಬಾರ**

**ಸಹಿ/–**
**ಶಿರಸ್ತೇದಾರರು**
ಸಿವಿಲ್ ಹಾಗೂ ಜೆ.ಎಂ.ಎಫ್.ಸಿ. ನ್ಯಾಯಾಲಯ ಜಗಳೂರು

## ಜಿಲ್ಲೆಯಲ್ಲಿ 3 ಆಹಾರ ಸಂಸ್ಕರಣಾ ಘಟಕಗಳಿಗೆ ಸಾಲ ಮಂಜೂರು

# ಪಿ.ಎಂ.ಎಫ್.ಎಂ.ಇ ಅಡಿ ರೈತರಿಗೆ ಉತ್ತೇಜನ ನೀಡಲು ಬಿ.ಟಿ.ಕುಮಾರಸ್ವಾಮಿ ಸೂಚನೆ

**ಚಿತ್ರದುರ್ಗ:** ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (ಪಿ.ಎಂ.ಎಫ್.ಎಂ.ಇ) ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಕೇವಲ 3 ಆಹಾರ ಸಂಸ್ಕರಣಾ ಘಟಕಗಳಿಗೆ ಮಾತ್ರ ಬ್ಯಾಂಕ್‌ನಿಂದ ಸಾಲ ಮಂಜೂರು ಮಾಡಲಾಗಿದೆ. ಯೋಜನೆ ಪ್ರಗತಿಯಲ್ಲಿ ಜಿಲ್ಲೆ 20ನೇ ಸ್ಥಾನದಲ್ಲಿದೆ. ಬ್ಯಾಂಕುಗಳು ರೈತರಿಗೆ ಸಾಲ ಮಂಜೂರು ಮಾಡಲು ಹಿಂದೇಟು ಹಾಕದೇ ಉತ್ತೇಜನ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚಿಸಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಪಿ.ಎಂ.ಎಫ್.ಎಂ.ಇ ಹಾಗೂ ಪಿ.ಎಂ.ಆರ್.ಕೆ.ವಿ.ವೈ ಯೋಜನೆಗಳ ಕುರಿತು ಜಿಲ್ಲಾ ಮಟ್ಟದ ಸಮತಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2025–26ನೇ ಸಾಲಿನಲ್ಲಿ ಪಿ.ಎಂ.ಎಫ್.ಎಂ.ಇ ಯೋಜನಯಡಿ ಜಿಲ್ಲೆಗೆ 100 ಘಟಕಗಳ ಗುರಿ ನಿಗದಿ ಮಾಡಲಾಗಿದೆ. ಆದರೆ 54 ಅರ್ಜಿಗಳು ಮಾತ್ರ ಸ್ವೀಕೃತವಾಗಿವೆ. 54 ಅರ್ಜಿಗಳ ಪೈಕಿ 24 ಅರ್ಜಿಗಳನ್ನು ಸಾಲ ಮಂಜೂರಾತಿಗೆ ಬ್ಯಾಂಕ್‌ಗೆ ಕಳುಹಿಸಿಕೊಡಲಾಗಿದೆ. ಇದರಲ್ಲಿ ಕೇವಲ 06 ಅರ್ಜಿಗಳಿಗೆ ಸಾಲ ನೀಡಲು ಅನುಮೋದನೆ ನೀಡಲಾಗಿದೆ. 03 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 04 ಅರ್ಜಿಗಳು ಪ್ರಗತಿಯಲ್ಲಿದ್ದು, 3 ಅರ್ಜಿದಾರರಿಗೆ ಸಾಲ ಮಂಜೂರಾತಿಯಾಗಿದೆ. ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ರೈತರ ಸಂಖ್ಯೆ ಹೆಚ್ಚಿದೆ. ರೈತರು ಬ್ಯಾಂಕುಗಳು ನೀಡುವ ಸಾಲ ಮೊತ್ತಕ್ಕಿಂತಲೂ ಹೆಚ್ಚಿನ ಮೌಲ್ಯದ ಜಮೀನುಗಳನ್ನು ಬ್ಯಾಂಕ್‌ಗೆ ಅಡಮಾನ ಇಡುತ್ತಾರೆ. ಆದರೂ ಬ್ಯಾಂಕುಗಳು ಸಾಲ ನೀಡಲು ನಿರಾಕರಿಸುವುದು ಏಕೆ ಎಂದು ಬ್ಯಾಂಕ್‌ಗಳ ನಡೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಅರ್ಜಿಯೊಂದಿಗೆ ಸಲ್ಲಿಸಿದ ಎಲ್ಲ ದಾಖಲೆಗಳು ಸೂಕ್ತವಾಗಿದ್ದರೇ, ಕೂಡಲೇ ಸಾಲ ಮಂಜೂರಾತಿ ಮಾಡಬೇಕು. ಈ ಕುರಿತು ಎಲ್ಲಾ ಬ್ಯಾಂಕುಗಳ ವ್ಯವಸ್ಥಾಪಕರಿಗೆ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನಿಂದ ನಿರ್ದೇಶನ ನೀಡುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಹೇಳಿದರು.

2021–22 ರಿಂದ 28–08–2025 ವರೆಗೆ ಜಿಲ್ಲೆಯಲ್ಲಿ ಪಿ.ಎಂ.ಎಫ್.ಎಂ.ಇ ಯೋಜನೆಯಡಿ 622 ಅರ್ಜಿಗಳು ಸಲ್ಲಿಕೆಯಾಗಿದ್ದು, 103 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 139 ಅರ್ಜಿಗಳಿಗೆ ಸಾಲ ಮಂಜೂರಾತಿ ಅನುಮೋದನೆ ನೀಡಿದ್ದು, 120 ಜನರಿಗೆ ಸಾಲ ವಿತರಿಸಲಾಗಿದೆ. 36 ಅರ್ಜಿಗಳು ಮಂಜೂರಾತಿ ಪ್ರಗತಿಯಲ್ಲಿದೆ. ಎಸ್.ಬಿ.ಐ ಬ್ಯಾಂಕ್‌ನಲ್ಲಿ 12, ಕೆನರಾ ಬ್ಯಾಂಕ್‌ನಲ್ಲಿ 10, ಕರ್ನಾಟಕ ಗ್ರಾಮೀಣ ಬ್ಯಾಂಕ್‌ನಲ್ಲಿ 7, ಬ್ಯಾಂಕ್ ಆಫ್ ಬರೋಡ, ಕರ್ನಾಟಕ ಬ್ಯಾಂಕ್ ಹಾಗೂ ಯೂನಿಯನ್ ಬ್ಯಾಂಕ್‌ನಲ್ಲಿ ತಲಾ 2, ಸೆಂಟ್ರಲ್ ಬ್ಯಾಂಕ್, ಇಂಡಿಯಾ ಬ್ಯಾಂಕ್ ಹಾಗೂ ಬ್ಯಾಂಕ್ ಆಫ್ ಇಂಡಿಯಾದಲ್ಲಿ ತಲಾ 1 ಅರ್ಜಿಗಳು ಬಾಕಿಯಿವೆ. ಈ ಕುರಿತು ಪರಿಶೀಲನೆ ನಡೆಸಲು ಈ ಎಲ್ಲಾ ಬ್ಯಾಂಕುಗಳ ವ್ಯವಸ್ಥಾಪಕರೊಂದಿಗೆ ಸಭೆ ಆಯೋಜಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ಸೂಚಿಸಿದರು.

ಪ್ರಧಾನ ಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ–ಪರ್ ಡ್ರಾಪ್ ಮೋರ್ ಕ್ರಾಪ್–ಸೂಕ್ಷ್ಮ ನೀರಾವರಿ ಯೋಜನೆಯಡಿ ಸೂಕ್ಷ್ಮ, ತುಂತುರು ಹಾಗೂ ಹನಿ ನೀರಾವರಿ ಘಟಕಗಳಿಗೆ ರೂ.6.18 ಕೋಟಿಗಳ ಕ್ರಿಯಾ ಯೋಜನೆ ತಯಾರಿಸಲಾಗಿದೆ. ಮಾರ್ಗ ಸೂಚಿಯಂತೆ ಸೂಕ್ಷ ನೀರಾವರಿ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ 2 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು, ಹನಿ ನೀರಾವರಿ ಘಟಕಗಳಿಗೆ ಸಣ್ಣ, ಅತಿ ಸಣ್ಣ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ರೈತರಿಗೆ 2 ಹೆಕ್ಟೇರ್ ವರೆಗೆ ಶೇ.90 ರಷ್ಟು ಹಾಗೂ ಇತರೆ ವರ್ಗದವರಿಗೆ ಶೇ.45 ರಷ್ಟು ಸಹಾಯಧನವನ್ನು ನೀಡಲಾಗುವುದು ಎಂದು ಕೃಷಿ ಜಂಟಿನಿರ್ದೇಶಕ ಮಂಜುನಾಥ ಸಭೆಯಲ್ಲಿ ತಿಳಿಸಿದರು.

## ನಶಾ ಮುಕ್ತ ಭಾರತ ಅಭಿಯಾನ

# ಮಾದಕ ವಸ್ತು ವಿರುದ್ಧ ಜಾಗೃತಿಗೆ ಚಿತ್ರದುರ್ಗದಲ್ಲಿ ಬೈಕ್ ಜಾಥಾ

**ಚಿತ್ರದುರ್ಗ :** ನಶಾ ಮುಕ್ತ ಭಾರತ ಅಭಿಯಾನದಡಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲು ಬಂಡೀಪುರದಿಂದ ಬೀದರ್‌ವರೆಗೆ ಹಮ್ಮಿಕೊಂಡಿರುವ ಬೈಕ್ ಜಾಥಾವು ಶನಿವಾರ ತುಮಕೂರು ಮಾರ್ಗದಿಂದ ಚಿತ್ರದುರ್ಗ ನಗರಕ್ಕೆ ಆಗಮಿಸಿತು.



ನಶಾ ಮುಕ್ತ ಭಾರತ ಅಭಿಯಾನ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಚಿತ್ರದುರ್ಗ ನಗರದ ತುರುವನೂರು ರಸ್ತೆಯಲ್ಲಿರುವ ಪಿವಿಎಸ್ ಕಾಲೇಜು ಆವರಣದಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸಲಾಯಿತು.

ಈ ವೇಳೆ ಮಾತನಾಡಿದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ಮಾತನಾಡಿ, ಮದ್ಯಪಾನ ಮತ್ತು ಮಾದಕ ವಸ್ತುಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರೇರಣೆ ನೀಡುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ವತಿಯಿಂದ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ಆ.29 ರಿಂದ 31 ರವರೆಗೆ ಬಂಡೀಪುರದಿಂದ ಬೀದರ್‌ವರೆಗೆ ಮೂರು ದಿನಗಳ ಕಾಲ 1 ಸಾವಿರ ಕಿ.ಮೀ ಬೈಕ್ ಜಾಥಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅರಣ್ಯ ಇಲಾಖೆ, ಪೊಲೀಸ್ ರಾಷ್ಟ್ರೀಯ ಸೇವಾ ಯೋಜನೆ ಮತ್ತು ಎನ್.ಸಿ.ಸಿ ಸಹಯೋಗದೊಂದಿಗೆ ಜಾಥಾ ನಡೆಸಲಾಗುತ್ತಿದ್ದು, 20ಕ್ಕೂ ಹೆಚ್ಚು ಬೈಕ್ ಸವಾರರು ಭಾಗವಹಿಸಿದ್ದು, ಈ ಜಾಥಾ ಕಾರ್ಯಕ್ರಮವು ಮಾರ್ಗದುದ್ದಕ್ಕೂ ರಾಜ್ಯದ ಪ್ರಮುಖ ಜಿಲ್ಲೆಗಳ ಮೂಲಕ ಸಾಗುತ್ತಾ ಶಾಲೆಗಳು, ಕಾಲೇಜುಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಹೇಳಿದರು.

2020ರ ಮಿಸ್ಸಸ್ ಇಂಡಿಯಾ ವಿಜೇತೆ ರೇಣುಕಾ ಮಾತನಾಡಿ, ಯುವಕರು ದುಶ್ಚಟದಿಂದ ದೂರವಿರಬೇಕು ಹಾಗೂ ವ್ಯಾಯಾಮ ಹಾಗೂ ನಡಿಗೆಯಂತಹ ಅಭ್ಯಾಸ ರೂಡಿಸಿಕೊಳ್ಳಬೇಕು ಹಾಗೂ ನೆರೆಹೊರೆಯಲ್ಲಿ ಯಾರಾದರೂ ದುಶ್ಚಟಕ್ಕೆ ಒಳಗಾಗಿದ್ದರೆ ಪೋಲಿಸ್ ಇಲಾಖೆಯ ಗಮನಕ್ಕೆ ತರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್, ಎನ್‌ಎಸ್‌ಎಸ್ ರಾಜ್ಯ ಸಮಾಲೋಚಕ ಪ್ರತಾಪ್ ಲಿಂಗಯ್ಯ, ಪಿವಿಎಸ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ಡಾ.ಪಿ.ವಿ.ಶ್ರೀಧರ್ ಮೂರ್ತಿ ಸೇರಿದಂತೆ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು ಇದ್ದರು.

# ಸೆಪ್ಟೆಂಬರ್‌ನಲ್ಲಿ ಮಣಿಪುರಕ್ಕೆ ಪ್ರಧಾನಿ ಮೋದಿ ಭೇಟಿ ಸಾಧ್ಯತೆ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಸೆಪ್ಟೆಂಬರ್ ಎರಡನೇ ವಾರದಲ್ಲಿ ಮಣಿಪುರಕ್ಕೆ ಭೇಟಿ ನೀಡುವ ಸಾಧ್ಯತೆಯಿದೆ.

ಎರಡು ವರ್ಷಗಳ ಹಿಂದೆ ರಾಜ್ಯದಲ್ಲಿ ಜನಾಂಗೀಯ ಹಿಂಸಾಚಾರ ಭುಗಿಲೆದ್ದ ನಂತರ ಇದೇ ಮೊದಲ ಬಾರಿಗೆ ಭೇಟಿ ನೀಡಲಿದ್ದಾರೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಮೇ 2023 ರಲ್ಲಿ ಅಶಾಂತಿ ಭುಗಿಲೆದ್ದ ನಂತರ ಪ್ರಧಾನಿಯವರು ಮಣಿಪುರಕ್ಕೆ ಭೇಟಿ ನೀಡಿಲ್ಲವಾದ್ದರಿಂದ, ಆ ಭೇಟಿಯು ಪ್ರಮುಖ ರಾಜಕೀಯ ಮತ್ತು ಸಾಂಕೇತಿಕ ಮಹತ್ವವನ್ನು ಹೊಂದಿದೆ. ಮೋದಿ, ಹಿಂಸಾಚಾರ ಪೀಡಿತ ರಾಜ್ಯದ ಇಂಫಾಲ್ ಮತ್ತು ಚುರಚಂದ್‌ಪುರ ಜಿಲ್ಲೆಗಳಿಗೆ ಭೇಟಿ ನೀಡುವ ಸಾಧ್ಯತೆಯಿದೆ. ಅಲ್ಲಿ ಜನಾಂಗೀಯ ಸಂಘರ್ಷದಿಂದಾಗಿ ತಮ್ಮ ಮನೆಗಳಿಂದ ಸ್ಥಳಾಂತರಗೊಂಡ ಜನರನ್ನು ಭೇಟಿ ಮಾಡುವ ನಿರೀಕ್ಷೆಯಿದೆ. ಅವರ ಭೇಟಿಯ ಸಮಯದಲ್ಲಿ, ಅವರು ಈ ಪ್ರದೇಶಕ್ಕೆ ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಘೋಷಿಸುವ ಮತ್ತು ಕೆಲವು ಯೋಜನೆಗಳನ್ನು ಉದ್ಘಾಟಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಮಣಿಪುರ ಪ್ರವಾಸ ದೃಢಪಟ್ಟರೆ, ಪ್ರಧಾನಿಯವರ ಭೇಟಿ ಸುಮಾರು ನಾಲ್ಕು ಗಂಟೆಗಳ ಕಾಲ ನಡೆಯುವ ನಿರೀಕ್ಷೆಯಿದೆ ಎಂದು ಮೂಲಗಳು ತಿಳಿಸಿವೆ. ಅವರು ಮೈತ್ಯೆ ಮತ್ತು ಕುಕಿ ಪ್ರಾಬಲ್ಯವಿರುವ ಎರಡೂ ಪ್ರದೇಶಗಳಿಗೆ ಪ್ರವಾಸ ಮಾಡುವ ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸುವ ಸಾಧ್ಯತೆಯಿದೆ. ಫೆಬ್ರುವರಿ 13ರಂದು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿತ್ತು.

# ಗ್ರಾ.ಪಂ. ಸದಸ್ಯರಿಂದ 210 ಮನೆಗಳ ಅಕ್ಕ–ತಂಗಿಯರಿಗೆ ಬಾಗಿನ

**ಚಿಕ್ಕಮಗಳೂರು:** ಗೌರಿ–ಗಣೇಶ ಹಬ್ಬದ ಅಂಗವಾಗಿ ಬೊಗಸೆ ಗ್ರಾಮದ ಸುತ್ತಮುತ್ತಲಿನ ಸುಮಾರು 210 ಮನೆಗಳ ಅಕ್ಕ–ತಂಗಿಯರಿಗೆ ಅರಿಶಿನ–ಕುಂಕುಮ, ಕಾಯಿ, ಬಳೆ ಹಾಗೂ ಪೂಜಾ ಸಾಮಾಗ್ರಿಗಳ ಬಾಗಿನವನ್ನು ನೀಡಿದ ಕಡವಂತಿ ಗ್ರಾ.ಪಂ. ಸದಸ್ಯ ವಿನೋದ್ ಬೊಗಸೆ ಗೌರಿಹಬ್ಬವನ್ನು ವಿಶೇಷವಾಗಿ ಆಚರಿಸಿದರು.



ಬಳಿಕ ಮಾತನಾಡಿದ ವಿನೋದ್ ಧರ್ಮ ರಕ್ಷಣೆಗಾಗಿ, ಹಿಂದುತ್ವಕ್ಕಾಗಿ, ಭಾರತೀಯ ಸಂಸ್ಕೃತಿ ಉಳಿವಿಕೆಗಾಗಿ, ಸಹೋದರ ಸಹೋದರಿಯರ ಸಂಬಂಧಕ್ಕಾಗಿ, ಹಾಗೂ ಸ್ನೇಹ ಸ್ನೇಹಿತರ ಬಂದುಗಳ ನಂಬಿಕೆಯ ಆತ್ಮವಿಶ್ವಾಸಕ್ಕಾಗಿ ವರ್ಷದ ಮೊದಲ ಹಬ್ಬವಾಗಿ ಬಂದ ಗೌರಿ ಹಬ್ಬವು ಭಾರತದ ಸಂಸ್ಕೃತಿಯ ಪ್ರತೀಕವಾಗಿದೆ ಎಂದರು.

ಈ ಹಬ್ಬದದಲ್ಲಿ ಸಂಬಂಧ ಬೆಸೆಯುವ, ಉಳಿಸುವ ಪ್ರತೀಕವಾಗಿ ಬಾಗಿನ ಕೊಟ್ಟು ಸಂಬಂಧವನ್ನು ಈ ಹಬ್ಬದಲ್ಲಿ ಗಟ್ಟಿಗೊಳಿಸುತ್ತದೆ. ಈ ಉದ್ದೇಶಕ್ಕಾಗಿ ಪಂಚಾಯಿತಿ ಮತಕ್ಷೇತ್ರದ ಪ್ರತಿಯೊಬ್ಬ ಮನೆಗೂ ಅರಿಶಿನ ಕುಂಕುಮ ಬಳೆಯನ್ನು ಅಕ್ಕತಂಗಿಯರಿಗೆ ಕೊಡಲಾಗುತ್ತಿದೆ ಎಂದು ತಿಳಿಸಿದರು.

ಗಣೇಶ ಚತುರ್ಥಿ ಹಬ್ಬವು ಶಿವ ಪಾರ್ವತಿ ಸುತನಾದ ಗಣೇಶನನ್ನು ಭೂಮಿಗೆ ಆಹ್ವಾನಿಸುವ ದಿನವಾಗಿದೆ. ಈ ಹಬ್ಬದ ಸಮಯದಲ್ಲಿ 10 ದಿನಗಳ ಕಾಲ ಗಣೇಶನು ಭೂಮಿಯ ಮೇಲೆ ನೆಲೆಸುತ್ತಾನೆ ಎನ್ನುವ ನಂಬಿಕೆಯಿದೆ. ಗೌರಿ ಗಣೇಶ ಹಬ್ಬದ ದಿನದಂದು ನಾವು ನಮ್ಮ ಪ್ರೀತಿ ಪಾತ್ರರೊಂದಿಗೆ, ಸ್ನೇಹಿತರೊಂದಿಗೆ ಅಥವಾ ಕುಟುಂಬದ ಸದಸ್ಯರೊಂದಿಗೆ ಶುಭಾಶಯಗಳನ್ನು ಹಂಚಿಕೊಳ್ಳುವ ಮೂಲಕ ವಿನೂತನವಾಗಿ ಗೌರಿ ಗಣೇಶ ಹಬ್ಬವನ್ನು ಆಚರಿಸಲಾಗುವುದು ಎಂದರು.

ನಮ್ಮ ಸನಾತನ ಧರ್ಮವನ್ನು ಹಾಳುಮಾಡಲು ಹೊರಟಿರುವವರ ಆಧರ್ಮಿಯರ ವಿರುದ್ಧ ಹೋರಾಡಿ ಧರ್ಮ ರಕ್ಷಣೆಗಾಗಿ ಹೋರಾಡಬೇಕು, ಹಿಂದೂ ಧರ್ಮವನ್ನು ಉಳಿಸುವ ನಿಟ್ಟಿನಲ್ಲಿ ನಾವುಗಳು ನಮ್ಮ ಬದುಕನ್ನು ಸಾರ್ಥಕಗೊಳಿಸಬೇಕು. ಧರ್ಮಸ್ಥಳವನ್ನು ಹಾಗೂ ಯಾವುದೇ ದೇವಸ್ಥಾನಗಳನ್ನು ಮುಳುಗಿಸಲು ಒಳಸಂಚು ರೂಪಿಸುವವರ ವಿರುದ್ಧ ಪ್ರತಿಯೊಬ್ಬರು ನಿಲ್ಲಬೇಕು ಎಂದರು. ಇದೇ ಗ್ರಾಮಸ್ಥರು, ಕುಟುಂಬಸ್ಥರು ಹಾಜರಿದ್ದರು.

## ಉಕ್ರೇನ್‌ಗೆ ಡೀಸೆಲ್ ಪೂರೈಕೆಯಲ್ಲಿ ಭಾರತ ನಂ.1

**ಹೊಸದಿಲ್ಲಿ:** ಯುದ್ಧ ಪೀಡಿತ ಉಕ್ರೇನ್‌ಗೆ ಭಾರತ ದೊಡ್ಡ ಪ್ರಮಾಣದಲ್ಲಿ ಡೀಸೆಲ್ ಪೂರೈಸುತ್ತಿದ್ದು, ಕಳೆದ ಜುಲೈನಲ್ಲಿ 83,000 ಟನ್ ಡೀಸೆಲ್ ಸರಬರಾಜು ಮಾಡಿದೆ.

ಭಾರತ ಆಮದು ಮಾಡಿಕೊಳ್ಳುತ್ತಿರುವ ಕಚ್ಚಾ ತೈಲವನ್ನು ಸಂಸ್ಕರಿಸಿ ದಿನಕ್ಕೆ ಸರಾಸರಿ 2,700 ಟನ್ ರಫ್ತು ಮಾಡುತ್ತಿದೆ. ಉಕ್ರೇನ್ ರಾಜಧಾನಿ ಕೀವ್‌ಗೆ ಬರುವ ಮಾಸಿಕ ಡೀಸೆಲ್‌ನಲ್ಲಿ ಶೇ. 15.5ರಷ್ಟು ಭಾರತದ ಪೂರೈಕೆಯೇ ಆಗಿದೆ.

ಕಳೆದ ವರ್ಷ ಜುಲೈನಲ್ಲಿ ರಫ್ತು ಪ್ರಮಾಣ ಶೇ. 1.9ರಷ್ಟಿತ್ತು. ಈ ಮಾಹಿತಿಯನ್ನು ಕೀವ್ ಮೂಲದ ತೈಲ ಮಾರುಕಟ್ಟೆ ವಿಶ್ಲೇಷಣಾ ಸಂಸ್ಥೆ ನಾಫ್ಟೊ ರೈನೋಕ್ ಹೊರಗೆಡವಿದೆ

**ಅಮೆರಿಕ –ಭಾರತ ಉದ್ವಿಗ್ನತೆಯಲ್ಲಿರುವ ವ್ಯಂಗ್ಯ!**

ರಾಜಕೀಯವಾಗಿ ತುಂಬ ಕ್ಷೋಭೆಗಳಿರುವ ಕಾಲಘಟ್ಟದಲ್ಲಿ ಈ ಸಂಗತಿ ಅನಾವರಣಗೊಂಡಿದೆ. ಇತ್ತೀಚೆಗೆ ಅಮೆರಿಕ, ಭಾರತದ ಮೇಲೆ ಶೇ. 25ರಷ್ಟು ಪ್ರತಿಸುಂಕವನ್ನು ವಿಧಿಸಿತು. ರಷ್ಯಾದಿಂದ ತೈಲವನ್ನು ಖರೀದಿಸಿ, ಉಕ್ರೇನ್ ಸಮರಕ್ಕೆ ಹಣಕಾಸು ನೆರವು ನೀಡುತ್ತಿದೆ. ರಷ್ಯಾದಿಂದ ಕಚ್ಚಾ ತೈಲ ಆಮದನ್ನು ತಕ್ಷಣ ನಿಲ್ಲಿಸಬೇಕು. ಇಲ್ಲಿದ್ದರೆ ಶೇ. 25 ಹೆಚ್ಚುವರಿ ಪ್ರತಿಸುಂಕವನ್ನು ದಂಡದ ರೂಪದಲ್ಲಿ ಪಾವತಿಸಿ ಎಂದು ಗುಡುಗಿತು.

# ನೋ ಪಾರ್ಕಿಂಗ್‌ನಲ್ಲಿ ಪೊಲೀಸ್ ಜೀಪ್: ದಂಡ ಕಟ್ಟಿದ ಪೊಲೀಸ್

**ಚಿಕ್ಕಮಗಳೂರು:** ಸಾರ್ವಜನಿಕರಿಗೆ ಮಾತ್ರವಲ್ಲ, ಕಾನೂನು ಪಾಲಕರಿಗೂ



ಕಾನೂನು ಒಂದೇ ಎಂದು ಸಾಬೀತುಪಡಿಸಿದ ಘಟನೆಯೊಂದು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ಪಟ್ಟಣದಲ್ಲಿ ನಡೆದಿದೆ.

ಇಲ್ಲಿನ ಪೊಲೀಸ್ ಅಧಿಕಾರಿಗಳು ನೋ ಪಾರ್ಕಿಂಗ್ ವಲಯದಲ್ಲಿ ನಿಲ್ಲಿಸಿದ್ದ ತಮ್ಮ ಹಿರಿಯ ಅಧಿಕಾರಿಯ ವಾಹನಕ್ಕೆ ದಂಡ ವಿಧಿಸಿ, ಸ್ಥಳೀಯರಿಂದ ಮೆಚ್ಚುಗೆ ಗಳಿಸಿದ್ದಾರೆ.

**ಘಟನೆ ವಿವರಣೆ:** ಎನ್.ಆರ್. ಪುರ ತಾಲೂಕಿನ ಪೊಲೀಸ್ ಇನ್ಸ್‌ಪೆಕ್ಟರ್ (ಸಿಪಿಐ) ಅವರ ಜೀಪ್ ಕೊಪ್ಪ ಪಟ್ಟಣದ ನೋ ಪಾರ್ಕಿಂಗ್ ಪ್ರದೇಶದಲ್ಲಿ ನಿಲ್ಲಿಸಲಾಗಿತ್ತು. ಕರ್ತವ್ಯ ನಿರತರಾಗಿದ್ದ ಕೊಪ್ಪ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ (ಪಿಎಸ್‌ಐ) ಬಸವರಾಜ್ ಅವರು ಈ ಜೀಪನ್ನು ಗಮನಿಸಿ, ತಕ್ಷಣವೇ ಅದನ್ನು ಲಾಕ್ ಮಾಡಿಸಿದ್ದಾರೆ. ನಿಯಮಗಳ ಪ್ರಕಾರ, ವಾಹನ ನಿಲ್ಲಿಸಬಾರದ ಜಾಗದಲ್ಲಿ ನಿಲ್ಲಿಸಿದ ಕಾರಣ ಜೀಪ್‌ಗೆ ರೂ. 500 ದಂಡ ವಿಧಿಸಲಾಗಿದೆ.

ನಂತರ, ಚಾಲಕ ರೂ. 500 ದಂಡವನ್ನು ಕಟ್ಟಿ ಜೀಪನ್ನು ಬಿಡಿಸಿಕೊಂಡು ಹೋಗಿದ್ದಾರೆ. ಈ ಘಟನೆ ಸ್ಥಳೀಯರ ಗಮನ ಸೆಳೆದಿದ್ದು, ಪಿಎಸ್‌ಐ ಬಸವರಾಜ್ ಅವರ ನಿಷ್ಪಕ್ಷಪಾತ ಕಾರ್ಯಕ್ಕೆ ಭಾರೀ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಯಾವುದೇ ಪ್ರಭಾವಕ್ಕೆ ಒಳಗಾಗದೆ, ತಮ್ಮ ಹಿರಿಯ ಅಧಿಕಾರಿಯ ವಾಹನಕ್ಕೂ ದಂಡ ವಿಧಿಸಿದ ಪಿಎಸ್‌ಐ ಕಾರ್ಯ ಕಾನೂನು ಎಲ್ಲರಿಗೂ ಒಂದೇ ಎಂಬ ಸಂದೇಶವನ್ನು ರವಾನಿಸಿದೆ. ಇಂತಹ ಪ್ರಾಮಾಣಿಕ ಮತ್ತು ನಿಷ್ಪಕ್ಷಪಾತ ಕಾರ್ಯಗಳು ಸಾರ್ವಜನಿಕರಲ್ಲಿ ಪೊಲೀಸರ ಬಗ್ಗೆ ವಿಶ್ವಾಸ ಹೆಚ್ಚಿಸಲು ಸಹಾಯ ಮಾಡುತ್ತವೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ. ಈ ಘಟನೆ ಈಗ ಸಾಮಾಜಿಕ ಜಾಲತಾಣಗಳಲ್ಲಿಯೂ ವೈರಲ್ ಆಗಿದ್ದು, ಪಿಎಸ್‌ಐ ಬಸವರಾಜ್ ಅವರ ಕಾರ್ಯವೈಖರಿಗೆ ಸಾರ್ವಜನಿಕರು ಶ್ಲಾಘನೆ ವ್ಯಕ್ತಪಡಿಸುತ್ತಿದ್ದಾರೆ.

# ಡಿಜೆ ನಿರ್ಬಂಧಕ್ಕೆ ಬಿವೈವಿ ಆಕ್ರೋಶ

**ಬೆಂಗಳೂರು:** ಗಣೇಶೋತ್ಸವದಲ್ಲಿ ಡಿಜೆ ನಿರ್ಬಂಧಿಸಿರುವ ರಾಜ್ಯಸರ್ಕಾರದ ತೀರ್ಮಾನಕ್ಕೆ ಆಕ್ರೋಶ ವ್ಯಕ್ತಪಡಿಸಿರುವಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ರಾಜ್ಯಸರ್ಕಾರ ಸಾಂಸ್ಕೃತಿಕ ಚಟುವಟಿಕೆಗಳನ್ನು ಹತ್ತಿಕ್ಕುತ್ತಿದೆ ಎಂದು ದೂರಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್‌ಮಾಡಿರುವ ಅವರು, ರಾಜ್ಯದಲ್ಲಿ ಪೊಲೀಸ್ ವ್ಯವಸ್ಥೆ ಸಂಪೂರ್ಣ ದಿಕ್ಕು ತಪ್ಪುತ್ತಿದೆ. ಹಿಂದೂ ಉತ್ಸವಗಳು, ಧಾರ್ಮಿಕ ಆಚರಣೆಗಳನ್ನು ಅಪಮಾನಿಸುತ್ತಿರುವ ಪ್ರಕರಣಗಳು ಮೇಲಿನಿಂದ ಮೇಲೆ ವರದಿಯಾಗುತ್ತಿವೆ ಎಂದು ಅವರು ತಿಳಿಸಿದ್ದಾರೆ.

# ಕನ್ನಡ ಕಟ್ಟುವ ಕಾಯಕ ಪ್ರೀತಿ, ವಿಶ್ವಾಸದಿಂದ ಇರಲಿ : ರಾಜೇಗೌಡ

**ಚಿಕ್ಕಮಗಳೂರು:** ಕನ್ನಡ ಕಟ್ಟುವ ಕಾಯಕ ಪ್ರೀತಿ ಮತ್ತು ವಿಶ್ವಾಸದಿಂದ ಕೂಡಿರಬೇಕು. ಕಾನೂನು ಚೌಕಟ್ಟಿನಡಿ ಕನ್ನಡದ ಕಟ್ಟಾಳುಗಳು ಹೋರಾಡಿದರೆ ಮಾತ್ರ ಸಂಘಟನೆಗೆ ಗೌರವವಿದೆ ಎಂದು ಕನ್ನಡಸೇನೆ ಜಿಲ್ಲಾಧ್ಯಕ್ಷ ಪಿ.ಸಿ.ರಾಜೇಗೌಡ ಹೇಳಿದರು.



ನಗರದ ಕನ್ನಡಸೇನೆ ಕಚೇರಿಯಲ್ಲಿ ನೂತನ ನಗರ ಯುವ ಘಟಕ ಸ್ಥಾಪನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘಟನೆ ಹಾಗೂ ಕನ್ನಡಾಂಬೆಗೆ ಧಕ್ಕೆಯುಂಟಾಗದಂತೆ ಶ್ರದ್ದೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಕನ್ನಡ ನಾಡು, ನುಡಿ, ಸಂಸ್ಕೃತಿ ಹಾಗೂ ಸಂಪ್ರದಾಯಕ್ಕೆ ಧಕ್ಕೆಯಾದಲ್ಲಿ ಸಹಿಸಿಕೊಂಡು ಕೂರುವ ಸಂಘಟನೆ ನಮ್ಮದ್ದಲ್ಲ. ಆ ರೀತಿಯ ಹೋರಾಟಕ್ಕೆ ಕಾನೂನಾತ್ಮಕವಾಗಿ ನಿಲ್ಲುವುದು ಯುವಘಟಕದ ಕರ್ತವ್ಯವಾಗಬೇಕು. ಅಲ್ಲದೇ ಬಡವರು, ಶೋಷಿತರ ಧ್ವನಿಯಾಗಿ ನಗರದೆಲ್ಲೆಡೆ ಕೈಜೋಡಿಸುವ ಕಾರ್ಯ ನೂತನ ಪದಾಧಿಕಾರಿಗಳ ಜವಾಬ್ದಾರಿ ಎಂದು ತಿಳಿಸಿದರು.

ಜಿಲ್ಲೆಯ ಬಡವರ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವುದನ್ನು ಮನಗಂಡು ಕನ್ನಡಸೇನೆ ಎಲ್ಲರೊಂದಿಗೆ ಹೋರಾಟ ರೂಪಿಸಿದ ಕಾರಣವೇ ಅತ್ಯಾಧುನಿಕ ಮೆಡಿಕಲ್ ಕಾಲೇಜು ನಿರ್ಮಾಣವಾಗಿದೆ. ಜೊತೆಗೆ ಶೋಷಿತರು ಹಾಗೂ ದೌರ್ಜನ್ಯದಿಂದ ಬಳಲಿದವರ ಪರವಾಗಿ ನಿರಂತರವಾಗಿ ಸಂಘಟನೆ ಬೆನ್ನೆಲುಬಾಗಿ ನಿಲ್ಲಲಿದೆ ಎಂದರು.

ಕನ್ನಡಸೇನೆ ನಗರ ಯುವಘಟಕದ ನೂತನ ಅಧ್ಯಕ್ಷ ಸತೀಶ್ ಕಲ್ಲುದೊಡ್ಡಿ ಮಾತನಾಡಿ, ನಗರದಲ್ಲಿ ನಾಡಿನ ಭಾಷಾ ಪರಂಪರೆ, ಸೊಗಡಿನ ಪರಿಚಯ ಹಾಗೂ ನ್ಯಾಯದ ಪರವಾಗಿ ಹೋರಾಡುವುದೇ ಧ್ಯೇಯವಾಗಿದೆ. ಆ ನಿಟ್ಟಿನಲ್ಲಿ ಸರ್ವ ಪದಾಧಿಕಾರಿಗಳು ಒಟ್ಟಾಗಿ ಕೈಜೋಡಿಸಿದಾಗ ಮಾತ್ರ ಕನ್ನಡ ನಾಡಿನ ಕೀರ್ತಿ ಬೆಳಗಿಸಲು ಹಾಗೂ ಬಡವರಿಗೆ ಸ್ಪಂದಿಸಲು ಸಾಧ್ಯ ಎಂದರು.

ನಗರ ಯುವಘಟಕ ಪದಾಧಿಕಾರಿಗಳು: ಸತೀಶ್ ಕಲ್ಲುದೊಡ್ಡಿ ಅಧ್ಯಕ್ಷ, ಎಂ. ಆರ್.ಪವನ್‌ಕುಮಾರ್, ಸಂಜೀವ್‌ಶೆಟ್ಟಿ, ಮಹದೇವ್, ಆನಂದ್, ಸುಜಯ್‌ಕುಮಾರ್, ಪ್ರಸನ್ನ ಉಪಾಧ್ಯಕ್ಷರು, ಅಬಿಬ್‌ಸಾಬ್ ನಗರ ಕಾರ್ಯದರ್ಶಿ, ಆರ್.ಚೇತನ್ ಸಹ ಕಾರ್ಯದರ್ಶಿ, ರಂಗನಾಥ್ ಖಜಾಂಚಿ, ಶಂಕರೇಗೌಡ ಸಂಘಟನಾ ಕಾರ್ಯದರ್ಶಿ, ಅಶೋಕ್, ರಾಜೇಶ್, ಹರಿಶಂಕರ್, ಪಾಲಾಕ್ಷ, ಅಪ್ಪು, ಜೀವನ್, ಅಜಯ್‌ಕು ಮಾರ್, ಅಜಿತ್, ವಿಶ್ವ, ಸುಮನ್, ಸತೀಶ್, ರೋಷನ್, ಪ್ರಸನ್ನ ನಿರ್ದೇಶಕರು.

ಈ ಸಂದರ್ಭದಲ್ಲಿ ಕನ್ನಡಸೇನೆ ಜಿಲ್ಲಾ ವಕ್ತಾರ ಹುಣಸೇಮಕ್ಕಿ ಲಕ್ಷ್ಮಣ್, ಜಿಲ್ಲಾ ಸಂಘಟನಾ ಕಾರ್ಯ ದರ್ಶಿ ಕಳವಾಸೆ ರವಿ, ನಗರ ನಿಕಟಪೂರ್ವ ಅಧ್ಯಕ್ಷ ಪ್ರವೀಣ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷ ಚೈತ್ರಗೌಡ ಮತ್ತಿತರರು ಉಪಸ್ಥಿತರಿದ್ದರು.

## ಉದ್ಯೋಗ ಆಕಾಂಕ್ಷಿಗಳಿಗೆ ಗುಡ್ ನ್ಯೂಸ್

# ಕೆಎಎಸ್ ನೇಮಕ ಪ್ರಕ್ರಿಯೆ ಮುಂದುವರಿಕೆಗೆ ಹೈಕೋರ್ಟ್ ಸಮ್ಮತಿ

**ಬೆಂಗಳೂರು:** ಸರಕಾರಿ ನೇಮಕಾತಿಯಲ್ಲಿ ಮೀಸಲು ಜಾರಿ ಸಂಬಂಧ ನಿಯಮ ಉಲ್ಲಂಘನೆಯಾಗಿದೆಯೆಂದು 348 ಕೆಎಎಸ್ ಅಧಿಕಾರಿಗಳ ನೇಮಕ ಕುರಿತ ಅಧಿಸೂಚನೆ ರದ್ದುಗೊಳಿಸಿದ್ದ ಕೆಎಟಿ ಆದೇಶ ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಮೇಲ್ಮನವಿ ಆಲಿಸಿದ ಹೈಕೋರ್ಟ್, ಕೆಎಎಸ್ ನೇಮಕ ಪ್ರಕ್ರಿಯೆ ಮುಂದುವರಿಸಲು ಸಮ್ಮತಿಸಿದೆ.

ಇದರಿಂದಾಗಿ ಅತಂತ್ರಕ್ಕೆ ಸಿಲುಕಿದ್ದ ನೇಮಕಾತಿಯನ್ನು ಮತ್ತೆ ಮುಂದುವರಿಸಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಹಸಿರು ನಿಶಾನೆ ದೊರೆತಂತಾಗಿದೆ. ಮುಖ್ಯ ಪರೀಕ್ಷೆ ಬರೆದು ನೇಮಕಕ್ಕೆ ಚಾತಕ ಪಕ್ಷಿಗಳಂತೆ ಕಾಯುತ್ತಿದ್ದ ಅಭ್ಯರ್ಥಿಗಳು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.




ಕೆಎಟಿ ಕಳೆದ ಮೇ 28ರಂದು ನೀಡಿದ್ದ ಆದೇಶ ಪ್ರಶ್ನಿಸಿ ಸರಕಾರ ಸಲ್ಲಿಸಿದ್ದ ಮೇಲ್ಮನವಿಯನ್ನು ಆಲಿಸಿದ ನ್ಯಾ. ಡಿ.ಕೆ. ಸಿಂಗ್ ಮತ್ತು ನ್ಯಾ. ವೆಂಕಟೇಶ್ ಟಿ. ನಾಯಕ್ ಅವರಿದ್ದ ವಿಭಾಗೀಯಪೀಠ ಈ ಮಧ್ಯಂತರ ಆದೇಶವನ್ನು ಮಾಡಿದೆ.

ವಾದ–ಪ್ರತಿವಾದ ಆಲಿಸಿದ ನ್ಯಾಯಾಲಯ ಮೂಲ ಅರ್ಜಿದಾರರಾದ ಬಿ.ಎನ್. ಮಧು, ಕರ್ನಾಟಕ ಲೋಕಸೇವಾ ಆಯೋಗ ಸೇರಿದಂತೆ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿ ಮೂರು ವಾರಗಳಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಸೂಚನೆ ನೀಡಿತು. ಅಲ್ಲದೆ, ಪ್ರತಿವಾದಿಗಳು ಸಲ್ಲಿಸಿದ ಆಕ್ಷೇಪಣೆಗೆ ಸರಕಾರದ ಪ್ರತಿ ಆಕ್ಷೇಪಣೆಗಳಿದ್ದರೆ ಒಂದು ವಾರದಲ್ಲಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿರುವ ನ್ಯಾಯಾಲಯ ವಿಚಾರಣೆಯನ್ನು ಐದು ವಾರ ಮುಂದೂಡಿದೆ.

ಅಲ್ಲದೆ, ಕೆಎಎಸ್ ನೇಮಕ ಪ್ರಕ್ರಿಯೆ ಮುಂದುವರಿಸಲು ಕೆಪಿಎಸ್‌ಸಿಗೆ ನ್ಯಾಯಾಲಯ ಅನುಮತಿ ನೀಡಿದೆ. ಆದರೆ ಆಯ್ಕೆ ಪಟ್ಟಿಯ ಫಲಿತಾಂಶವನ್ನು ನ್ಯಾಯಾಲಯದ ಅನುಮತಿ ಇಲ್ಲದೆ ಪ್ರಕಟಿಸುವಂತಿಲ್ಲ ಎಂದು ಮಧ್ಯಂತರ ಆದೇಶ ನೀಡಿದೆ. ಅಲ್ಲದೆ, ಎಲ್ಲ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿ ಆಕ್ಷೇಪಣೆ ಸಲ್ಲಿಸುವಂತೆ ಸೂಚಿಸಿದೆ.

**ಪ್ರಕರಣದ ಹಿನ್ನೆಲೆ :** ಈ ಹಿಂದಿನ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರಕಾರ 2022ರಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಶೈಕ್ಷಣಿಕ ಸಂಸ್ಥೆಗಳಲ್ಲಿ ಸೀಟು ಹಂಚಿಕೆ ಮೀಸಲು ಮತ್ತು ರಾಜ್ಯ ಸೇವೆಯಲ್ಲಿ ನೇಮಕ ಹುದ್ದೆಗಳಿಗೆ ಮೀಸಲು) ಸುಗ್ರೀವಾಜ್ಞೆ ಜಾರಿಗೊಳಿಸಿತ್ತು. ಅದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮೀಸಲಾತಿ ಪ್ರಮಾಣ ಶೇ. 18ರಿಂದ ಶೇ. 24ಕ್ಕೆ ಹೆಚ್ಚಿಸಿತ್ತು. ಅದನ್ನು ಆಧರಿಸಿ ಕರ್ನಾಟಕ ಸರಕಾರಿ ಸೇವೆಯಲ್ಲಿ ರೋಸ್ಟರ್ ಮೀಸಲು ನಿಗದಿಪಡಿಸಲಾಯಿತು. ಆನಂತರ ಅದನ್ನು ಆಧರಿಸಿ ಕೆಪಿಎಸ್‌ಸಿ 384 ಗ್ರೂಪ್ 'ಎ' ಮತ್ತು 'ಬಿ' ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಕ್ಕೆ ಅಧಿಸೂಚನೆ ಹೊರಡಿಸಿತ್ತು.

ಅದನ್ನು ಪ್ರಶ್ನಿಸಿ ರಾಮನಗರ ಜಿಲ್ಲೆಯ ಚನ್ನಪಟ್ಟಣದ ಬಿ.ಎನ್. ಮಧು ಸಲ್ಲಿಸಿದ್ದ ಅರ್ಜಿ ಪರಿಶೀಲಿಸಿದ ಕೆಎಟಿ ಅಧ್ಯಕ್ಷ ನ್ಯಾ. ಬಿ.ಆರ್. ಬೂದಿಹಾಳ್ ಹಾಗೂ ಆಡಳಿತ ಸದಸ್ಯ ರಾಘವೇಂದ್ರ ಔರಾದ್ಕರ್ ಅವರಿದ್ದ ನ್ಯಾಯಪೀಠ, ಕಳೆದ ಮೇ 28ರಂದು ಆದೇಶ ನೀಡಿತ್ತು. ಸರಕಾರಿ ನೇಮಕಾತಿಗಳಲ್ಲಿ ಮೀಸಲು ಪ್ರಮಾಣವನ್ನು ಶೇ. 50ರಿಂದ ಶೇ. 56ಕ್ಕೆ ಹೆಚ್ಚಳ ಮಾಡಿದ ರಾಜ್ಯ ಸರಕಾರದ ಆದೇಶದ ಆಧಾರದ ಮೇಲೆ ಕರ್ನಾಟಕ ಲೋಕಸೇವಾ ಆಯೋಗ 2024ರ ಫೆ. 26ರಂದು ಹೊರಡಿಸಿದ್ದ 384 ಗೆಜೆಟೆಡ್ ಪ್ರೊಬೇಷನರ್ ನೇಮಕ ಅಧಿಸೂಚನೆಯನ್ನು ಕೆಎಟಿ ರದ್ದುಪಡಿಸಿತ್ತು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**